24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehaliwarthe.com

ನವಂಬರ್ 8, 2026, ಭಾನುವಾರ

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 133 | ನವದೆಹಲಿ | ಬೆಲೆ ₹10



ನಾಡಿನ ಸಮಸ್ತ ಜನತೆಗೆ, ಓದುಗರಿಗೆ ಹಿತೈಷಿಗಳಿಗೆ ಬೆಳಕಿನ ಹಬ್ಬ ದೀಪಾವಳಿಯ ಶುಭಾಶಯಗಳು

ಕಚೇರಿಗೆ ಜಿಡುವು

ಹಬ್ಬದ ಪ್ರಯುಕ್ತ ಕಚೇರಿಗೆ ಭಾನುವಾರ ಬಿಡುವು ಇರುವುದರಿಂದ 9-11-2026ರ ಸಂಚಿಕೆ ಪ್ರಕಟವಾಗುವುದಿಲ್ಲ.

- ಸಂಪಾದಕರು

ಒಳಪುಟಗಳಲ್ಲಿ

ರಾ.ಹೆ.ಎಕ್ಸ್‌ಪ್ರೆಸ್ ವೇನಲ್ಲಿ ಶೇ.20 ವೇಗದ ವ್ಯತ್ಯಾಸಕ್ಕೆ ದಂಡವಿಲ್ಲ: ವಾಹನ ಸವಾರರಿಗೆ ಗಡ್ಕರಿ ಶುಭಸುದ್ದಿ - ಪು.4

ಗ್ರೀಕ್ ಥೀಮ್‌ನ ಸಲಾಂ ಸೂಕ್‌ಗೆ ಪ್ರವಾಸೋದ್ಯಮ ಫಲಾಖಿ ಸಹಯೋಗ: ಸಚಿವ ಕೆ.ಹೆ. ಜಾರ್ಜ್ - ಪು.5

ಮೇಕೆದಾಟು ಯೋಜನೆಗೆ ಅನುಮತಿ ಬೇಡ: ಪ್ರಧಾನಿಗೆ ತಮಿಳುನಾಡು ಸಿಎಂ ಆಗ್ರಹ

ಕೆಳಹರಿವಿನ ರಾಜ್ಯಗಳ ಒಪ್ಪಿಗೆ ಕಡ್ಡಾಯಗೊಳಿಸಲು ಮನವಿ

ಕೇಂದ್ರ ಅಧಿಕಾರಿಗಳ ಸ್ಥಳ ಪರಿಶೀಲನೆಗೆ ಆಕ್ಷೇಪ

ಚೆನ್ನೈ, ನ.1: ಕಾವೇರಿ ನದಿಗೆ ಅಡ್ಡಲಾಗಿ ಕರ್ನಾಟಕ ಸರ್ಕಾರ ಉದ್ದೇಶಿಸಿರುವ ಮೇಕೆದಾಟು ಅಣೆಕಟ್ಟು ಯೋಜನೆಗೆ ಕೆಳಪರಿವಿನ ರಾಜ್ಯಗಳ ಒಪ್ಪಿಗೆ ಇಲ್ಲದೆ ಯಾವುದೇ ಶಾಸನಬದ್ಧ ಅಥವಾ ಆಡಳಿತಾತ್ಮಕ ಅನುಮತಿ ನೀಡಬಾರದು ಎಂದು ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ.



ಪ್ರಧಾನಿ ಅವರಿಗೆ ಬರೆದಿರುವ ಪತ್ರದಲ್ಲಿ, ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ಅಧಿಕಾರಿಗಳು ಉದ್ದೇಶಿತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಅವರು, ಇಂತಹ ಪರಿಶೀಲನೆಗಳು ಯೋಜನೆ ಮುಂದುವರಿಯುವ ಸೂಚನೆಯಾಗಿರಬಹುದು ಎಂಬ ಆತಂಕ ಕಾವೇರಿ ಕಣಿವೆ ಭಾಗದ ರೈತರಲ್ಲಿ ಹೆಚ್ಚಾಗಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಮತ್ತು ತಮಿಳುನಾಡು ನಡುವಿನ ಅಂತರರಾಜ್ಯ ಗಡಿಗೆ ಸ್ವಲ್ಪ ಮೇಲ್ಭಾಗದಲ್ಲಿ 67.16 ಟಿಎಂಸಿ ಸಾಮರ್ಥ್ಯದ ಜಲಾಶಯ ನಿರ್ಮಿಸಲು ಕರ್ನಾಟಕ ಸರ್ಕಾರ ಉದ್ದೇಶಿಸಿದೆ. ಈ ಯೋಜನೆಯಿಂದ ತಮಿಳುನಾಡಿಗೆ ಹರಿದುಬರಬೇಕಾದ ಕಾವೇರಿ ನೀರಿನ ಪ್ರಮಾಣಕ್ಕೆ ಅಡ್ಡಿಯಾಗುವುದಲ್ಲದೆ, ಸುಪ್ರೀಂ ಕೋರ್ಟ್ ನಿಗದಿಪಡಿಸಿರುವ ಮಾಸಿಕ ನೀರು ಹಂಚಿಕೆ ಮೇಲೆಯೂ ಪರಿಣಾಮ ಬೀರಲಿದೆ ಎಂಬ ಆತಂಕ ವ್ಯಕ್ತಪಡಿಸಿದ್ದಾರೆ.



ಕರ್ನಾಟಕ ಮುಖ್ಯಮಂತ್ರಿ ಅವರು ಕೇಂದ್ರ ಜಲಶಕ್ತಿ ಸಚಿವಾಲಯ ಹಾಗೂ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ಅಧಿಕಾರಿಗಳನ್ನು ಭೇಟಿ ಮಾಡಿ ಮೇಕೆದಾಟು ಯೋಜನೆಯ ವಿಸ್ತೃತ ಯೋಜನಾ ವರದಿಗೆ (ಡಿಪಿಆರ್) ಅನುಮತಿ ಪಡೆಯಲು ಪ್ರಯತ್ನಿಸುತ್ತಿದ್ದಾರೆ ಎಂಬ ವರದಿಗಳು ತಮಿಳುನಾಡಿನ ರೈತರಲ್ಲಿ ಆತಂಕ ಮೂಡಿಸಿವೆ ಎಂದಿದ್ದಾರೆ.

2026-27ರ ನೀರಿನ ಹೊರತೆಯ ವರ್ಷದಲ್ಲಿ ಕರ್ನಾಟಕವು ಅನುಪಾತದ ಆಧಾರದಲ್ಲಿಯೂ ತಮಿಳುನಾಡಿಗೆ ಸಲ್ಲಬೇಕಾದ ನೀರನ್ನು ಬಿಡುಗಡೆ ಮಾಡುತ್ತಿಲ್ಲ. ಈಗಾಗಲೇ ನೀರಿನ ಅಭಾವದಿಂದ ಸಂಕಷ್ಟದಲ್ಲಿರುವ ಕಾವೇರಿ ಕಣಿವೆ ರೈತರ ಆತಂಕವನ್ನು ಕೇಂದ್ರ ಅಧಿಕಾರಿಗಳ ಸ್ಥಳ ಪರಿಶೀಲನೆ ಮತ್ತಷ್ಟು ಹೆಚ್ಚಿಸಿದೆ ಎಂದು ಹೇಳಿದ್ದಾರೆ. ಈ ಹಿಂದೆ ಜುಲೈ 28, 2026ರಂದು ಬರೆದಿದ್ದ ಪತ್ರವನ್ನೂ ಪ್ರಧಾನಿ ಅವರ ಗಮನಕ್ಕೆ ತರುವಿಯ ವಿಜಯ್, ಕಾವೇರಿ ಜಲ ವಿವಾದಗಳ ನ್ಯಾಯಮಂಡಳಿಯ ಅಂತಿಮ ತೀರ್ಪು ಹಾಗೂ 2018ರ ಫೆಬ್ರವರಿ 16ರ ಸುಪ್ರೀಂ ಕೋರ್ಟ್ ತೀರ್ಪಿಗೆ ಯೋಜನೆ ಅನುಗುಣವಾಗಿದೆ ಎಂಬುದು ಸ್ಪಷ್ಟವಾಗುವವರೆಗೆ ಯಾವುದೇ ಅನುಮತಿ ನೀಡಬಾರದು ಎಂದು ಒತ್ತಾಯಿಸಿದ್ದಾರೆ.

ಪ್ರಮುಖ ಬೇಡಿಕೆಗಳು

- ಒಪ್ಪಿಗೆ ಇಲ್ಲದೆ ಮೇಕೆದಾಟು ಯೋಜನೆಗೆ ಯಾವುದೇ ಸ್ಥಳ ಪರಿಶೀಲನೆ, ತಾಂತ್ರಿಕ ಮೌಲ್ಯಮಾಪನ ಅಥವಾ ಶಾಸನಬದ್ಧ ಹಾಗೂ ಆಡಳಿತಾತ್ಮಕ ಅನುಮತಿ ನೀಡದಂತೆ ಕೇಂದ್ರ ಜಲಶಕ್ತಿ ಮತ್ತು ಪರಿಸರ ಸಚಿವಾಲಯಗಳಿಗೆ ಸೂಚಿಸಬೇಕು.
- ಕೇಂದ್ರ ಜಲಶಕ್ತಿ ಸಚಿವಾಲಯ ಈಗಾಗಲೇ ಸ್ಥಳ ಪರಿಶೀಲನೆ ನಡೆಸಿದ್ದರೆ, ಅದರಿಂದ ಮುಂದುವರಿಯಬಹುದಾದ ಆಡಳಿತಾತ್ಮಕ ಮತ್ತು ತಾಂತ್ರಿಕ ಪ್ರಕ್ರಿಯೆಗಳನ್ನು ತಡೆಹಿಡಿಯಬೇಕು. ಹಾಗೂ ಕಾವೇರಿ ಜಲಾನಯನ ಪ್ರದೇಶದ ಸಂಬಂಧಿತ ರಾಜ್ಯಗಳ ಒಪ್ಪಿಗೆ ಪಡೆಯದೆ ಯೋಜನೆಯನ್ನು ಮುಂದುವರಿಸದಂತೆ ಕರ್ನಾಟಕಕ್ಕೆ ಸೂಚಿಸಬೇಕು
- ಕಾವೇರಿ ನದಿಯ ನೀರಿನ ಪ್ರಮಾಣದಲ್ಲಿ ಕೆಳಹರಿವಿನ ರಾಜ್ಯಗಳಿಗೆ ಸಲ್ಲಬೇಕಾದ ಪಾಲು ಹಾಗೂ ಪ್ರತಿ ತಿಂಗಳು ನೀರು ಬಿಡುಗಡೆ ಮಾಡುವ ನಿಯಮಿತ ವ್ಯವಸ್ಥೆಯನ್ನೂ ರಕ್ಷಿಸುವುದು

ಕರ್ನಾಟಕ ಸೇರಿ ಐದು ದಕ್ಷಿಣ ರಾಜ್ಯಗಳಿಗೆ ಹೆಚ್ಚು ಭಾರತ್ ರೈಸ್

ನವದೆಹಲಿ, ನ.7: ಕೇಂದ್ರ ಸರ್ಕಾರ ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳಿಗೆ 'ಭಾರತ್ ರೈಸ್' ಅನ್ನು ಹೆಚ್ಚುವರಿ ಹಂಚಿಕೆ ಮಾಡಿದ್ದು, ಜತೆಗೆ ಮೂರು ತಿಂಗಳ ಕಾಲ ಅಕ್ಕಿ ಮತ್ತು ಭತ್ತದ ದಾಸ್ತಾನು ಮಿತಿ ವಿಧಿಸಲು ರಾಜ್ಯಗಳಿಗೆ ಅನುಮತಿ ಸಹ ನೀಡಿದೆ.



ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಈ ಬಗ್ಗೆ ಮಾಹಿತಿ ನೀಡಿದ್ದು, ಅಗತ್ಯವಿರುವ ಕಡೆ 2027ರ ಜನವರಿ 31ರ ವರೆಗೆ ಅಕ್ಕಿ ಮತ್ತು ಭತ್ತದ ಮೇಲೆ ದಾಸ್ತಾನು ಮಿತಿ ವಿಧಿಸಲು ದಕ್ಷಿಣದ 5 ರಾಜ್ಯಗಳಿಗೆ ಅನುಮತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರ ಆಹಾರ ಧಾನ್ಯಗಳ, ವಿಶೇಷವಾಗಿ ಅಕ್ಕಿ ಬೆಲೆಯನ್ನು ಅತಿ ಸೂಕ್ಷ್ಮವಾಗಿ ಗಮನಿಸುತ್ತಿದ್ದು, ದೇಶೀಯವಾಗಿ ಸಾಕಷ್ಟು ಪೂರೈಕೆ ಇರುವಿಕೆ ಮತ್ತು ಬೆಲೆ ಸ್ಥಿರತೆ ಕಾಯ್ದುಕೊಳ್ಳಲು, ಅಕ್ರಮ ದಾಸ್ತಾನು ಕಡೆಯಲು ಮತ್ತು ಗ್ರಾಹಕರ ಹಿತಾಸಕ್ತಿ ರಕ್ಷಣೆಗಾಗಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದೆ ಎಂದಿದ್ದಾರೆ.

ದೇಶಾದ್ಯಂತ ಅದರಲ್ಲೂ ವಿಶೇಷವಾಗಿ ದಕ್ಷಿಣ ರಾಜ್ಯಗಳಲ್ಲಿ ಅಕ್ಕಿ ಲಭ್ಯತೆ ಹೆಚ್ಚಿಸಲು NAFED, NCCF ಮತ್ತು ಕೇಂದ್ರೀಯ ಭಂಡಾರ್‌ಗೆ 'ಭಾರತ್ ರೈಸ್' ಅನ್ನು ಹೆಚ್ಚುವರಿಯಾಗಿ ಹಂಚಿಕೆ ಮಾಡಲಾಗಿದೆ. ಅಲ್ಲದೆ, ಗ್ರಾಹಕರಿಗೆ ಸುಲಭವಾಗಿ ಭಾರತ್ ಆಕ್ಕಿ' ಕೈಸೇರುವಂತೆ ಮಾಡಲು ಹಾಗೂ ವಿತರಣಾ ವ್ಯವಸ್ಥೆ ವಿಸ್ತರಿಸಲು ಈ ಮೂರೂ ಸಂಸ್ಥೆಗಳಿಗೆ ಸೂಚನೆ ಸಹ ನೀಡಲಾಗಿದೆ ಎಂದು ಸಚಿವರು ಹೇಳಿದ್ದಾರೆ. 2026-27ನೇ ಸಾಲಿಗೆ ಮುಕ್ತ ಮಾರುಕಟ್ಟೆ ಮಾರಾಟ ಯೋಜನೆ (OMSS-D)ಅಡಿಯಲ್ಲಿ ಅಕ್ಕಿ ಮಾರಾಟದ ಗುರಿಯನ್ನು ಕೇಂದ್ರ ಸರ್ಕಾರ ದ್ವಿಗುಣಗೊಳಿಸಿದೆ. 25 ಲಕ್ಷ ಮೆಟ್ರಿಕ್ ಟನ್ ಇದ್ದುದನ್ನು ಇದೀಗ 50 LMTಗೆ ಹೆಚ್ಚಿಸಿದೆ. 2026ರ ಅಕ್ಟೋಬರ್ 31ರವರೆಗೆ ಇ-ಹರಾಜಿನ ಮೂಲಕ ಈಗಾಗಲೇ 25 LMT ಅಕ್ಕಿ ಮಾರಾಟ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

...4ನೇ ಪುಟಕ್ಕೆ

ದಾಸ್ತಾನು ಮಿತಿ, ನಿಯಮ ಮೀರಿದರೆ ಕ್ರಮ

ಬಾಸುಮತಿ ಅಕ್ಕಿ, ಬಾಸುಮತಿ ಅಲ್ಲದ ಪ್ರೀಮಿಯಂ ಅಕ್ಕಿ, ಬಾಸುಮತಿ ಅಲ್ಲದ ಅಕ್ಕಿ, ಬೇಯಿಸಿದ ಅಕ್ಕಿ, ನುಚ್ಚಕ್ಕಿ ಮತ್ತು ಭತ್ತದ ದಾಸ್ತಾನು ಮಾಹಿತಿ ನೀಡುತ್ತಿರಬೇಕು. ಅಕ್ಕಿ ಮತ್ತು ಭತ್ತ ಸಂಗ್ರಹಿಸಿರುವ ಎಲ್ಲಾ ಸಂಸ್ಥೆಗಳು ಪ್ರತಿ ಶುಕ್ರವಾರ 'ಫುಡ್ ಸ್ಟಾಕ್ ಪೋರ್ಟಲ್' https://foodstock.dfpd.gov.inನಲ್ಲಿ ದಾಸ್ತಾನು ವಿವರವನ್ನು ಕಡ್ಡಾಯವಾಗಿ ಬಹಿರಂಗಪಡಿಸಬೇಕು. ಈ ಮಾಹಿತಿ ನಿಖರವಾಗಿದೆಯೇ ಮತ್ತು ನಿಯಮಿತವಾಗಿ ನವೀಕರಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳದಿದ್ದರೆ ಅಥವಾ ನಿಗದಿಪಡಿಸಿದ ದಾಸ್ತಾನು ಮಿತಿ ಉಲ್ಲಂಘಿಸಿದರೆ ಅಂತಹ ಸಂಸ್ಥೆಗಳ ವಿರುದ್ಧ 'ಅಗತ್ಯ ಸರಕುಗಳ ಕಾಯಿದೆ, 1955'ರ ಸೆಕ್ಷನ್ 6 ಮತ್ತು 7ರಡಿ ದಂಡ ವಿಧಿಸಲಾಗುವುದು ಎಂದೂ ಸಚಿವರು ಎಚ್ಚರಿಕೆ ನೀಡಿದ್ದಾರೆ.

ದೇಶದ ಜನತೆಗೆ ದೀಪಾವಳಿ ಶುಭಾಶಯ ಕೋರಿದ ಪ್ರಧಾನಿ ಮೋದಿ

ಸೈನಿಕರೊಂದಿಗೆ ಹಬ್ಬ ಆಚರಿಸುವ ಸಂಪ್ರದಾಯ ಮುಂದುವರಿಕೆ

ನವದೆಹಲಿ, ನ.7: ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ ದೇಶದ ಜನತೆಗೆ ದೀಪಾವಳಿ ಹಬ್ಬದ ಶುಭಾಶಯ ಕೋರಿದ್ದಾರೆ. ದೀಪಾವಳಿಯ ಮುನ್ನಾ ದಿನದಂದು ದೇಶವು ದೀಪಗಳಿಂದ ಬೆಳಗುತ್ತಿದ್ದು, ಇದು ಕತ್ತಲೆ ವಿರುದ್ಧ ಹೋರಾಡುವ ದೇಶದ ದೃಢ ಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. 'ನಿಮ್ಮೆಲ್ಲರಿಗೂ ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು. ಮುಂಬರುವ ದಿನಗಳಲ್ಲಿ ನಿಮ್ಮೆಲ್ಲರ ಜೀವನದಲ್ಲಿ ಶಾಂತಿ, ಸಮೃದ್ಧಿ ಮತ್ತು ಸಂತೋಷ ನೆಲೆಸಲಿ ಎಂದು ಹಾರೈಸುತ್ತೇನೆ. ನಿಮ್ಮಂತೆಯೇ ನಾನೂ ಕೂಡ ದೀಪಾವಳಿಯನ್ನು ಅತ್ಯಂತ ಉತ್ಸಾಹದಿಂದ ಆಚರಿಸುತ್ತೇನೆ' ಎಂದು ನುಡಿದರು. 'ನಿಮಗೆಲ್ಲರಿಗೂ ತಿಳಿದಿರುವಂತೆ, ನಮ್ಮ ದೇಶದ ವೀರಸೈನಿಕರೊಂದಿಗೆ ಹಬ್ಬವನ್ನು ಕಳೆಯುವುದು ನನ್ನ ವಾರ್ಷಿಕ ಸಂಪ್ರದಾಯವಾಗಿದೆ. ಈ ವರ್ಷವೂ ಅದನ್ನು ಮುಂದುವರಿಸಲಿದ್ದೇನೆ ಎಂದರು.



ದೀಪಾವಳಿ ಹಬ್ಬದ ಮುನ್ನಾದಿನವಾದ ಶನಿವಾರ ಪ್ರಧಾನಿ ಮೋದಿ ಉಪರಾಷ್ಟ್ರಪತಿ ಭವನದಲ್ಲಿ ಪೂಜೆಯಲ್ಲಿ ಭಾಗಿಯಾದರು. ಉಪರಾಷ್ಟ್ರಪತಿ ರಾಧಾಕೃಷ್ಣನ್ ಇದ್ದರು.



ಶ್ರೀ ಡಿ.ಕೆ. ಶಿವಕುಮಾರ್
ನಮ್ಮನ್ನ ಮುಖ್ಯಮಂತ್ರಿಗಳು



ಡಾ. ಜಿ. ಪರಮೇಶ್ವರ
ನಮ್ಮ ಉಪ ಮುಖ್ಯಮಂತ್ರಿಗಳು

ಕರ್ನಾಟಕ ಸೋಪ್ಸ್ & ಡಿಟರ್ಜೆಂಟ್ಸ್ ಲಿಮಿಟೆಡ್
(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ಬೆಂಗಳೂರು



ಶ್ರೀಯುತ ಡಿ.ಕೆ. ಶಿವಕುಮಾರ್ ಅವರನ್ನು ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಮತ್ತು ಜವಳಿ ಸಚಿವರಾದ ಶ್ರೀ ಎಂ.ಬಿ ಪಾಟೀಲ್ ಅವರನ್ನು ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ನಿಯಮಿತದ ಮುಖ್ಯ ಅಧ್ಯಕ್ಷರಾದ ಶ್ರೀ ಸಿ ಎಸ್ ಅಮರ್ನಾಥ ಪಾಟೀಲ್ ಅವರು ಸ್ವಾಗತಿಸುತ್ತಿರುವುದು

ಈ ದೀಪಾವಳಿಯು
ನಿಮ್ಮ ಮನೆಯನ್ನು ಸಾಂಪ್ರದಾಯಿಕ
ಪರಿಮಳದಿಂದ ತುಂಬಲಿ





100%
ಪರಿಶುದ್ಧ ಸೌಸಗೀ
ಶ್ರೀಗಂಧದೆಣ್ಣೆಯುಕ್ತ
ಸಾಬೂನು

ನಿತ್ಯ ಪಂಚಾಂಗ 8.11.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಬಹುಳ, ಚತುರ್ದಶಿ, ಸ್ವಾತಿ ನಕ್ಷತ್ರ, ನರಕ ಚತುರ್ದಶಿ, ದೀಪಾವಳಿ. ಲಕ್ಷ್ಮೀಪೂಜೆ, ಧರ್ಮಸ್ಥಳ ದೇವರು ಹೊರಡುವುದು, ಕೊಡಗು ಗುಹ್ಯಜಾತ್ರೆ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30

ಎಲ್ಲಾ ಹಂತದ ನಾಯಕರು ಪಕ್ಷ ನಿಷ್ಠರಾಗಿರಬೇಕು: ಕಾಂಗ್ರೆಸ್ ಹೈಕಮಾಂಡ್ ಸೂಚನೆ

ಬೆಂಗಳೂರು, ನ.7– ಕಾರ್ಯಕರ್ತರಿಂದ ಹಿಡಿದು ಉನ್ನತ ಮಟ್ಟದ ನಾಯಕರವರೆಗೂ ಎಲ್ಲರೂ ಪಕ್ಷಕ್ಕೆ ನಿಷ್ಠರಾಗಿರಬೇಕು, ಪಕ್ಷಕ್ಕಾಗಿ ಕೆಲಸ ಮಾಡಬೇಕು ಎಂಬ ಸಂದೇಶವನ್ನು ಹೈಕಮಾಂಡ್ ನೀಡಿದೆ ಎಂದು ಹೇಳುವ ಮೂಲಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾಂಗ್ರೆಸ್‌ನಿಂದ ಒಂದು ಕಾಲು ಹೊರಗಿಟ್ಟವರಿಗೆ ಖಡಕ್ ಸಂದೇಶ ನೀಡಿದ್ದಾರೆ.

ದೆಹಲಿಯಲ್ಲಿ ನಡೆದ ದೀಪಾವಳಿ ಸಮ್ಮಿಲನ ಕಾರ್ಯಕ್ರಮದಲ್ಲಿ ಲೋಕ ಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಎಲ್ಲಾ ರಾಜ್ಯಗಳ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರು, ಶಾಸಕಾಂಗ ಪಕ್ಷದ ನಾಯಕರ ಜೊತೆಗೆ ಸಮಾಲೋಚನೆ ನಡೆಸಿದರು.

ಈ ವೇಳೆ ಎಸ್‌ಐಆರ್ ಕುರಿತ ಹೋರಾಟವನ್ನು ಮುಂದೆ ತೆಗೆದುಕೊಂಡು ಹೋಗುವ ಬಗ್ಗೆ ಚರ್ಚೆಗಳಾಗಿವೆ. ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡುವ



ವೇಳೆಯಲ್ಲಿ ಡಿ.ಕೆ.ಶಿವಕುಮಾರ್ ಎಲ್ಲಾ ಹಂತದ ನಾಯಕರು, ಕಾರ್ಯಕರ್ತರು ಪಕ್ಷಕ್ಕಾಗಿ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆಯ ಬಳಿಕ ರಾಜಕೀಯವಾಗಿ ಮಹತ್ವದ ಬೆಳವಣಿಗೆಗಳಾಗಿವೆ. ಸಿದ್ದರಾಮಯ್ಯ ಬೆಂಬಲಿಗರೆಂದು ಗುರುತಿಸಿಕೊಂಡಿರುವ ಕೆ.ಎನ್.ರಾಜಣ್ಣ ಸೇರಿದಂತೆ ಹಲವಾರು ಮಂದಿ ಬೇರೆ ಪಕ್ಷಗಳ ನಾಯಕರ ಜೊತೆ ಸಂಪರ್ಕದಲ್ಲಿದ್ದಾರೆ. ರಾಜ್ಯ ಗುಪ್ತದಳ ಈ ಬಗ್ಗೆ ಮುಖ್ಯಮಂತ್ರಿಯವರಿಗೆ ವರದಿ ನೀಡಿದ್ದು ಸುಮಾರು 50ಕ್ಕೂ ಹೆಚ್ಚು ಶಾಸಕರು ಪಕ್ಷಾಂತರಕ್ಕೆ ಸಿದ್ಧವಾಗಿದ್ದಾರೆ ಎಂಬ ಮಾಹಿತಿ ನೀಡಿದೆ. ಕೆಲ ಪ್ರಮುಖ ನಾಯಕರು ಕೂಡ ಕಾಂಗ್ರೆಸ್ ತೊರೆಯಲು ವೇದಿಕೆ ಸಿದ್ಧ ಮಾಡಿಕೊಳ್ಳುತ್ತಿದ್ದಾರೆ ಎಂದು ಮುನ್ಸೂಚನೆ ನೀಡಿದೆ.

ಶಾಸಕರ ಪೂರ್ವಾಪರ ಹಾಗೂ ಅವರು ಯಾರ ಸಂಪರ್ಕದಲ್ಲಿದ್ದಾರೆ, ಕ್ಷೇತ್ರದಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಜೊತೆ ಅವರಿಗಿರುವ ಸಂಬಂಧ ಕುರಿತು ಮಾಹಿತಿ ಕಲೆ ಹಾಕುತ್ತಿದ್ದಾರೆ. ಒಂದು ವೇಳೆ ಪಕ್ಷ ತೊರೆಯುವುದು ಖಚಿತ ಎಂದಾದರೆ ಅವರನ್ನು ಸರ್ಕಾರ ಹಾಗೂ ಪಕ್ಷದ ಎಲ್ಲಾ ಹುದ್ದೆಗಳಿಂದಲೂ ದೂರ ಇಡಲು ತಂತ್ರಗಾರಿಕೆ ರೂಪಿಸಲಾಗುತ್ತಿದೆ.

ಎರಡನೇ ಅವಧಿಗೆ ನಿಗಮ–ಮಂಡಲಿಗಳ ನೇಮಕಾತಿ ನನೆಗುದಿಗೆ ಬೀಳಲು ಇದೂ ಕೂಡ ಕಾರಣ ಎಂದು ಹೇಳಲಾಗಿದೆ. ನಾಯಕರ ಹಿಂಬಾಲಕರ ಬದಲಿಗೆ, ಪಕ್ಷ ನಿಷ್ಠರನ್ನು ಮಾತ್ರ ಪರಿಗಣಿಸಿ, ನಿಗಮ ಮಂಡಲಿಗಳು ಹಾಗೂ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಲು ಚರ್ಚೆಗಳಾಗಿವೆ.

ಹಿಂದೆ 2023ರ ವಿಧಾನಸಭೆ ಚುನಾವಣೆಯಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿದ್ದ ಡಿ.ಕೆ.ಶಿವಕುಮಾರ್, ಪಕ್ಷ ಬಲವರ್ಧನೆಗಾಗಿ ಬಿಜೆಪಿ ಸೇರಿದಂತೆ ಅನ್ಯಪಕ್ಷಗಳಲ್ಲಿದ್ದ ಪ್ರಬಲ ಅಭ್ಯರ್ಥಿಗಳನ್ನು ಕಾಂಗ್ರೆಸ್‌ಗೆ ಸೆಳೆದಿದ್ದರು. ಈಗ ಜೆಡಿಎಸ್ ನಾಯಕತ್ವ, ಬಿಜೆಪಿ ಜೊತೆ ಸೇರಿ ಅಂತಹದ್ದೇ ಕಾರ್ಯಾಚರಣೆಗೆ ಇಳಿದಿದೆ.ಇದರ ಮುನ್ಸೂಚನೆ ಅರಿತ ಮುಖ್ಯಮಂತ್ರಿಯವರು ವಲಸೆಗೆ ಸಿದ್ಧವಾಗಿರುವ ಶಾಸಕರು ಹಾಗೂ ಪ್ರಮುಖ ನಾಯಕರಿಗೆ ಯಾವುದೇ ಅಧಿಕಾರ ನೀಡಬಾರದು ಎಂಬ ನಿರ್ಧಾರಕ್ಕೆ ಬಂದಿದ್ದಾರೆ ಎನ್ನಲಾಗಿದೆ.

ಜಿಲ್ಲೆ ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ನೇಮಕಾತಿಗಾಗಿ ನಡೆಯುತ್ತಿರುವ ಸಂಘಟನ್ ಸೃಜನ್ ಅಭಿಯಾನ–2ರಲ್ಲಿ ಪ್ರಮುಖ ನಾಯಕರು ಮತ್ತು ಕಾರ್ಯಕರ್ತರ ಪಕ್ಷ ನಿಷ್ಠೆಯನ್ನು ಒರೆಗೆ ಹಚ್ಚಲಾಗುತ್ತಿದೆ ಎನ್ನಲಾಗಿದೆ.

ಪಕ್ಷದಿಂದ ವಲಸೆ ಹೊರಟಿರುವ ಮುಖಂಡರ ಬಗ್ಗೆ ಶುಕ್ರವಾರ ದೆಹಲಿಯಲ್ಲಿ ನಡೆದ ಸಭೆಯಲ್ಲಿ ಡಿ.ಕೆ.ಶಿವಕುಮಾರ್ ಹೈಕಮಾಂಡ್ ನಾಯಕರ ಗಮನಕ್ಕೆ ತಂದಿದ್ದಾರೆ. ಅಂತಹವರನ್ನು ಈಗಿನಿಂದಲೇ ದೂರವಿಟ್ಟು ಪರ್ಯಾಯ ನಾಯಕತ್ವ ಬೆಳೆಸುವಂತೆ ಹೈಕಮಾಂಡ್ ಸೂಚನೆ ನೀಡಿದೆ ಎನ್ನಲಾಗಿದೆ. ಅದಕ್ಕನುಗುಣವಾಗಿ ಡಿ.ಕೆ.ಶಿವಕುಮಾರ್ ಹೇಳಿಕೆ ನೀಡಿ, ಪರೋಕ್ಷ ಸಂದೇಶ ರವಾನಿಸಿದ್ದಾರೆ. ಎಲ್ಲರೂ ಪಕ್ಷಕ್ಕಾಗಿ ಕೆಲಸ ಮಾಡಬೇಕು, ಇಲ್ಲವಾದರೆ ಕಾಂಗ್ರೆಸ್ನಲ್ಲಿ ಸ್ಥಳವಿಲ್ಲ ಎಂಬ ಎಚ್ಚರಿಕೆ ನೀಡಿದ್ದಾರೆ.ಈ ಮೂಲಕ ಪಕ್ಷದಿಂದ ಒಂದು ಕಾಲ ಹೊರಗಿಟ್ಟವರಿಗೆ ಖಡಕ್ ಸಂದೇಶ ರವಾನೆಯಾಗಿದೆ.

ಘಾಟಿ ಸುಬ್ರಹ್ಮಣ್ಯಕ್ಕೆ ಸಚಿವ ಮುನಿಯಪ್ಪ ಭೇಟಿ



ದೊಡ್ಡಬಳ್ಳಾಪುರ. ನ.7: ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ ಪ್ರಸಿದ್ಧ ಶ್ರೀಕ್ಷೇತ್ರ ಘಾಟಿ ಸುಬ್ರಹ್ಮಣ್ಯ ಸ್ವಾಮಿಯ ದರ್ಶನವನ್ನು ಪಡೆದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಕೆ ಅನುರಾಧ, ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಾಸಂತಿ, ಘಾಟಿ ಪ್ರಾಧಿಕಾರದ ಆಡಳಿತ ಮಂಡಳಿ ಹಾಗೂ ಸದಸ್ಯರಾದ ರಂಗಪ್ಪ, ಮಹೇಶ್ ಕುಮಾರ್, ರವಿಕುಮಾರ್, ಲಕ್ಷ್ಮೀ ನಾಯಕ್, ಹೇಮಲತಾ ರಮೇಶ್, ಹಾಗೂ ಕೃಷಿಕ ಸಮಾಜದ ಅಧ್ಯಕ್ಷರಾದ ಮುರಳಿ ಮುಖಂಡರು ಹಾಜರಿದ್ದರು.

ಸ್ಟಿಂಗ್ ಆಪರೇಷನ್‌ನಿಂದ ಕರ್ನಾಟಕ ನಗೆಪಾಟಲಿಗೆ ಗುರಿಯಾಗಿದೆ

ಜನರ ಕಡೆಗಿನ ಬದ್ಧತೆ, ಕಾಳಜಿ ಮುಖ್ಯವೇ ಹೊರತು, ಔಪಚಾರಿಕ ಶಿಕ್ಷಣ ಅಲ್ಲ: ಸಂಸದ ಸುಧಾಕರ್

ಬೆಂಗಳೂರು, ನ.7: ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕಾನ್ವೆಂಟ್ ಶಿಕ್ಷಣ ಪಡೆದಿರಬಹುದು. ಆದರೆ ರಾಜಕಾರಣಿಗಳಿಗೆ ಜನರ ಕಡೆಗಿನ ಬದ್ಧತೆ, ಕಾಳಜಿ ಮುಖ್ಯವಾಗುತ್ತದೆಯೇ ಹೊರತು, ಔಪಚಾರಿಕ ಶಿಕ್ಷಣ ಅಲ್ಲ ಎಂದು ಸಂಸದ ಡಾ.ಕೆ.ಸುಧಾಕರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಅಧಿಕಾರದ ದರ್ಪ ತಲೆಗೆ ಹೋಗಿದೆ. ಅವರು ಆಡುವ ಭಾಷೆ ಸರಿ ಇಲ್ಲ. ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಬಗ್ಗೆ ಹೀಗೆ ಮಾತಾಡಬಾರದು. ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಮಗ ಆಗಿರುವುದರಿಂದ ಪ್ರಿಯಾಂಕ್ ಅವರಿಗೆ ದೇಶದ ಅತ್ಯುನ್ನತ ಕಾನ್ವೆಂಟ್‌ಗಳಲ್ಲಿ ಓದುವ ಅವಕಾಶ ಇತ್ತು. ನಾನು ಶಿಕ್ಷಕನ ಮಗನಾಗಿದ್ದು, ಹಳ್ಳಿಯ ಸರ್ಕಾರಿ ಶಾಲೆಯಲ್ಲಿ ಓದಿದ್ದೆ.



ಹಾಗೆಂದಾಕ್ಷಣ ಪ್ರಿಯಾಂಕ್ ಅವರಿಗಿಂತ ನಾನು ದಡ್ಡನಲ್ಲ. ಅವರಷ್ಟೇ ಇಂಗ್ಲಿಷ್ ಬರದಿದ್ದರೂ ನನಗೆ ಜ್ಞಾನ ಇದೆ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿ ಜನರ ಕಷ್ಟಗಳಿಗೆ ಸ್ಪಂದಿಸಿ ಅನುಕೂಲ ಮಾಡಿಕೊಟ್ಟಿದ್ದರು. ರಾಜಕಾರಣಿಗಳಿಗೆ ಕೇವಲ ಔಪಚಾರಿಕ ಶಿಕ್ಷಣ ಮುಖ್ಯವಾಗುವುದಿಲ್ಲ. ತಮಿಳುನಾಡಿನ ಮಾಜಿ ಸಿಎಂ ಕೆ.ಕಾಮರಾಜ್ ಇಡೀ ದೇಶದಲ್ಲಿ ಮೊದಲ ಬಾರಿಗೆ ಅಕ್ಕಿಯನ್ನು ಜನರಿಗೆ ನೀಡಿದ್ದರು. ಅವರಿಗೆ ಯಾವುದೇ ಔಪಚಾರಿಕ ಶಿಕ್ಷಣ ಇರಲಿಲ್ಲ. ಬಡವರ ಕಷ್ಟ ಆಲಿಸಲು ಕಾನ್ವೆಂಟ್‌ನಲ್ಲಿ ಓದಬೇಕಿಲ್ಲ, ಮುಂಬೈನಲ್ಲಿ ವಾಸಿಸಬೇಕಿಲ್ಲ. ಜನರಿಗೆ ಸ್ಪಂದಿಸುವ ಗುಣ ಇದ್ದರೆ ಸಾಕಾಗುತ್ತದೆ. ಪ್ರಿಯಾಂಕ್ ಅವರಿಗೆ ಇನ್ನೂ ವಯಸ್ಸಿದ್ದು, ಇನ್ನಷ್ಟು ಅನುಭವ ಬೇಕಾಗಿದೆ. ಅವರು ತಮ್ಮ ಮಾತಿನ ಶೈಲಿ ಬದಲಿಸಿಕೊಳ್ಳಬೇಕು. ಅವರ ಪಕ್ಷದವರೇ ಅವರನ್ನು ಹುರಿದುಂಬಿಸಿ ಮತ್ತೆ ಕಾಲೆಳೆಯುತ್ತಾರೆ. ಇದನ್ನು ನಾನು ಕಾಂಗ್ರೆಸ್‌ನಲ್ಲಿದ್ದು ಅನುಭವಿಸಿದ್ದೇನೆ. ಅಂತಹ ಖೆಡ್ಡಾಗೆ ಅವರು ಬೀಳುವುದು ಬೇಡ ಎಂದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಎರಡು ಬಾರಿ ಮುಖ್ಯಮಂತ್ರಿಯಾಗಿದ್ದರು. ಈಗ ಅವರು ಎನ್‌ಡಿಎ ಭಾಗವಾಗಿದ್ದಾರೆ. ಮುಖ್ಯಮಂತ್ರಿ ಹಾಗೂ ಸಚಿವರನ್ನು ವರಿಷ್ಠರು ತೀರ್ಮಾನಿಸುತ್ತಾರೆ. ನಾನು ಸಂಸದನಾಗಿ ಅದರ ಬಗ್ಗೆ ವ್ಯಾಖ್ಯಾನ ಮಾಡಲು ಸಾಧ್ಯವಿಲ್ಲ. ಹಾಗೆಯೇ ಕುಮಾರಸ್ವಾಮಿ ಅವರ ಭಾವನೆ ಕೂಡ ತಪ್ಪು ಎನ್ನುವುದಿಲ್ಲ. ಮಹಾರಾಷ್ಟ್ರದಲ್ಲಿ ಶಿಂಧೆ ಸಿಎಂ ಆಗಿದ್ದರು, ಈಗ ದೇವೇಂದ್ರ ಫಡಣವೀಸ್ ಆಗಿದ್ದಾರೆ. ಆಯಾ ಕಾಲದಲ್ಲಿ ವರಿಷ್ಠರು ಉತ್ತಮ ತೀರ್ಮಾನವನ್ನು ತೆಗೆದುಕೊಳ್ಳುತ್ತಾರೆ. ಅದೆಲ್ಲಕ್ಕಿಂತ ಹೆಚ್ಚಾಗಿ ಎಷ್ಟು ಸ್ಥಾನಗಳನ್ನು ಪಡೆಯಲಾಗುತ್ತದೆ ಎಂಬುದು ಮುಖ್ಯವಾಗುತ್ತದೆ ಎಂದರು.

ಈಗ ನಾನು ಸಂಸದನಾಗಿ ಕೆಲಸ ಮಾಡುತ್ತಿದ್ದೇನೆ. ಮೊದಲಿಗೆ ರಾಜ್ಯ ರಾಜಕಾರಣದಲ್ಲಿದ್ದೆ. 2028 ರಲ್ಲಿ ರಾಜ್ಯವನ್ನು ಗತವೈಭವಕ್ಕೆ ತೆಗೆದುಕೊಂಡು ಹೋಗಬೇಕಿದೆ. ಆದರೆ ಈಗ ನಮ್ಮ ರಾಜ್ಯ ನಗೆಪಾಟಲಿಗೆ ಈಡಾಗಿದೆ. ಬೇರೆ ರಾಜ್ಯಗಳಲ್ಲಿ ಆರ್ಥಿಕಾಭಿವೃದ್ಧಿ ವೇಗವಾಗಿ ನಡೆಯುತ್ತಿದೆ. ಹೂಡಿಕೆಗಳು ಹೆಚ್ಚು ಬರುತ್ತಿದೆ. ಆದರೆ ಇಲ್ಲಿ ಸ್ಟಿಂಗ್ ಆಪರೇಶನ್ ಬಗ್ಗೆ ಚರ್ಚೆಯಾಗುತ್ತಿದೆ. ದೆಹಲಿಗೆ ಹೋದರೆ ಏನದು, ಅದರಲ್ಲಿ ಯಾರಿದ್ದಾರೆ ಎಂದು ಪ್ರಶ್ನೆ ಮಾಡುತ್ತಾರೆ. ಆದ್ದರಿಂದ ಎನ್‌ಡಿಎ ಮೈತ್ರಿ ಆಡಳಿತ ಅಧಿಕಾರಕ್ಕೆ ಬರಬೇಕಿದೆ. ಯಾರು ರಾಜ್ಯ ರಾಜಕಾರಣಕ್ಕೆ ಬರಬೇಕೆಂದು ವರಿಷ್ಠರು ತೀರ್ಮಾನಿಸುತ್ತಾರೆ ಎಂದರು.

ನಾನು ಸಚಿವನಾಗಿದ್ದಾಗ ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರದಲ್ಲಿ ಬಿಜೆಪಿ ಸಂಘಟನೆಗೆ ಒತ್ತು ನೀಡಿದ್ದೆ. ಈ ಜಿಲ್ಲೆಗಳಲ್ಲಿ ಮೂರು ವರ್ಷಗಳಲ್ಲಿ ಬಿಜೆಪಿಯ ಮತಗಳ ಪಾಲು 8% ಹೆಚ್ಚಿಸಿದ್ದೇನೆ. ಚಿಕ್ಕಬಳ್ಳಾಪುರ ಜಿಲ್ಲೆಯೊಂದರಲ್ಲೇ 18% ಜಾಸ್ತಿಯಾಗಿದೆ. ಆದ್ದರಿಂದ ಈ ಬಗ್ಗೆ ವರಿಷ್ಠರು ತೀರ್ಮಾನ ಕೈಗೊಳ್ಳುತ್ತಾರೆ. ಅವರ ತೀರ್ಮಾನಕ್ಕೆ ನಾನು ಬದ್ಧನಾಗಿದ್ದೇನೆ ಎಂದರು.

ಕೆಪಿಎಸ್‌ಸಿ ಎಲ್ಲ ನೇಮಕಾತಿ ಪರೀಕ್ಷೆಗಳನ್ನು ಮುಂದೂಡಿ: ಎಚ್.ಡಿ. ಕುಮಾರಸ್ವಾಮಿ ಆಗ್ರಹ

ಬೆಂಗಳೂರು, ನ.7: ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಇದೀಗ ಕೈಗೊಂಡಿರುವ ಎಲ್ಲಾ ನೇಮಕಾತಿ ಪರೀಕ್ಷೆಗಳನ್ನು ಮುಂದಕ್ಕೆ ಹಾಕಬೇಕು ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರು ಆಗ್ರಹಪಡಿಸಿದರು.

ಪಕ್ಷದ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗಳ ಜತೆ ಮಾತನಾಡಿ, ಕಳೆದ 3–4 ವರ್ಷಗಳಿಂದ ಕೆಪಿಎಸ್‌ಸಿಯಲ್ಲಿ ನಡೆದಿರುವ ಪರೀಕ್ಷೆ, ನೇಮಕಾತಿ ಅಕ್ರಮಗಳ ಬಗ್ಗೆ ಇಡಿ, ಸಿಐಡಿ ತನಿಖೆಗಳು ನಡೆಯುತ್ತಿವೆ ಹಾಗೂ ಹೈಕೋರ್ಟ್ ಸೂಚನೆಯಂತೆ ಎಸ್‌ಐಟಿ ಕೂಡ ತನಿಖೆ ನಡೆಸುತ್ತಿದ್ದು, ಹಣದ ವಹಿವಾಟು ನಡೆದಿರುವುದು ಸಾಬೀತಾಗಿದೆ. ಈ ಹಿನ್ನೆಲೆಯಲ್ಲಿ ಆ ಸಂಸ್ಥೆ ಪಾರದರ್ಶಕವಾಗಿ, ಪ್ರಾಮಾಣಿಕವಾಗಿ ಪರೀಕ್ಷೆ ನಡೆಸಿ ನೇಮಕಾತಿ ಮಾಡುತ್ತದೆ ಎಂಬ ನಂಬಿಕೆ ನನಗಿಲ್ಲ. ಅನೇಕ ಉದ್ಯೋಗಾಂಕ್ಷಿಗಳು ಕೂಡ ಇದೇ ದೂರನ್ನು ಮಾಡುತ್ತಿದಾರೆ. ಹಾಗಾಗಿ ನವೆಂಬರ್ 15ರಂದು ಕೆಪಿಎಸ್‌ಸಿಯಿಂದ ನಡೆಯಲಿರುವ 319 ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ



ನೇಮಕಾತಿ ಪರೀಕ್ಷೆಯನ್ನು ಮುಂದೂಡುವಂತೆ ಒತ್ತಾಯಿಸಿದರು.

ಸಂಸ್ಥೆಯನ್ನು ಸುಧಾರಿಸಲು ಮಾಜಿ ಮಂತ್ರಿಗಳಾದ ಆರ್.ವಿ.ದೇಶಪಾಂಡೆ ಅವರ ನೇತೃತ್ವದಲ್ಲಿ ರಚಿಸಲಾಗಿದ್ದ ಸಮಿತಿಯು ಇನ್ನೂ ವರದಿ ನೀಡಿಲ್ಲ. ಫ್ರೀಡಂ ಪಾರ್ಕ್‌ನಲ್ಲಿ ಅಭ್ಯರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದು, ಇಂತಹ ಗೊಂದಲದ ವಾತಾವರಣದಲ್ಲಿ ಪರೀಕ್ಷೆ ನಡೆಸುವುದರಿಂದ ಪ್ರಾಮಾಣಿಕ, ಪ್ರತಿಭಾವಂತ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತದೆ. ಹೀಗಾಗಿ ಸಂಸ್ಥೆಯನ್ನು ಸಂಪೂರ್ಣವಾಗಿ ಶುದ್ಧೀಕರಿಸಿ, ಅಲ್ಲಿ ಪಾರದರ್ಶಕತೆ ತಂದ ನಂತರವೇ ಪರೀಕ್ಷೆ ನಡೆಸಬೇಕು ಎಂದು ಕುಮಾರಸ್ವಾಮಿ ಅವರು ಆಗ್ರಹಿಸಿದರು.

ಕುಣಿಗಲ್ ವಿಧಾನಸಭಾ ಕ್ಷೇತ್ರದ 20ಕ್ಕೂ ಹೆಚ್ಚು ಪ್ರಮುಖ ಕಾಂಗ್ರೆಸ್ ಮುಖಂಡರು ಹೆಚ್.ಡಿ. ಕುಮಾರಸ್ವಾಮಿ ಮತ್ತು ಮಾಜಿ ಸಚಿವ ಡಿ ನಾಗರಾಜಯ್ಯ ಅವರ ಸಮ್ಮುಖದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು.

ಕಾಂಗ್ರೆಸ್ ನಾಯಕರ ಬಗ್ಗೆ ಎಚ್‌ಡಿಕೆ ಲೇವಡಿ


ಕಾಂಗ್ರೆಸ್ ನಾಯಕರು ರಾಮನಗರದಲ್ಲಿ ಕಾರ್ಯಕ್ರಮವೊಂದನ್ನು ಮಾಡಿ, ಅಲ್ಲಿನ ಮೆಡಿಕಲ್ ಕಾಲೇಜುಗಳೆಲ್ಲ ತಮ್ಮದೇ ಸಾಧನೆ ಎಂದು ಬಿಂಬಿಸಿಕೊಳ್ಳುತ್ತಿರುವುದನ್ನು ಲೇವಡಿ ಮಾಡಿದ ಎಚ್.ಡಿ. ಕುಮಾರಸ್ವಾಮಿ, 2006ರಲ್ಲಿ ತಾವು ಮುಖ್ಯಮಂತ್ರಿಯಾಗಿದ್ದಾಗ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ್ಗಳ ವಿವಿಯನ್ನು ರಾಮನಗರಕ್ಕೆ ಸ್ಥಳಾಂತರಿಸುವ ತೀರ್ಮಾನ ಕೈಗೊಂಡು ಅನುದಾನ ನೀಡಲಾಗಿತ್ತು. ಅದನ್ನು ಈಗ ಕಾಂಗ್ರೆಸ್ಸಿನವರು ನಾವು ತಂದಿದ್ದು ಎಂದು ಸುಳ್ಳು ಹೇಳುತ್ತಿದ್ದಾರೆ. ಕನಕಪುರದಲ್ಲಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಮೈತ್ರಿ ಸರ್ಕಾರದಲ್ಲಿ ತಾವೇ ಒಪ್ಪಿಗೆ ನೀಡಿದ್ದಾಗಿ ತಿಳಿಸಿದರು.

ಸ್ಟಿಂಗ್ ಆಪರೇಷನ್: ಅವಸರ ಅಗತ್ಯವಿಲ್ಲ

ತನಿಖೆಯಿಂದ ಸತ್ಯ ಹೊರಬರಲಿದೆ ಸಚಿವ ಯತೀಂದ್ರ

ಮೈಸೂರು, ನ.7: ಸ್ಟಿಂಗ್ ಪ್ರಕರಣದ ತನಿಖೆಯಲ್ಲಿ ಅವಸರ ಮಾಡುವ ಅಗತ್ಯವಿಲ್ಲ. ಎಲ್ಲರೂ ತಾಳ್ಮೆಯಿಂದ ಕಾಯಬೇಕು. ತನಿಖೆ ಮುಂದುವರಿದಂತೆ ಸತ್ಯಾಂಶಗಳು ಹೊರಬರಲಿವೆ ಎಂದು ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ದೆಹಲಿಯ ನಿವಾಸದಲ್ಲೇ ಆರೋಪಿಯ ಮೊಬೈಲ್ ನೆಟ್‌ವರ್ಕ್ ಪತ್ತೆಯಾಗಿರುವುದಾಗಿ ಪೊಲೀಸ್ ಆಯುಕ್ತರೂ



ಹೇಳಿದ್ದಾರೆ. ಪ್ರಕರಣದಲ್ಲಿ ವಿಡಿಯೋ ಮಾಡಿದವರು ಹಾಗೂ ಅದನ್ನು ಅಪ್ಲೋಡ್ ಮಾಡಿದವರು ಸೇರಿದಂತೆ ಸಂಬಂಧಪಟ್ಟ ಎಲ್ಲರೂ ಸಿಕ್ಕಿಬೀಳಲಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ ಎಂಬ ವಿಶ್ವಾಸವಿದೆ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ದೆಹಲಿ ಭೇಟಿಯ ಕುರಿತು ಮಾತನಾಡಿದ ಅವರು, ತಾನು ತಂದೆಯೊಂದಿಗೆ ದೆಹಲಿಗೆ ಹೋಗಿದ್ದೆ. ಆದರೆ ಹೈಕಮಾಂಡ್‌ನೊಂದಿಗೆ ನಡೆದ ಸಭೆಯಲ್ಲಿ ತಾನು ಭಾಗಿಯಾಗಿರಲಿಲ್ಲ. ತಂದೆಯವರು ಮಾತ್ರ ಹೈಕಮಾಂಡ್ ನಾಯಕರೊಂದಿಗೆ ಮಾತನಾಡಿದ್ದಾರೆ ಎಂದು ಸ್ಪಷ್ಟಪಡಿಸಿದರು.

ರಾಜಾಡಳಿತವಾಗಲೀ, ಸರ್ಕಾರವಾಗಲೀ ಜನರ ತೆರಿಗೆ ಹಣದಿಂದಲೇ ನಡೆಯುತ್ತದೆ

ಅರಮನೆಯನ್ನು ಮಹಾರಾಜರೇ ಕಟ್ಟಿಸಿದ್ದಾರೆ ಎಂಬುದನ್ನು ತಾನು ನಿರಾಕರಿಸಿಲ್ಲ. ಆದರೆ ಅರಮನೆ ನಿರ್ಮಾಣಕ್ಕೂ ಜನರ ತೆರಿಗೆಯ ಹಣ ಬಳಕೆಯಾಗಿದೆ. ಸರ್ಕಾರವಾಗಲಿ, ರಾಜಾಡಳಿತವಾಗಲಿ ಜನರ ತೆರಿಗೆ ಹಣದಿಂದಲೇ ನಡೆಯುತ್ತದೆ. ಹೀಗಾಗಿ ಅಂತಿಮವಾಗಿ ಎಲ್ಲವೂ ಜನರಿಗೆ ಸೇರಬೇಕು ಎಂಬುದು ತಮ್ಮ ನಿಲುವು ಎಂದು ಯತೀಂದ್ರ ಸಿದ್ದರಾಮಯ್ಯ ಹೇಳಿದರು. ಪ್ರತಿವರ್ಷವೂ ರಾಜಮನೆತನದವರು ದಸರಾ ಆಚರಣೆಗೆ ಸಹಕಾರ ನೀಡುತ್ತಾ ಬಂದಿದ್ದಾರೆ. ಈ ವರ್ಷ ಕೆಲವು ಗೊಂದಲ ಉಂಟಾಗಿತ್ತು. ಮುಂದಿನ ದಿನಗಳಲ್ಲಿ ರಾಜಮನೆತನದವರು ಮುಖ್ಯಮಂತ್ರಿ ಅವರೊಂದಿಗೆ ಮಾತನಾಡಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲಿದ್ದಾರೆ ಎಂಬ ವಿಶ್ವಾಸವಿದೆ ಎಂದರು.

ಬಾಡಿಗೆ-ಗೌರವಧನ ಪದ ಬಳಕೆಯಲ್ಲಿ ದೊಡ್ಡ ವ್ಯತ್ಯಾಸವಿಲ್ಲ

ಮೈಸೂರು ಅರಮನೆ ಮತ್ತು ಅಂಬಾರಿ ವಿಚಾರದಲ್ಲಿ ಪ್ರಮೋದಾದೇವಿ ಒಡೆಯರ್ ಅವರ ಸ್ಪಷ್ಟನೆ ಕುರಿತು ಮಾತನಾಡಿದ ಯತೀಂದ್ರ ಸಿದ್ದರಾಮಯ್ಯ, "ಸಿಂಹಾಸನ ಮತ್ತು ಅಂಬಾರಿ ಸರ್ಕಾರಕ್ಕೆ ಸೇರಿದ್ದು ಎಂದು ನಾನು ಎಲ್ಲಿಯೂ ಹೇಳಿಲ್ಲ. ಅಂಬಾರಿಗೆ ಸರ್ಕಾರ ಬಾಡಿಗೆ ನೀಡುತ್ತದೆ ಎಂದು ಹೇಳಿದ್ದೇನೆ. ಅರಮನೆಯವರು ಅದನ್ನು ಗೌರವಧನ ಎನ್ನುತ್ತಾರೆ. ಬಾಡಿಗೆ ಅಥವಾ ಗೌರವಧನ ಎಂಬ ಪದಗಳ ಬಳಕೆಯಲ್ಲಿ ಅಂತಹ ದೊಡ್ಡ ವ್ಯತ್ಯಾಸವಿಲ್ಲ ಎಂದು ಯತೀಂದ್ರ ಹೇಳಿದರು.

ಕಾಂಗ್ರೆಸ್ಸಿನವರ ಅಧಿಕಾರದ ಮದ, ಅಹಂಕಾರವನ್ನು ಜನತೆ ಇಳಿಸುತ್ತಾರೆ: ಬಿ.ವೈ.ವಿಜಯೇಂದ್ರ ಎಚ್ಚರಿಕೆ

ಬೆಂಗಳೂರು, ನ.7: ವಿಧಾನ ಪರಿಷತ್ ಚುನಾವಣೆಯಲ್ಲಿ ಜನತೆ ಕಾಂಗ್ರೆಸ್‌ಗೆ ತಕ್ಕಪಾಠ ಕಲಿಸಿದ್ದಾರೆ. ಕಾಂಗ್ರೆಸ್ಸಿನವರ ಪಾಪದ ಕೊಡ ತುಂಬಿದೆ. ಶೀಘ್ರದಲ್ಲೇ ನಿಮ್ಮ ಈ ಅಹಂಕಾರ, ದುರಹಂಕಾರ, ನಿಮ್ಮ ಅಧಿಕಾರದ ಮದವನ್ನು ಇಳಿಸುವ ಕೆಲಸವನ್ನು ರಾಜ್ಯದ ಜನತೆ ಮಾಡಲಿದ್ದಾರೆ ಎಂದು ರಾಜ್ಯದ ಮುಖ್ಯಮಂತ್ರಿಗಳು, ಕೆಪಿಸಿಸಿ ಅಧ್ಯಕ್ಷರು ಮತ್ತು ಮಾನ್ಯ ಗೃಹ ಸಚಿವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಎಚ್ಚರಿಕೆ ಕೊಟ್ಟಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಿಪಕ್ಷ



ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ಮನೆಗೆ ನೂರಾರು ಚೂರಿ ಮತ್ತು ಚಾಕುಗಳನ್ನು ಕಳಿಸುವುದರ ಮುಖೇನ ಕಾಂಗ್ರೆಸ್ ಪಕ್ಷ, ಕಾಂಗ್ರೆಸ್ ಸರ್ಕಾರ, ಕಾಂಗ್ರೆಸ್ ಕಾರ್ಯಕರ್ತರ ಸಂಸ್ಕೃತಿಯನ್ನು ಮತ್ತೊಮ್ಮೆ ಅನಾವರಣಗೊಳಿಸುವ ಕೆಲಸ ಅವರು ಮಾಡಿದ್ದಾರೆ ಎಂದು ಟೀಕಿಸಿದರು. ಕಾಂಗ್ರೆಸ್ ಸರ್ಕಾರ ಇದು ಗೂಂಡಾ ಸರ್ಕಾರ ಅನ್ನೋದನ್ನು ದೇಶದ ಜನತೆಗೆ ಇವತ್ತು ತೋರಿಸಿ ಕೊಟ್ಟಿದ್ದಾರೆ ಎಂದು ಆಕ್ಷೇಪಿಸಿದರು.

ಗೂಂಡಾಗಿರಿ ಮಾಡಿದವರ ಜೊತೆಯಲ್ಲಿ ಬಂದವರು ಕಾಂಗ್ರೆಸ್ ಪಕ್ಷದ ವ್ಯವಸ್ಥೆಯಲ್ಲೂ ಇದ್ದಾರೆ; ಸರ್ಕಾರದಲ್ಲೂ ಇದ್ದಾರೆ. ಹುಟ್ಟುಗುಣ ಸುಟ್ಟರೂ ಹೋಗಲ್ಲ ಅನ್ನುವಂತೆ ಇವರ ವರ್ತನೆ ಇದೆ. ಕಾಂಗ್ರೆಸ್ ಸರ್ಕಾರ ಸಂಪೂರ್ಣ ಹತಾಶ ಸ್ಥಿತಿಯಲ್ಲಿದೆ. ಡಿ.ಕೆ. ಶಿವಕುಮಾರ್, ಬಿ.ಕೆ. ಹರಿಪ್ರಸಾದ್, ಪ್ರಿಯಾಂಕ್ ಖರ್ಗೆ ಎಂಬ ಈ ಡಿಕೆ, ಬಿಕೆ ಮತ್ತು ಪಿಕೆ– ಇವರ ಗೂಂಡಾವರ್ತನೆಯನ್ನು ಯಾರೂ ಕ್ಷಮಿಸುವುದಕ್ಕೆ ಸಾಧ್ಯ ಇಲ್ಲ ಎಂದು ತಿಳಿಸಿದರು.

ಭಾರತೀಯ ಜನತಾ ಪಕ್ಷ ಇದನ್ನು ನಾವು ಬಲವಾಗಿ ಖಂಡಿಸುತ್ತೇವೆ. ನಾನು ಇತ್ತೀಚೆಗೆ ದಾವಣಗೆರೆಯಲ್ಲಿ ಏನೋ ಒಂದು ಮಾತನ್ನು ಆಡಿದ್ದೆ, ನಾನು ಹೇಳಿದ್ದೇನೆ ಬಾಯಿತಪ್ಪಿನಿಂದ ಬಂದಿದೆ, ಅದನ್ನು ಹಿಂತೆಗೆದುಕೊಳ್ಳುತ್ತೇನೆ ಅಂತ ಹೇಳಿ ವಿಷಾದ ವ್ಯಕ್ತಪಡಿಸಿದ್ದೇನೆ. ಈ ಲಜ್ಜೆಗೆಟ್ಟ ಕಾಂಗ್ರೆಸ್ ಪಕ್ಷ ಪೋಸ್ಟರ್ ಅಭಿಯಾನವನ್ನು ಮಾಡುತ್ತಿದೆ ಎಂದು ಆಕ್ಷೇಪಿಸಿದರು.

ಕಾಂಗ್ರೆಸ್ ನಾಯಕರು ಹತಾಶರಾಗಿದ್ದಾರೆ

ಪ್ರಿಯಾಂಕ್ ಖರ್ಗೆ ಒಬ್ಬ ಕೇಂದ್ರ ಸಚಿವರ ಬಗ್ಗೆ ಹಳ್ಳಿ ಗುಗ್ಗು ಎನ್ನುತ್ತಾರೆ. ಒಬ್ಬ ಗೃಹ ಸಚಿವರಾಗಿ ಮಾತಾಡುವ ಮಾತು ಈ ರೀತಿ ಇರಬಾರದು. ಕಾಂಗ್ರೆಸ್ಸಿನವರು ಚುನಾಯಿತ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಯವರ ಬಗ್ಗೆ ಹಗುರವಾಗಿ ಮಾತನಾಡುತ್ತಾರೆ. ಮಲ್ಲಿಕಾರ್ಜುನ ಖರ್ಗೆಯವರು ಬಿಹಾರದಲ್ಲಿ ನರೇಂದ್ರ ಮೋದಿಜೀ ಅವರ ತಂದೆ ಬಗ್ಗೆ ಟೀಕೆ ಮಾಡಿದ್ದಾರೆ. ರಾಹುಲ್ ಗಾಂಧಿ ಕೂಡ ನರೇಂದ್ರ ಮೋದಿ ಅವರ ತಂದೆ–ತಾಯಿ ಬಗ್ಗೆ ಟೀಕೆ ಮಾಡಿದ್ದರು. ಕಾಂಗ್ರೆಸ್ ನಾಯಕರು ಯಾಕಿಷ್ಟು ಹತಾಶರಾಗಿದ್ದಾರೋ ತಿಳಿಯುತ್ತಿಲ್ಲ ಎಂದು ವಿಜಯೇಂದ್ರ ಹೇಳಿದರು.

ಕರ್ನಾಟಕದಲ್ಲಿ ಜನಾದೇಶ ಕಾಂಗ್ರೆಸ್ ಪರವಾಗಿದ್ದರೂ ರಾಜ್ಯದ ಆರ್ಥಿಕ ಪರಿಸ್ಥಿತಿ ಎಲ್ಲಿಗೆ ಬಂದು ನಿಂತಿದೆ. ಸ್ವತಃ ಮುಖ್ಯಮಂತ್ರಿಗಳೇ ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರ ಮುಂದೆ ಹೋಗಿ, ತನ್ನ ಜೇಬು ಖಾಲಿ ಇದೆ, ಪರಿಹಾರ ನೀಡಲು ಸರ್ಕಾರದಲ್ಲಿ ದುಡ್ಡಿಲ್ಲ ಎಂದಿದ್ದಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಸಾಧನೆ ಬಗ್ಗೆ ಪೋಸ್ಟರ್ ಹಚ್ಚಲಿ

ಕಾಂಗ್ರೆಸ್ ಸರ್ಕಾರ ಕಳೆದ ಮೂರೂವರೆ ವರ್ಷದಲ್ಲಿ ಏನು ಸಾಧನೆ ಮಾಡಿದೆ, ಎಷ್ಟು ಬಡವರಿಗೆ ಮನೆ ಕೊಟ್ಟಿದ್ದಾರೆ, ಎಷ್ಟು ಬಾರಿ ಬೆಲೆ ಏರಿಕೆ ಮಾಡಿದ್ದಾರೆ, ಎಷ್ಟು ರಸ್ತೆ ಗುಂಡಿಗಳನ್ನು ಮುಚ್ಚಿದ್ದಾರೆ, ಶಾಸಕರ ಕ್ಷೇತ್ರಕ್ಕೆ ಎಷ್ಟು ಕೋಟಿ ಅನುದಾನ ಕೊಟ್ಟಿದ್ದೀರಿ ಎನ್ನುವ ಬಗ್ಗೆ ಪೋಸ್ಟರ್ ಹಚ್ಚಲಿ ಎಂದು ವಿಜಯೇಂದ್ರ ಸವಾಲು ಹಾಕಿದರು.

ರಿಯಲ್ ಎಸ್ಟೇಟ್ ಆರೋಪ: ದಾಖಲೆ ಸಮೇತ ಚರ್ಚೆಗೆ ಬನ್ನಿ- ಎಚ್‌ಡಿಕೆಗೆ ಪ್ರಿಯಾಂಕ್ ಸವಾಲು

ಬೆಂಗಳೂರು, ನ.7: ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕುಟುಂಬ ರಿಯಲ್ ಎಸ್ಟೇಟ್ ಉದ್ಯಮದಲ್ಲಿ ತೊಡಗಿಸಿಕೊಂಡಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಲ್ಲದೆ, ಈ ಸಂಬಂಧ ದಾಖಲೆಗಳ ಸಮೇತ ಚರ್ಚೆಗೆ ಬರುವಂತೆ ಬಿಜೆಪಿ ಮತ್ತು ಜೆಡಿಎಸ್ ನಾಯಕರಿಗೆ ಸವಾಲು ಹಾಕಿದ್ದಾರೆ.

ಮಾಧ್ಯಮಗಳ ಜತೆ ಶನಿವಾರ ಮಾತನಾಡಿದ ಅವರು, ಈ ವಿಚಾರದಲ್ಲಿ ಬಿಜೆಪಿ ಮತ್ತು ಜೆಡಿಎಸ್‌ನ ಎಲ್ಲ ನಾಯಕರು ಒಂದೆಡೆ ನಿಲ್ಲಲಿ, ಅವರಿಗೆ ಉತ್ತರಿಸಲು ನಾನೊಬ್ಬನೆ ಸಾಕು. ನನ್ನ ಇಡೀ ಕುಟುಂಬದ ಪ್ರತಿಯೊಂದು ಆಸ್ತಿಯ ದಾಖಲೆಗಳನ್ನು ನಾನು ತರಲು ಸಿದ್ಧ. ಅವರು ಕೂಡ ತಮ್ಮ ಕುಟುಂಬದ ಆಸ್ತಿ ದಾಖಲೆಗಳನ್ನು ತರಲಿ. ನಾವು ಪ್ರತಿಯೊಂದು ವಿವರವನ್ನು ಲೋಕಾಯುಕ್ತಕ್ಕೂ ಸಲ್ಲಿಸಿದ್ದೇವೆ ಎಂದು ಆಕ್ರೋಶ ಹೊರಹಾಕಿದರು.

ಕಲ್ಬುರ್ಗಿಯಲ್ಲಿ ಖರ್ಗೆ ಕುಟುಂಬ ನಿರ್ಮಿಸಿರುವ ಬುದ್ಧ ಮಂದಿರದ ಕುರಿತು ಮಾತನಾಡಿದ ಅವರು, ಅಲ್ಲಿ ನಿರ್ಮಿಸಿರುವುದು ಯಾವುದೇ ರಿಯಲ್ ಎಸ್ಟೇಟ್ ಲೇಔಟ್ ಅಲ್ಲ, ಬದಲಿಗೆ ನಮ್ಮ ಭಾಗದ ಜನರಿಗಾಗಿ ಖರ್ಗೆ ಅವರು ಮತ್ತು ಕುಟುಂಬದವರು ಕಟ್ಟಿಸಿರುವ ಬುದ್ಧ ಮಂದಿರ. ಅದೊಂದೇ ನಮ್ಮ ಕಡೆ ಇರುವ ಕೇಂದ್ರ. ಅದನ್ನೂ ಸಹಿಸುವುದಕ್ಕೆ ಆಗ್ತಿಲ್ವಾ ಎಂದು ಪ್ರಶ್ನಿಸಿದರು.

ಕೇಳಿದಾಕ್ಷಣ ಜನ ಅಧಿಕಾರ ನೀಡುತ್ತಾರಾ: ಎಚ್‌ಡಿಕೆ ಹೇಳಿಕೆಗೆ ಸಚಿವ ಬಾಲಕೃಷ್ಣ ಪ್ರತಿಕ್ರಿಯೆ

ರಾಮನಗರ, ನ.7: ತಮಗೆ ಐದು ವರ್ಷ ಸಂಪೂರ್ಣ ಅಧಿಕಾರ ಕೊಡಿ ಎಂಬ ಎಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿರುವ ಸಚಿವ ಎಚ್.ಸಿ. ಬಾಲಕೃಷ್ಣ, ಅವರು ಕೇಳಿದ ಜನ ಅಧಿಕಾರ ಕೊಟ್ಟು ಬಿಡ್ತಾರಾ. ಅವರ ಪಕ್ಷವೇನಾದರೂ 125 ಸ್ಥಾನ ಗೆದ್ದುಬಿಡುತ್ತಾ. ಇವರು ಕಾಂಗ್ರೆಸ್ ಹತ್ತಿರ ಬಂದ್ರೂ ತ್ಯಾಪೆ, ಬಿಜೆಪಿ ಹತ್ತಿರ ಹೋದ್ರೂ ತ್ಯಾಪೆ ಗಿರಾಕಿ. ಇವರಿಗೆ ಅಧಿಕಾರ ಬಿಟ್ಟುಕೊಟ್ಟು ಸುಮ್ಮನಿರಲು ಬಿಜೆಪಿಯಲ್ಲಿ ಸಿಎಂ ಆಗುವಂತಹ ಗಂಡಸರು ಇಲ್ವಾ ಎಂದು ಪ್ರಶ್ನಿಸಿದರು.

ಕೇಂದ್ರದಿಂದ ರಾಜ್ಯ ಸರ್ಕಾರ ಕಾಟಾಚಾರಕ್ಕೆ ಬರ ಪರಿಹಾರ ಕೇಳಿದೆ ಎಂಬ ಹೆಚ್‌ಡಿಕೆ ಹೇಳಿಕೆಗೆ ತಿರುಗೇಟು ನೀಡಿದ ಅವರು, ನಾವು ದೆಹಲಿಗೆ ಹೋಗಿ ಉಲ್ಟಾಪಲ್ಟಾ ನಿಂತುಕೊಳ್ಳಬೇಕಾ. ರಾಜ್ಯದಿಂದ ಪೈಲ್ವಾನ್‌ಗಳನ್ನು ಗೆಲ್ಲಿಸಿ ದೆಹಲಿಗೆ ಕಳುಹಿಸಿದ್ದೀರಲ್ಲ. ಮಾಧ್ಯಮದವರು ಅವರನ್ನೂ ಪ್ರಶ್ನೆ ಮಾಡಬೇಕು. ಕೇಂದ್ರ ಸಚಿವರು ಬರೀ ಮನರಂಜನೆಗೆ ಇದ್ದಾರಾ? ಪ್ರತಿದಿನ ಬೆಳಗ್ಗೆ ಎದ್ದು ಮಾಧ್ಯಮಗಳಿಗೆ ಮನರಂಜನೆ ಕೊಡದಿದ್ದರೆ ಅವರಿಗೆ ನಿದ್ದೆಯೇ ಬರುವುದಿಲ್ಲ. ಇಷ್ಟೆಲ್ಲಾ ಮಾತನಾಡುವವರು ರೈತರ ಬಗ್ಗೆ, ಕಬ್ಬು ಬೆಳೆಗಾರರ ಹೋರಾಟದ ಬಗ್ಗೆ ಏಕೆ ಮಾತನಾಡುತ್ತಿಲ್ಲ ಎಂದು ಕಿಡಿಕಾರಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

ಇ20 ಇಂಧನ ಮಿಶ್ರಣದಲ್ಲಿ ಉಲ್ಲಂಘನೆ: 14 ಮಾದರಿಗಳ ಪೈಕಿ 11ರಲ್ಲಿ ಎಥೆನಾಲ್ ಪ್ರಮಾಣ ಶೇ. 20ರ ಮಿತಿಯನ್ನು ಮೀರಿದೆ: ರಾಹುಲ್ ಗಾಂಧಿ ಆರೋಪ

ನವದೆಹಲಿ, ನ.7: ಪೆಟ್ರೋಲ್ ಕಂಪನಿಗಳು ನಿಗದಿತ ಶೇ. 20ರ ಮಿತಿಗಿಂತ ಹೆಚ್ಚು ಎಥೆನಾಲ್ ಇರುವ ಇಂಧನವನ್ನು ಪೂರೈಸುತ್ತಿವೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಶನಿವಾರ ಆರೋಪಿಸಿದ್ದಾರೆ. ಕರ್ನಾಟಕದ ಏಳು ಜಿಲ್ಲೆಗಳಿಂದ ಸಂಗ್ರಹಿಸಿದ ಇಂಧನ ಮಾದರಿಗಳನ್ನು ಪ್ರಯೋಗಾಲಯದಲ್ಲಿ ಪರೀಕ್ಷಿಸಿದಾಗ ಈ ವಿಷಯ ಬೆಳಕಿಗೆ ಬಂದಿದೆ ಎಂದು ಅವರು ತಿಳಿಸಿದ್ದಾರೆ. 'ಎಕ್ಸ್' ಜಾಲತಾಣ ದಲ್ಲಿ ಪೋಸ್ಟ್ ಮಾಡಿರುವ ರಾಹುಲ್ ಗಾಂಧಿ, ಮಾನ್ಯತೆ ಪಡೆದ ಪ್ರಯೋಗಾಲಯ ವೊಂದರಲ್ಲಿ ಪರೀಕ್ಷಿಸಲಾದ 14 ಪೆಟ್ರೋಲ್ ಮಾದರಿಗಳ ಪೈಕಿ 11ರಲ್ಲಿ ಶೇ. 20ಕ್ಕಿಂತ ಹೆಚ್ಚು ಎಥೆನಾಲ್ ಇರುವುದು ಕಂಡುಬಂದಿದೆ ಎಂದು ಹೇಳಿದ್ದಾರೆ. ಇಂಡಿಯನ್ ಆಯಿಲ್ ಕಾರ್ಪೊರೇಷನ್ ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ನಿಂದ ಸಂಗ್ರಹಿಸಿದ ಮಾದರಿಗಳಲ್ಲಿ ಕ್ರಮವಾಗಿ ಶೇ. 31.2 ಮತ್ತು ಶೇ. 30.5 ರಷ್ಟು ಎಥೆನಾಲ್ ಇರುವುದು ಪತ್ತೆಯಾಗಿದೆ ಎಂದು ಅವರು ಉಲ್ಲೇಖಿಸಿದ್ದಾರೆ. "ಇ20 ಈಗ '420' (ವಂಚನೆ) ಆಗಿ



ಬದಲಾಗಿದೆ – ಸಾರ್ವಜನಿಕರ ವಾಹನಗಳಿಂದ ಪೆಟ್ರೋಲ್ ಕದಿಯಲಾಗುತ್ತಿದೆ" ಎಂದು ಟೀಕಿಸಿರುವ ಅವರು, IOCL, HPCL, BPCL, ನಯಾರಾ ಮತ್ತು ಶೆಲ್ ಸೇರಿದಂತೆ ಸರ್ಕಾರಿ ಹಾಗೂ ಖಾಸಗಿ ತೈಲ ಕಂಪನಿಗಳು ನಿಗದಿತ ಮಿತಿಯನ್ನು ಮೀರಿವೆ ಎಂದು ಆರೋಪಿಸಿದ್ದಾರೆ. ಅಲ್ಲದೆ, ಈ ಕಂಪನಿಗಳ ಸ್ವಂತ ಪ್ರಯೋಗಾಲಯ ಗಳು ಕೂಡ ಮಾದರಿಗಳಲ್ಲಿನ ಎಥೆನಾಲ್ ಪ್ರಮಾಣದ ಬಗ್ಗೆ ವರದಿ ನೀಡಲು ವಿಫಲವಾಗಿವೆ ಎಂದು ಅವರು ದೂರಿದ್ದಾರೆ.


ಗ್ರಾಹಕರ ಮೇಲೆ ಉಂಟಾಗುವ ಪರಿಣಾಮದ ಬಗ್ಗೆ ಕಳವಳ ವ್ಯಕ್ತಪಡಿಸಿರುವ ರಾಹುಲ್ ಗಾಂಧಿ, ಇಂಧನದಲ್ಲಿ ಎಥೆನಾಲ್ ಪ್ರಮಾಣ

> ಕೆಲವು ಮಳಿಗೆಗಳಲ್ಲಿ ಪೆಟ್ರೋಲ್‌ನಲ್ಲಿ 26–31% ಎಥೆನಾಲ್ ಇದೆ ಎಂಬ ಕರ್ನಾಟಕದ ವರದಿಯನ್ನು ಇಂಡಿಯನ್ ಆಯಿಲ್, ಬಿಪಿಸಿಎಲ್ ಮತ್ತು ಎಚ್‌ಪಿಸಿಎಲ್ ಪ್ರಶ್ನಿಸಿವೆ. ಕರ್ನಾಟಕದ 56 ಸೇರಿದಂತೆ 27 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಪರೀಕ್ಷಿಸಲಾದ 893 ಮಾದರಿಗಳು ಐಎಸ್ 17021 ಮಾನದಂಡಗಳನ್ನು ಅನುಸರಿಸಿವೆ ಮತ್ತು ನಿಗದಿತ 19–21% ವ್ಯಾಪ್ತಿಯಲ್ಲಿ ಎಥೆನಾಲ್ ಅಂಶವನ್ನು ದಾಖಲಿಸಿವೆ ಎಂದು ತೈಲ ಕಂಪನಿಗಳು ಹೇಳುತ್ತವೆ. ಇಂಧನ ಗುಣಮಟ್ಟದ ಬಗ್ಗೆ ತೀರ್ಮಾನ ತೆಗೆದುಕೊಳ್ಳುವ ಮೊದಲು ಕಂಪನಿಗಳು ಪಾರದರ್ಶಕ ಮತ್ತು ತಾಂತ್ರಿಕವಾಗಿ ಪರಿಶೀಲಿಸಬಹುದಾದ ಪರೀಕ್ಷೆಗೆ ಕರೆ ನೀಡಿವೆ. ಕರ್ನಾಟಕ ಮತ್ತು ಸಾರ್ವಜನಿಕ ವಲಯದ ತೈಲ ಕಂಪನಿಗಳ ನಡುವಿನ ಇ20 ಪೆಟ್ರೋಲ್ ವಿವಾದವು ಇಂಧನ ಗುಣಮಟ್ಟವನ್ನು ಸ್ಥಾಪಿಸಲು ಪಾರದರ್ಶಕ ಮಾದರಿ, ಪ್ರಮಾಣೀಕೃತ ಪ್ರಯೋಗಾಲಯ ಕಾರ್ಯವಿಧಾನಗಳು ಮತ್ತು ಸ್ವತಂತ್ರ ಪರಿಶೀಲನೆಯ ಅಗತ್ಯವನ್ನು ಒತ್ತಿಹೇಳುತ್ತದೆ.

ಹೆಚ್ಚಿದ್ದರೆ ಅದು ವಾಹನಗಳ ಮೈಲೇಜ್ ಮೇಲೆ ಪರಿಣಾಮ ಬೀರಬಹುದು ಮತ್ತು ನಿರ್ವಹಣಾ ವೆಚ್ಚವನ್ನು ಹೆಚ್ಚಿಸಬಹುದು ಎಂದು ಹೇಳಿದ್ದಾರೆ. ಇಂತಹ ಇಂಧನವನ್ನು ಬಳಸಲು ವಿನ್ಯಾಸಗೊಳಿಸದ ವಾಹನಗಳು ಹಾನಿಗೊಳಗಾಗಬಹುದು ಎಂದೂ ಅವರು ಎಚ್ಚರಿಸಿದ್ದಾರೆ. ಪೆಟ್ರೋಲ್ ಬಂಕ್‌ಗಳಲ್ಲಿ ಸ್ಪಷ್ಟವಾದ ಮಾಹಿತಿ (ಲೇಬಲಿಂಗ್) ಇಲ್ಲದಿರುವುದನ್ನು ಪ್ರಶ್ನಿಸಿರುವ ಅವರು, ಗ್ರಾಹಕರು ಖರೀದಿಸುವ ಇಂಧನದಲ್ಲಿ ವಾಸ್ತವವಾಗಿ ಎಷ್ಟು ಎಥೆನಾಲ್ ಇದೆ ಎಂಬ ಮಾಹಿತಿ ಅವರಿಗೆ ಸಿಗುತ್ತಿಲ್ಲ ಎಂದು ವಾದಿಸಿದ್ದಾರೆ. "ಮೋದಿ ಜೀ, ನಮಗೆ ಹೇಳಿ – ದೇಶದ ವಾಹನಗಳ ಇಂಧನ ಟ್ಯಾಂಕ್‌ಗಳಲ್ಲಿ ಏನನ್ನು ತುಂಬಲಾಗುತ್ತಿದೆ? ಪೆಟ್ರೋಲ್‌ನಲ್ಲಿ ನಿಜವಾಗಿಯೂ ಎಷ್ಟು ಎಥೆನಾಲ್ ಇದೆ? ಶೇ. 20ಕ್ಕಿಂತ ಹೆಚ್ಚು ಎಥೆನಾಲ್ ಮಿಶ್ರಣ ಮಾಡುತ್ತಿರುವ ಕಂಪನಿಗಳ ವಿರುದ್ಧ ಯಾವಾಗ ಕ್ರಮ ಕೈಗೊಳ್ಳಲಾಗುತ್ತದೆ" ಎಂದು ಅವರು ಪ್ರಶ್ನಿಸಿದ್ದಾರೆ.

ಎಥೆನಾಲ್ ಬ್ಲೆಂಡಿಂಗ್ ವಿಚಾರದಲ್ಲಿ ಕೇಂದ್ರ ಸರ್ಕಾರದಿಂದ ಜನರಿಗೆ ದೊಡ್ಡ ಮೋಸ: ಸಚಿವ ಪ್ರಿಯಾಂಕ್ ಆರೋಪ

ಬೆಂಗಳೂರು, ನ.7: ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಪೆಟ್ರೋಲ್‌ನಲ್ಲಿ ಎಥೆನಾಲ್ ಬ್ಲೆಂಡಿಂಗ್ ವಿಚಾರದಲ್ಲಿ ಕೇಂದ್ರ ಸರ್ಕಾರ ದೊಡ್ಡ ಮೋಸ ಮಾಡುತ್ತಿದೆ ಎಂದು ತೀವ್ರ ಆರೋಪ ಮಾಡಿದ್ದಾರೆ. ಇದು ಕೇಂದ್ರ ಸಚಿವರ ಮಕ್ಕಳಿಗೆ ಲಾಭ ಮಾಡುವ ಯೋಜನೆಯಾಗಿದೆ ಎಂದು ಅವರು ಆರೋಪಿಸಿದ್ದಾರೆ.



ಬೆಂಗಳೂರುನಲ್ಲಿ ಮಾತನಾಡಿದ ಅವರು, "ಎಥೆನಾಲ್ ಬ್ಲೆಂಡಿಂಗ್ ಒಂದು ಪ್ರಯೋಗ ಎಂದು ಹೇಳಲಾಗುತ್ತಿದೆ. ಆದರೆ ಇಡೀ ದೇಶದಲ್ಲಿ ಈ ಪ್ರಯೋಗ ಮಾಡಲು ಸಾಧ್ಯವೇ? ಎನ್‌ಎಬಿಎಲ್ ಸಂಸ್ಥೆ ಸಹ ಬ್ಲೆಂಡಿಂಗ್ ಆಗುತ್ತಿದೆ ಎಂದು ವರದಿ ನೀಡಿದೆ. ಸರ್ಕಾರ ಜನರಿಗೆ ಸುಳ್ಳು ಹೇಳುತ್ತಿದೆ ಎಂದೇ ಇದರ ಅರ್ಥ" ಎಂದು ಪ್ರಶ್ನಿಸಿದ್ದಾರೆ.

"ಕೇಂದ್ರ ಸರ್ಕಾರ ಯಾಕೆ ಇಷ್ಟೊಂದು ಸುಳ್ಳು ಹೇಳುತ್ತಿದೆ? ಇದಕ್ಕೆ ಉತ್ತರ ನೀಡಬೇಕು. ಬಿಜೆಪಿ ಸಂಸದರು ಎಲ್ಲಿದ್ದಾರೆ? ಯಾಕೆ ಇದರ ಬಗ್ಗೆ ಮಾತನಾಡುತ್ತಿಲ್ಲ? ತೆರಿಗೆ, ಮೆಟ್ರೋ ದರ ಹೆಚ್ಚಾದಾಗ ಯಾಕೆ ಮಾತನಾಡುತ್ತಿಲ್ಲ? ಮೋದಿ ಸರ್ಕಾರ ಜನರಿಗೆ ಮೋಸ ಮಾಡುತ್ತಿದೆ" ಎಂದು ಖರ್ಗೆ ತೀಕ್ಷ್ಣ ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದಲ್ಲಿ ನಡೆದಿರುವ ಏಳು ಹತ್ಯೆಗಳ ತನಿಖೆ ಇನ್ನೂ ಪ್ರಗತಿಯಲ್ಲಿದ್ದು, ಏಳರಲ್ಲಿ ಒಂದು ಮೃತದೇಹವನ್ನು ಪತ್ತೆಹಚ್ಚಲಾಗಿದೆ ಎಂದರು

ಹತ್ಯೆಯ ಉದ್ದೇಶ ಏನು ಎಂಬುದನ್ನು ಆರೋಪಿ ಹೇಳಿದ್ದಾನೆ ಅವರ ಮನೆಯವರು ಸರಿಯಾಗಿ ಮಾತನಾಡಿಸುತ್ತಿರಲಿಲ್ಲ ಎಂಬುದು ಅವನ ಆರೋಪವಾಗಿದೆ. ಸ್ವಲ್ಪ ಅವರ ಪತ್ನಿ ಮೇಲೆಯೂ ಆತ ಆರೋಪ ಮಾಡುತ್ತಿದ್ದಾನೆ. ದಂಪತಿಗಳ ನಡುವೆ 13 ರಿಂದ 15 ವರ್ಷಗಳ ವಯಸ್ಸಿನ ವ್ಯತ್ಯಾಸವಿದೆ. ನೆರೆಯವರು ದಿನನಿತ್ಯ ಜಗಳ, ಕೂಗಾಟ, ಚೀರಾಟ ನಡೆಯುತ್ತಿತ್ತು ಎಂದು ಹೇಳಿದ್ದಾರೆ" ಎಂದು ಮಾಹಿತಿ ನೀಡಿದ್ದಾರೆ. ಮುಂದುವರಿದು, "ನಾವು ಮತ್ತು ಇತರೆ ಆರೋಪಿಗಳೇನು ಹೇಳುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ. ಅವರ ಮಗಳು (ಅಪ್ರಾಪ್ತವಯಸ್ಕಳು) ವಿಚಾರಣೆ ನಡೆಸುತ್ತಿದ್ದೇವೆ. ಆಕೆಗೆ ಏನೋ ನಂಬಿಸಿ ಬ್ರೈನ್ ವಾಶ್ ಮಾಡಿದಂತಿದೆ. ಸತ್ಯಾಂಶ ಹೊರಬರಲು ಇನ್ನೂ ಒಂದು, ಎರಡು, ಮೂರು ದಿನಗಳು ಬೇಕಾಗುತ್ತವೆ" ಎಂದು ಖರ್ಗೆ ತಿಳಿಸಿದ್ದಾರೆ.

ಎತ್ತಿನಹೊಳೆ ಯೋಜನೆಯಲ್ಲಿ ಬೈರಗೊಂಡ್ಲು ಜಲಾಶಯವನ್ನು ಕೈಬಿಡಬೇಡಿ

ಹೆಚ್ಚು ನೀರು ಸಂಗ್ರಹಿಸಲು ದೊಡ್ಡ ಜಲಾಶಯ ನಿರ್ಮಿಸಿ: ಸಂಸದ ಡಾ.ಕೆ.ಸುಧಾಕರ್ ಆಗ್ರಹ



ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತದ ಅಧಿಕಾರಿಗಳೊಂದಿಗೆ ಸಭೆ

ಬೆಂಗಳೂರು, ನ.7: ಎತ್ತಿನಹೊಳೆ ಯೋಜನೆಯಲ್ಲಿ ಬೈರಗೊಂಡ್ಲು ಜಲಾಶಯವನ್ನು ಹಿಂದಿನ ವಿನ್ಯಾಸದಂತೆಯೇ ನಿರ್ಮಿಸುವ ಬದಲು ಹೊಸ ಕಡೆ ನಿರ್ಮಿಸಿ ರೈತರನ್ನು ವಂಚಿಸಲಾಗುತ್ತಿದೆ. ಹಿಂದಿನ ವಿನ್ಯಾಸದಂತೆ ಜಲಾಶಯ ನಿರ್ಮಿಸಿದರೆ ಇಡೀ ವರ್ಷ ರೈತರಿಗೆ ನೀರು ನೀಡಬಹುದು. ಆದ್ದರಿಂದ ಸರ್ಕಾರ ಹಳೆ ವಿನ್ಯಾಸದಂತೆಯೇ 6 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯದ ಬೈರಗೊಂಡ್ಲು ಜಲಾಶಯವನ್ನು ನಿರ್ಮಿಸಬೇಕು ಎಂದು ಸಂಸದ ಡಾ.ಕೆ.ಸುಧಾಕರ್ ಆಗ್ರಹಿಸಿದ್ದಾರೆ. ಎತ್ತಿನಹೊಳೆ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ವಿಶ್ವೇಶ್ವರಯ್ಯ ಜಲನಿಗಮದ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಹಾಗೂ ಕೋಲಾರ ಭಾಗಕ್ಕೆ ಶೀಘ್ರವಾಗಿ ನೀರು ಹರಿಸುವ ಕುರಿತು ಕ್ರಮ ವಹಿಸಬೇಕಿದ್ದು, ಇದಕ್ಕಾಗಿ ಕಾಮಗಾರಿಗಳನ್ನು ಚುರುಕುಗೊಳಿಸಬೇಕಿದೆ. ಕಾಲಕಾಲಕ್ಕೆ ಅನುದಾನ ಬಿಡುಗಡೆ ಮಾಡಿ ಗುತ್ತಿಗೆದಾರರಿಗೆ ಬಾಕಿ ಪಾವತಿಸಿ ಕಾಮಗಾರಿ ಸ್ಥಗಿತವಾಗದಂತೆ ಎಚ್ಚರ ವಹಿಸಬೇಕು. ಭೂಸ್ವಾಧೀನ ಪ್ರಕ್ರಿಯೆಯನ್ನು ಕೂಡ ಶೀಘ್ರವಾಗಿ ಮುಗಿಸಬೇಕು. ಈ ಭಾಗದ ಜನರು ಎತ್ತಿನಹೊಳೆ ನೀರಿಗಾಗಿ ಕಾಯುತ್ತಿದ್ದಾರೆ. ಈ ಬಾರಿ ಬರಗಾಲದಿಂದಾಗಿ ನೀರಿನ ಇನ್ನಷ್ಟು ಕೊರತೆ ಉಂಟಾಗಿರುವುದರಿಂದ ಈ ಶಾಶ್ವತ ನೀರಾವರಿ ಯೋಜನೆಯನ್ನು ಬೇಗ ಪೂರ್ಣಗೊಳಿಸಲು ಕ್ರಮ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಎತ್ತಿನಹೊಳೆ ಯೋಜನೆಯಲ್ಲಿನ ತೊಡಕುಗಳನ್ನು ಬದ್ಧತೆಯಿಂದ ನಿವಾರಣೆ ಮಾಡಿದ್ದರೆ, ಈಗಾಗಲೇ ಬಯಲುಸೀಮೆಗೆ ನೀರು ದೊರೆಯುತ್ತಿತ್ತು. ಬೈರಗೊಂಡ್ಲು ಜಲಾಶಯದಲ್ಲಿ 6 ಟಿಎಂಸಿ ನೀರು ಸಂಗ್ರಹವಾಗುತ್ತದೆ.

ಆದರೆ ಇದನ್ನು ಕೈಬಿಟ್ಟು ದೊಡ್ಡಬಳ್ಳಾಪುರದ ಲಕ್ಕೇನಹಳ್ಳಿಯಲ್ಲಿ 1.6, 1.8 ಟಿಎಂಸಿ ನೀರು ಸಂಗ್ರಹಿಸುವ ಜಲಾಶಯ ನಿರ್ಮಿಸಲು ತೀರ್ಮಾನಿಸಲಾಗಿದೆ. ಇದರಿಂದಾಗಿ ಮೂರು ಜಿಲ್ಲೆಗಳ ರೈತರಿಗೆ ಮೋಸವಾಗಿದೆ. ಈಗಾಗಲೇ ಬಹಳಷ್ಟು ತಡವಾಗಿದೆ. ಆದ್ದರಿಂದ ಶಾಶ್ವತವಾಗಿ ಇದಕ್ಕೆ ಪರಿಹಾರ ಕಲ್ಪಿಸುವ ಕೆಲಸವನ್ನು ಸರ್ಕಾರ ಮಾಡಬೇಕು. ಮೊದಲಿನಂತೆಯೇ ಬೈರಗೊಂಡ್ಲು ಜಲಾಶಯವನ್ನು ಅದೇ ಸ್ಥಳದಲ್ಲಿ ನಿರ್ಮಿಸಿ ಹೆಚ್ಚು ನೀರು ಸಂಗ್ರಹಿಸಬೇಕು ಎಂದು ಆಗ್ರಹಿಸಿದರು.

> ಎತ್ತಿನಹೊಳೆ ಯೋಜನೆಯಲ್ಲಿ ನೀರು ಸಿಗುವುದರಲ್ಲಿ ನಮ್ಮ ಜಿಲ್ಲೆ ಕೊನೆಯ ಭಾಗದಲ್ಲಿದೆ. ರಾಜ್ಯ ಸರ್ಕಾರ ಮುಂದಿನ ವರ್ಷವೇ ನೀರು ನೀಡಲಾಗುವುದು ಎಂದು ಹೇಳಿದೆ. ಆದರೆ ಇದು ಸಾಧ್ಯವಾಗಬೇಕೆಂದರೆ ಭೂ ಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರವಾಗಿ ನಡೆಸಬೇಕಿದೆ. ನಮ್ಮ ಭಾಗ ಮಳೆಯನ್ನೇ ನಂಬಿಕೊಂಡಿದ್ದು, ಸಂಸ್ಕರಿತ ನೀರನ್ನು ಬಳಸುವ ದುಸ್ಥಿತಿ ಇದೆ. ಇಂತಹ ಪರಿಸ್ಥಿತಿಯಲ್ಲಿ ಮೂಲ ವಿನ್ಯಾಸವನ್ನು ಬದಲಿಸಲಾಗಿದೆ.
>
> **-ಡಾ.ಕೆ. ಸುಧಾಕರ್,** ಸಂಸದ

ಭೂಸ್ವಾಧೀನಾಧಿಕಾರಿಗಳ ಕೊರತೆ

ಮೂರು ಜಿಲ್ಲೆಗಳಿಗೆ ಒಬ್ಬ ವಿಶೇಷ ಭೂಸ್ವಾಧೀನಾಧಿಕಾರಿಯನ್ನು ಸರ್ಕಾರ ನೇಮಿಸಿದೆ. ಹೀಗೆ ಮಾಡಿದರೆ ಅವರು ಪ್ರವಾಸ ಮಾಡಿ ಮಾಹಿತಿ ಸಂಗ್ರಹಿಸುವುದು ಕಷ್ಟವಾಗುತ್ತದೆ. ಇದರ ಬದಲು ಸಹಾಯಕ ಆಯುಕ್ತರಿಗೆ ಭೂಸ್ವಾಧೀನ ಮಾಡುವ ಅಧಿಕಾರವನ್ನು ನೀಡಬೇಕು. ಕೇವಲ ಭಾಷಣಗಳನ್ನು ಮಾಡುವುದರಿಂದ ಯೋಜನೆ ಪೂರ್ಣಗೊಳ್ಳುವುದಿಲ್ಲ ಹಾಗೂ ಕಾಮಗಾರಿ ಮುಗಿಯುವುದಿಲ್ಲ. ಬಿಜೆಪಿ ಅವಧಿಯಲ್ಲಿ ಕೋವಿಡ್ ಇದ್ದಾಗಲೂ 9,000 ಕೋಟಿ ರೂ. ಯೋಜನೆಗೆ ನೀಡಲಾಗಿದೆ. ಗುತ್ತಿಗೆದಾರರಿಗೆ ಹಣ ನೀಡದಿದ್ದರೆ ಕಾಮಗಾರಿ ಮಾಡಲು ಹೇಗೆ ಸಾಧ್ಯ ನಮ್ಮ ಜಿಲ್ಲೆಗಳ ಬಗ್ಗೆ ಕಾಳಜಿ ಇದ್ದರೆ ಕೂಡಲೇ ಹೆಚ್ಚು ಅನುದಾನ ನೀಡಬೇಕು ಎಂದು ಡಾ.ಕೆ. ಸುಧಾಕರ್ ಒತ್ತಾಯಿಸಿದರು.

ಎಲ್ಲರಿಗೂ ನೀರು ನೀಡಲು ಸಾಧ್ಯವೇ?

ಮಧುಗಿರಿ, ಕೊರಟಗೆರೆ, ತುಮಕೂರು, ಪಾವಗಡ, ಅರಸೀಕೆರೆ, ಕಡೂರು, ಬೇಲೂರು ಸೇರಿ ಹಲವಾರು ತಾಲೂಕುಗಳು ಮಾರ್ಗಮಧ್ಯೆ ಬರುತ್ತದೆ. ಕೊನೆಯಲ್ಲಿ ಚಿಕ್ಕಬಳ್ಳಾಪುರದ ಬಾಗೇಪಲ್ಲಿ, ಚಿಂತಾಮಣಿ, ಕೋಲಾರ ಬರುತ್ತದೆ. 24.1 ಟಿಎಂಸಿ ನೀರನ್ನು ಈ ಎಲ್ಲ ಭಾಗಗಳಿಗೆ ನೀಡಬೇಕಾಗುತ್ತದೆ. ಕಳೆದೆರಡು ವರ್ಷಗಳಲ್ಲಿ 7–8 ಟಿಎಂಸಿ ಮಳೆ ಸುರಿದಿದೆ. ಇಷ್ಟು ಕಡಿಮೆ ನೀರನ್ನು ನೀಡಲು ಹೊರಟರೆ ತುಮಕೂರಿಗೆ ಬರುವಾಗ ನೀರು ಖಾಲಿಯಾಗುತ್ತದೆ. ಆದ್ದರಿಂದ ವೈಜ್ಞಾನಿಕವಾಗಿ ಈ ಬಗ್ಗೆ ವಿಚಾರ ಮಾಡಬೇಕಿದೆ. 8 ಟಿಎಂಸಿ ನೀರು ಮಳೆ ಬಂದಾಗ ಯಾವ ಪ್ರಮಾಣದಲ್ಲಿ ಯಾವ ಜಿಲ್ಲೆಗೆ ನೀರು ನೀಡುವ ಕುರಿತು ತೀರ್ಮಾನ ಮಾಡಬೇಕು ಎಂದು ಡಾ.ಕೆ. ಸುಧಾಕರ್ ಸಲಹೆ ನೀಡಿದರು.

ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಮೇಂದ್ರ, ಹಿರಿಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್, ಕಾರ್ಯನಿರ್ವಾಹಕ ಎಂಜಿನಿಯರ್ ಮುರಳಿ, ಚಿಕ್ಕಬಳ್ಳಾಪುರದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಅಶ್ವತ್ಥನಾರಾಯಣ್ ಸಭೆಯಲ್ಲಿ ಉಪಸ್ಥಿತರಿದ್ದರು.

30 ಲಕ್ಷ ಹಣತೆ: ಅಯೋಧ್ಯೆಯಲ್ಲಿ ವಿಶ್ವ ದಾಖಲೆ



ಲಖನೌ: ಭಾರತ ಸೇರಿದಂತೆ ವಿಶ್ವಾದ್ಯಂತ ಬೆಳಕಿನ ಹಬ್ಬ ದೀಪಾವಳಿಯ ಸಂಭ್ರಮ ಮನೆ ಮಾಡಿದೆ. ಉತ್ತರ ಪ್ರದೇಶದ ಅಯೋಧ್ಯೆ ರಾಮಮಂದಿರದಲ್ಲಿ ಬೆಳಕಿನ ಹಬ್ಬವನ್ನು ಈ ಬಾರಿಯೂ ವಿಶೇಷವಾಗಿ ದಾಖಲೆಯ ರೀತಿಯಲ್ಲಿ ಆಚರಿಸಲಾಗುತ್ತಿದೆ. ಶನಿವಾರ 10ನೇ ದೀಪೋತ್ಸವ ನಡೆಸಲಾಗಿದ್ದು, 30 ಲಕ್ಷ ಹಣತೆಗಳನ್ನು ಅಯೋಧ್ಯೆಯ ಸರಯೂ ನದಿ ದಂಡೆಯ 56 ಘಾಟ್‌ಗಳಲ್ಲಿ ಬೆಳಗುವ ಮೂಲಕ ತೇತ್ರಾಯುಗದ ರಾಜ ವೈಭವವನ್ನು ಯೋಗಿ ಆದಿತ್ಯನಾಥ ಸರ್ಕಾರ ನೆನಪಿಸಿದೆ.ಸಾವಿರಾರು ಸ್ವಯಂಸೇವಕರು, ವಿದ್ಯಾರ್ಥಿಗಳು ಏಕಕಾಲಕ್ಕೆ ಹಣತೆಗಳನ್ನು ಬೆಳಗುವ ಮೂಲಕ ಸ್ವರ್ಗವೇ ಧರೆಗಿಳಿದ ಸಂಭ್ರಮ ಮೂಡಿಸಿದರು. ವಿಶೇಷ ಎಂದರೆ ಅತೀ ಹೆಚ್ಚು ಹಣತೆ ಬೆಳಗಿದ ಮತ್ತೊಂದು ವಿಶ್ವ ದಾಖಲೆ ಅಯೋಧ್ಯೆ ದೀಪೋತ್ಸವದ ಪಾಲಾಯ್ತು. ಮತ್ತೊಂದು ವಿಶೇಷ ಎಂದರೆ ಇದು ಅಯೋಧ್ಯೆಯಲ್ಲಿ ದಾಖಲಾಗುವ 9ನೇ ವಿಶ್ವ ದಾಖಲೆ.

ದೀಪೋತ್ಸವದ ಸಂಭ್ರಮ ಶನಿವಾರ ಸಂಜೆಯಿಂದಲೇ ಕಂಡುಬಂತು. ಘಾಟ್‌ಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು. ರಾಮಾಯಣ ನಾಟಕ ಭಕ್ತಿ ಭಾವದಲ್ಲಿ ಮಿಂದೇಳುವಂತೆ ಮಾಡಿತು. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ನಾಯಕತ್ವದಲ್ಲಿ ನಡೆಯುವ ಈ ದೀಪೋತ್ಸವ ಭಾರತದ ಉದಾತ್ತ ಸಂಸ್ಕೃತಿಯನ್ನು ವಿಶ್ವಕ್ಕೆ ಪರಿಚಯಿಸಿದೆ ಎಂದು ಉತ್ತರ ಪ್ರದೇಶ ಸರ್ಕಾರ ತಿಳಿಸಿದೆ.

ಜಗದ್ಗುರು ಸ್ವಾಮಿ ಸತೀಶಾಚಾರ್ಯ ಜಿ ಮಹಾರಾಜ್ ಅಯೋಧ್ಯೆಗೆ ಆಗಮಿಸಿ ದೀಪೋತ್ಸವದ ಸಿದ್ಧತೆ ಪರಿಶೀಲಿಸಿದರು. ತೇತ್ರಾಯುಗದಲ್ಲಿ ಪ್ರಭು ಶ್ರೀರಾಮ ಚಂದ್ರನಿಂದ ಅಯೋಧ್ಯೆ ದೀಪದ ಬೆಳಕಿನಲ್ಲಿ ಬೆಳಗಿದಂತೆ ಯೋಗಿ ಆದಿತ್ಯನಾಥರ ಪ್ರಯತ್ನದಿಂದ ಮತ್ತೊಮ್ಮೆ ಅಂತಹದ್ದೇ ವೈಭವ ಮರುಕಳಿಸಿದೆ ಎಂದು ಅವರು ಬಣ್ಣಿಸಿದರು.

10ನೇ ಆವೃತ್ತಿಯ ಅಯೋಧ್ಯೆ ದೀಪೋತ್ಸವ ವೇಳೆ 2,100 ಡ್ರೋನ್ ಬಳಸಲಾಗಿದ್ದು, ಲೇಸರ್ ಶೋ ಕೂಡ ಆಯೋಜಿಸಲಾಯಿತು. 2,500 ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮ ನೀಡಿದರು.

ವಿಶ್ವ ದಾಖಲೆ

ಕಳೆದ ಬಾರಿ 26 ಲಕ್ಷ ಹಣತೆ ಬೆಳಗುವ ಮೂಲಕ ಗಿನ್ನೆಸ್ ದಾಖಲೆ ಮಾಡಿದ್ದ ಉತ್ತರ ಪ್ರದೇಶ ಸರ್ಕಾರ ಈ ಬಾರಿ 30 ಲಕ್ಷ ಹಣತೆ ಹಚ್ಚುವ ಮೂಲಕ ಅದನ್ನು ಮೀರಿ ಮತ್ತೊಂದು ಇತಿಹಾಸ ಬರೆದಿದೆ. ಇದಕ್ಕೆ 35,000 ವಿದ್ಯಾರ್ಥಿಗಳು ಸೇರಿ ಹಲವು ಸ್ವಯಂಸೇವಕರು ಕೈಜೋಡಿಸಿದರು.

ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಕಟ್ಟುನಿಟ್ಟಿನ ಕ್ರಮ

ಬಂಡೀಪುರದಲ್ಲಿ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಸಮಗ್ರ ಪರಿಶೀಲನೆ, ಡ್ರೋನ್ ಕೈಪಿಡಿ ಬಿಡುಗಡೆ

ಗುಂಡ್ಲುಪೇಟೆ, ನ.7: ಮಾನವ–ವನ್ಯಜೀವಿ ಸಂಘರ್ಷ ತಡೆಗಟ್ಟಲು ರೈಲ್ವೆ ಬ್ಯಾರಿಕೇಡ್, ಸೋಲಾರ್ ತಂತಿಬೇಲಿ ಮತ್ತು ಆನೆ ಕಂದಕಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಸೂಚಿಸಿದರು.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶಕ್ಕೆ ಅರಣ್ಯ ಭೇಟಿ ನೀಡಿ, ಹಿರಿಯ ಅಧಿಕಾರಿಗಳೊಂದಿಗೆ ಸಮಗ್ರ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಮಾನವ–ವನ್ಯಜೀವಿ ಸಂಘರ್ಷ ತಡೆಗಟ್ಟಲು ರೈಲ್ವೆ ಬ್ಯಾರಿಕೇಡ್, ಸೋಲಾರ್ ತಂತಿಬೇಲಿ ಮತ್ತು ಆನೆ ಕಂದಕಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು, ಬಂಡೀಪುರ ವ್ಯಾಪ್ತಿಯಲ್ಲಿ ಗುರುತಿಸಲಾಗಿರುವ ಅರಣ್ಯ ಒತ್ತುವರಿಯನ್ನು ಸಂಪೂರ್ಣವಾಗಿ ತೆರವುಗೊಳಿಸಲು ಮತ್ತು ಕಳ್ಳಬೇಟೆ ತಡೆ ಶಿಬಿರಗಳನ್ನು ಕೂಡಲೇ ದುರಸ್ತಿಪಡಿಸಲು ಕಟ್ಟುನಿಟ್ಟಿನ ಆದೇಶ ನೀಡಿದರು.

ಕೇರಳ ಗಡಿಯ ಮೂಲೇಹೊಳೆ ಚೆಕ್‌ಪೋಸ್ಟ್‌ಗೆ ಭೇಟಿನೀಡಿ, ಹೊರರಾಜ್ಯದಿಂದ ಬರುವ ವೈದ್ಯಕೀಯ ತ್ಯಾಜ್ಯ ವಿಲೇವಾರಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ವನ್ಯಜೀವಿ ದಾಳಿಯಿಂದ ಬೆಳೆನಷ್ಟ ಅನುಭವಿಸುವ ರೈತರಿಗೆ ಶೀಘ್ರ ಪರಿಹಾರ ಹಾಗೂ ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಥರ್ಮಲ್ ಡ್ರೋಣ್‌ಗಳು, ಜಿಪಿಎಸ್ ರೇಡಿಯೋ ಕಾಲರ್‌ಗಳು, ವನ್ಯಜೀವಿ ಟೆಲಿಮೆಟ್ರಿ ತಂತ್ರಜ್ಞಾನ,



ಶ್ವಾನ ದಳ ಹಾಗೂ ಜಿಲ್ಲಾ ಸಂಘರ್ಷ ನಿಯಂತ್ರಣ ಕೇಂದ್ರದ ಕಾರ್ಯ ವೈಖರಿಯನ್ನು ವೀಕ್ಷಿಸಿದರು. ಅರಣ್ಯದಲ್ಲಿ ಸಫಾರಿ ನಡೆಸಿ ಪರಿಸರ ಸ್ಥಿತಿಗತಿ ಪರಿಶೀಲಿಸಿದರು.

ಸಭೆಯಲ್ಲಿ ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಕುಮಾರ್ ಪುಷ್ಕರ್, ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮನೋಜ್ ರಾಜನ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಾದ ರವಿಶಂಕರ್ ಆರ್., ಡಾ. ಎಂ. ಮಾಲತಿ ಪ್ರಿಯಾ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ನಂದೀಶ್ ಎಲ್., ಡಾ. ಪ್ರಭು ಗೌಡ್ ಹಾಗೂ ವಲಯ ಅರಣ್ಯಾಧಿಕಾರಿಗಳಾದ ಸತೀಶ್ ಮತ್ತು ಮೋಹನ್ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

155 ದಾಟಿದ ಹುಲಿಗಳ ಸಂಖ್ಯೆ

ಬಂಡೀಪುರದಲ್ಲಿ ಹುಲಿಗಳ ಸಂಖ್ಯೆ 155ರ ಗಡಿ ದಾಟಿದ್ದು, ಪ್ರತಿ ಚದರ ಕಿಲೋಮೀಟರ್ ವ್ಯಾಪ್ತಿಯಲ್ಲಿ ಜಿಂಕೆ, ಕಾಡೆಮ್ಮೆ ಹಾಗೂ ಕಡವೆಗಳಂತಹ ಬೇಟೆ ಪ್ರಾಣಿಗಳು ಹೇರಳವಾಗಿವೆ. ಇದು ಅರಣ್ಯದ ಸಮತೋಲಿತ ಮತ್ತು ಆರೋಗ್ಯಕರ ಪರಿಸರ ವ್ಯವಸ್ಥೆಗೆ ಸಾಕ್ಷಿಯಾಗಿದೆ ಎಂದು ರಾಮಲಿಂಗಾರೆಡ್ಡಿ ಮೆಚ್ಚುಗೆ ವ್ಯಕ್ತಪಡಿಸಿದರು. ಪರಿಸರ ಜಾಗೃತಿಯ ಸಂಕೇತವಾಗಿ ಅರಣ್ಯ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನೂ ನೆರವೇರಿಸಲಾಯಿತು. ಅರಣ್ಯ ಕಣ್ಗಾವಲು ಬಲಪಡಿಸಲು ಬಂಡೀಪುರ ವಿಭಾಗ ಸಿದ್ಧಪಡಿಸಿದ ಮಹತ್ವದ ಡ್ರೋನ್ ಪೈಲಟ್ ಕ್ಷೇತ್ರ ಕೈಪಿಡಿಯನ್ನುಸಚಿವರು ಬಿಡುಗಡೆ ಮಾಡಿದರು. ಇದರೊಂದಿಗೆ ಪ್ರವಾಸಿಗರ ಹಿತರಕ್ಷಣೆ ಮತ್ತು ಸೇವೆಗಳನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಇಕೋ–ಟೂರಿಸಮ್ ಕ್ವಾಲಿಟಿ ಅಶ್ಯುರೆನ್ಸ್ ಆಂಡ್ ವಿಸಿಟರ್ ರಿಡ್ರೆಸಲ್ ಪ್ಲಾಟ್‌ಫಾರ್ಮ್‌ಗೆ ಚಾಲನೆ ನೀಡಲಾಯಿತು. ಕಾಡಿನ ರಕ್ಷಣೆಗೆ ಹಗಲಿರುಳು ಶ್ರಮಿಸುವ ಅರಣ್ಯ ಸಿಬ್ಬಂದಿಗೆ ಸಚಿವರು ರೇಷನ್ ಕಿಟ್‌ಗಳು ಹಾಗೂ ಕ್ಷೇತ್ರ ಕಾರ್ಯಾಚರಣೆಗಳಿಗಾಗಿ ನೂತನ ವಾಹನಗಳನ್ನು ವಿತರಿಸಿದರು.

ಮುಂದಿನ ಶೈಕ್ಷಣಿಕ ವರ್ಷದಿಂದ ಎಲ್ಲ ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ

ದ್ವಿಭಾಷಾ ಶಾಲೆಗಳನ್ನಾಗಿ ಪರಿವರ್ತಿಸಲು ಸರ್ಕಾರದ ಮಹತ್ವದ ಹೆಜ್ಜೆ: ಸಚಿವ ಮಧು ಬಂಗಾರಪ್ಪ

ಬೆಂಗಳೂರು, ನ.7: ಸರ್ಕಾರಿ ಶಾಲೆಗಳಿಂದ ಖಾಸಗಿ ಶಾಲೆಗಳತ್ತ ವಿದ್ಯಾರ್ಥಿಗಳ ವಲಸೆ ತಡೆಯಲು ಕರ್ನಾಟಕ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದ್ದು, ಮುಂದಿನ ಶೈಕ್ಷಣಿಕ ವರ್ಷದಿಂದ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ವಿಭಾಗಗಳನ್ನು ಆರಂಭಿಸಿ, ಅವುಗಳನ್ನು ದ್ವಿಭಾಷಾ ಶಾಲೆಗಳನ್ನಾಗಿ ಪರಿವರ್ತಿಸಲು ನಿರ್ಧರಿಸಿದೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

ಪೋಷಕರಲ್ಲಿ ಇಂಗ್ಲಿಷ್ ಮಾಧ್ಯಮ ಶಿಕ್ಷಣದ ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರಿ ಶಾಲೆಗಳಲ್ಲೇ ಕನ್ನಡದ ಜೊತೆಗೆ ಇಂಗ್ಲಿಷ್ ಮಾಧ್ಯಮದ ಆಯ್ಕೆಯನ್ನು ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ. ಮಕ್ಕಳಿಗೆ ಯಾವ ಬೋಧನಾ ಮಾಧ್ಯಮ ಬೇಕೆಂಬುದನ್ನು ಆಯ್ಕೆ ಮಾಡುವ ಹಕ್ಕು ಪೋಷಕರಿಗಿದೆ ಎಂದು ಸಚಿವರು ಹೇಳಿದ್ದಾರೆ. 48,527 ಸರ್ಕಾರಿ ಶಾಲೆಗಳಿಗೆ ವಿಸ್ತರಣೆ ಯುಡಿಐಎಸ್‌ಇ+ 2025–26ರ ಅಂಕಿಅಂಶಗಳ ಪ್ರಕಾರ ಕರ್ನಾಟಕದಲ್ಲಿ 48,527 ಸರ್ಕಾರಿ ಶಾಲೆಗಳಿವೆ. ಈ ಎಲ್ಲ ಶಾಲೆಗಳಲ್ಲೂ ಹಂತ ಹಂತವಾಗಿ ದ್ವಿಭಾಷಾ ವ್ಯವಸ್ಥೆ ಜಾರಿಗೆ ತರಲು ಸರ್ಕಾರ ಮುಂದಾಗಿದೆ. ಈಗಾಗಲೇ ರಾಜ್ಯದಲ್ಲಿ 6,539 ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ವಿಭಾಗಗಳು ಆರಂಭವಾಗಿವೆ.



2024–25ರಲ್ಲಿ ಸುಮಾರು 2,000 ಶಾಲೆಗಳಿಗೆ ಹೊಸ ವಿಭಾಗಗಳನ್ನು ಆರಂಭಿಸಲು ಅನುಮತಿ ನೀಡಲಾಗಿತ್ತು. 2025–26ರಲ್ಲಿ ಮತ್ತಷ್ಟು 4,134 ಶಾಲೆಗಳನ್ನು ಯೋಜನೆಗೆ ಸೇರಿಸಲಾಗಿದೆ. ಈ ಯೋಜನೆಯಡಿ ಆರಂಭಿಕ ಹಂತದಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಮೊದಲ ಬ್ಯಾಚ್ ಇದೀಗ 7ನೇ ತರಗತಿಗೆ ತಲುಪಿದೆ. ಬೆಂಗಳೂರು ಉತ್ತರ ಮತ್ತು ದಕ್ಷಿಣ ವಲಯಗಳಲ್ಲಿ ಒಟ್ಟು 1,465 ಸರ್ಕಾರಿ ಶಾಲೆಗಳಿದ್ದು, ಅವುಗಳಲ್ಲಿ 1,103 ಶಾಲೆಗಳಿಗೆ ಇಂಗ್ಲಿಷ್ ಮಾಧ್ಯಮ ವಿಭಾಗ ಆರಂಭಿಸಲು ಅನುಮತಿ ನೀಡಲಾಗಿದೆ. ಬೆಂಗಳೂರು ದಕ್ಷಿಣ 730 ಶಾಲೆಗಳು. ಬೆಂಗಳೂರು ಉತ್ತರ 373 ಶಾಲೆಗಳು. ಈ ವಿಭಾಗಗಳು ಮೊದಲ ತರಗತಿಯಿಂದಲೇ ಆರಂಭವಾಗಲಿವೆ. ಸರ್ಕಾರದ ನಿರ್ಧಾರಕ್ಕೆ ಪೋಷಕರಿಂದ ಬೇಡಿಕೆ ಇರುವುದಾದರೂ, ಇಂಗ್ಲಿಷ್‌ನಲ್ಲಿ ಪರಿಣಾಮಕಾರಿಯಾಗಿ ಬೋಧಿಸಬಲ್ಲ ಶಿಕ್ಷಕರ ಲಭ್ಯತೆ ಯೋಜನೆಯ ಯಶಸ್ಸಿಗೆ ನಿರ್ಣಾಯಕವಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಈಗಾಗಲೇ ದ್ವಿಭಾಷಾ ಮಾಧ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳ ವಾಸ್ತವಿಕ ಸ್ಥಿತಿಯನ್ನು ಮೊದಲು ಪರಿಶೀಲಿಸಿ, ನಂತರ ರಾಜ್ಯಾದ್ಯಂತ ವಿಸ್ತರಣೆ ಮಾಡಬೇಕು ಎಂದು ಶಿಕ್ಷಣ ತಜ್ಞರು ಎಚ್ಚರಿಸಿದ್ದಾರೆ.

ರಾಜ್ಯದ 4 ಕಡೆ ಸರ್ಕಾರದಿಂದಲೇ ಐವಿಎಫ್ ಘಟಕ ಸ್ಥಾಪನೆಗೆ ನಿರ್ಧಾರ: ಸಚಿವ. ಖಾದರ್



ಮಂಗಳೂರು, ನ.7: ರಾಜ್ಯದಲ್ಲಿ ನಾಲ್ಕು ಕಡೆ ಸರ್ಕಾರದಿಂದಲೇ ಐವಿಎಫ್ ಘಟಕಗಳ ಸ್ಥಾಪನೆ ಮಾಡಲು ನಿರ್ಧಾರ ಮಾಡಲಾಗಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ಕೇಂದ್ರವನ್ನು ಮಂಗಳೂರಿನ ಲೇಡಿ ಗೋಷನ್ ಆಸ್ಪತ್ರೆಯಲ್ಲಿ ಸ್ಥಾಪಿಸಲಾಗುವುದು. ಬೆಂಗಳೂರು ಮತ್ತು ಮೈಸೂರಿನಲ್ಲಿಯೂ ಘಟಕ ನಿರ್ಮಾಣ ಮಾಡಲಾಗುವುದು, ಉತ್ತರ ಕರ್ನಾಟಕಕ್ಕೆ ಸಂಬಂಧಿಸಿ ಹುಬ್ಬಳ್ಳಿ, ಬೆಳಗಾವಿ ಅಥವಾ ಕಲಬುರಗಿಯಲ್ಲಿ ನಿರ್ಮಾಣ ಮಾಡಲಾಗುತ್ತದೆ. ಮಂಗಳೂರಿನ ಲೇಡಿಗೋಷನ್ ನಲ್ಲಿ ಘಟಕ ಸ್ಥಾಪನೆಗೆ ಸಂಬಂಧಿಸಿ 5 ಕೋ.ರೂ. ಮೊತ್ತದ ಕಾರ್ಯಯೋಜನೆ ಸಿದ್ಧಪಡಿಸಲಾಗಿದೆ ಎಂದರು.

ಸದ್ಯ ಖಾಸಗಿ ಆಸ್ಪತ್ರೆಗಳಲ್ಲಿ ಮಾತ್ರ ಈ ಸೇವೆ ಲಭ್ಯವಿದೆ. ಬಡವರು 2–3 ಲಕ್ಷ ರೂ. ವೆಚ್ಚವನ್ನು ಭರಿಸುವುದು ಕಷ್ಟವಾಗುತ್ತಿದೆ. ಆ ನಿಟ್ಟಿನಲ್ಲಿ ಸರಕಾರದಿಂದಲೇ ಉಚಿತವಾಗಿ ಈ ಚಿಕಿತ್ಸೆ ನೀಡಲು ಘಟಕಗಳ ಸ್ಥಾಪನೆ ಮಾಡಲಾಗುತ್ತಿದೆ ಎಂದರು.

ಉಡುಪಿ ಜಿಲ್ಲೆಯ ಬೈಂದೂರು ಮತ್ತು ದ.ಕನ್ನಡ ಜಿಲ್ಲೆಯ ಮೂಡುಬಿದಿರೆಯಲ್ಲಿ ತಾಲೂಕು ಆಸ್ಪತ್ರೆ ರಚನೆ ಮಾಡಲಾಗುತ್ತದೆ. ಪ್ರಸ್ತುತ ಇರುವ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಿ ತಾಲೂಕು ಆಸ್ಪತ್ರೆ ರಚನೆ ಮಾಡಲಾಗುವುದು. ಇದಕ್ಕಾಗಿ ತಲಾ 25 ಕೋ.ರೂ. ಅನುದಾನ ಬಿಡುಗಡೆ ಮಾಡಲಾಗಿದೆ ಎಂದರು.

ಅರ್ಜಿ ವಿಲೇವಾರಿಯಷ್ಟೇ ಅಲ್ಲ, ನಾಗರಿಕರಿಗೆ ನೈಜ ಪರಿಹಾರ ಸಿಗಬೇಕು

ಕಾನೂನು ತೊಡಕಿರುವ ಪ್ರಕರಣಗಳನ್ನು ಹೊರತುಪಡಿಸಿ ಬಾಕಿ ಕೆಲಸಗಳು ಕಾಲಮಿತಿಯಲ್ಲಿ ಆಗಬೇಕು

ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಅಧಿಕಾರಿಗಳಿಗೆ ಸಚಿವ ರಘುಮೂರ್ತಿ ಸೂಚನೆ

ಚಿತ್ರದುರ್ಗ, ನ.7: ಜಿಲ್ಲೆಯಲ್ಲಿ ನಡೆದ ಪ್ರಜಾಸೇವಾ ಆಂದೋಲನಾ ಸಭೆಗಳಲ್ಲಿ ಸಲ್ಲಿಕೆಯಾದ ಅರ್ಜಿಗಳ ಪೈಕಿ ಹೆಚ್ಚಿನ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಆದರೆ ಕೇವಲ ಅರ್ಜಿ ವಿಲೇವಾರಿಯಷ್ಟೇ ಅಲ್ಲದೆ, ಸಾರ್ವಜನಿಕರ ಸಮಸ್ಯೆಗಳಿಗೆ ನಿಜವಾದ ಪರಿಹಾರ ಸಿಗಬೇಕು ಹಾಗೂ ಕಾನೂನು ತೊಡಕುಗಳಿರುವ ಪ್ರಕರಣಗಳ ಹೊರತುಪಡಿಸಿ ಉಳಿದ ಕೆಲಸಗಳು ಕಾಲಮಿತಿಯಲ್ಲಿ ಆಗಬೇಕು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹೊಸದುರ್ಗ ತಾಲ್ಲೂಕು ಆಡಳಿತದ ವತಿಯಿಂದ ಹೊಸದುರ್ಗ ಪಟ್ಟಣದ ಅಶೋಕ ರಂಗ ಮಂದಿರದಲ್ಲಿ ಆಯೋಜಿಸಲಾದ ಪ್ರಜಾಸೇವಾ ಆಂದೋಲನ ಸಭೆ ಉದ್ಘಾಟಿಸಿ ಮಾತನಾಡಿ, ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸಲಾಗುತ್ತಿದ್ದು, ಇದರೊಂದಿಗೆ ಶಿಕ್ಷಣ ಕ್ಷೇತ್ರಕ್ಕೂ ಹೆಚ್ಚಿನ ಪ್ರಾಮುಖ್ಯ ನೀಡಲಾಗುತ್ತಿದೆ. ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸುವ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಗ್ರಾಮೀಣ, ಹಾಗೂ ನಗರಗಳಲ್ಲಿ ಭಾರತ್ ಜೋಡೋ ಯುವ ಸಂಘ'ಗಳನ್ನು ಸ್ಥಾಪಿಸಿ, ಪ್ರತಿಯೊಂದು ಸಂಘಕ್ಕೂ ರೂ.10 ಲಕ್ಷ ರೂ. ನೀಡುವ ವ್ಯವಸ್ಥೆ ಮಾಡಲಾಗಿದೆ. ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನೇಗಿಲಯೋಗಿ, ತೇಗದಸಿರಿ' ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿದರು. ಕೃಷಿ, ತೋಟಗಾರಿಕೆ, ಆರೋಗ್ಯ, ಅರಣ್ಯ, ಪಶು ಸೇವಾ ಹಾಗೂ ಪಶು ವೈದ್ಯಕೀಯ, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಪಟ್ಟಣ ಪಂಚಾಯಿತಿ ಸೇರಿದಂತೆ ವಿವಿದ ಇಲಾಖೆಗಳ ವಸ್ತು ಪ್ರದರ್ಶನ ಮಳಿಗೆಗಳನ್ನು ಸಚಿವ ಟಿ.ರಘುಮೂರ್ತಿ ಉದ್ಘಾಟಿಸಿದರು. ಹಲವಾರು ಮಂದಿಗೆ ಮನೆಗಳ ಹಕ್ಕುಪತ್ರ ವಿತರಿಸಲಾಯಿತು. ಸಮಾಜಕಲ್ಯಾಣ ಇಲಾಖೆ ವತಿಯಿಂದ ಅಂತರ್ಜಾತಿ ವಿವಾಹವಾದ ಜೋಡಿಗಳಿಗೆ ಪ್ರೋತ್ಸಾಹಧನ ಮಂಜೂರಾಗಿದ್ದು, ಎಫ್‌ಡಿ ಬಾಂಡ್ ವಿತರಿಸಲಾಯಿತು.

ಜಿಲ್ಲಾಧಿಕಾರಿ ಎಸ್.ರಮ್ಯಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಡಾ. ಎಸ್. ಆಕಾಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

770 ಸ್ವೀಕಾರ, 759 ವಿಲೇವಾರಿ

ಸಾರ್ವಜನಿಕರಿಂದ ಸುಮಾರು 770 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಅದರಲ್ಲಿ 759 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಹಿರಿಯೂರು ಹಾಗೂ ಹೊಳಲ್ಕೆರೆ ತಾಲ್ಲೂಕಿನಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರಜಾಸೇವಾ ಆಂದೋಲನದಲ್ಲಿ, ಹಿರಿಯೂರಿಗೆ ಸಂಬಂಧಿಸಿದಂತೆ ಒಟ್ಟು 287 ಅರ್ಜಿಗಳು ಬಂದಿದ್ದು, ಅದರಲ್ಲಿ 282 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 66 ಅರ್ಜಿಗಳು ಸಲ್ಲಿಕೆಯಾಗಿದ್ದು, 64 ಅರ್ಜಿಗಳನ್ನು ಯಶಸ್ವಿಯಾಗಿ ವಿಲೇವಾರಿ ಮಾಡಲಾಗಿದೆ. ಇನ್ನೂ ಮುಂದುವರೆದು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕೆ.ಡಿ.ಪಿ ಸಭೆಗಳಲ್ಲಿ ಈ ಅರ್ಜಿಗಳ ವಿಲೇವಾರಿ ಕುರಿತು ವಿಸ್ತೃತವಾಗಿ ಚರ್ಚಿಸಲಾಗುವುದು ಎಂದು ಸಚಿವ ರಘುಮೂರ್ತಿ ತಿಳಿಸಿದರು.

ರಾ.ಹೆ.ಎಕ್ಸ್‌ಪ್ರೆಸ್ ವೇನಲ್ಲಿ ಶೇ.20 ವೇಗದ ವ್ಯತ್ಯಾಸಕ್ಕೆ ದಂಡವಿಲ್ಲ: ವಾಹನ ಸವಾರರಿಗೆ ಗಡ್ಕರಿ ಶುಭಸುದ್ದಿ



ನವದೆಹಲಿ, ನ.7: ರಾಷ್ಟ್ರೀಯ ಹೆದ್ದಾರಿ ಹಾಗೂ ಎಕ್ಸ್‌ಪ್ರೆಸ್‌ವೇಗಳಲ್ಲಿ ಚಲಿಸುವ ವಾಹನ ಸವಾರರಿಗೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ಮಹತ್ವದ ವಿನಾಯಿತಿ ಘೋಷಿಸಿದೆ. ನಿಗದಿತ ವೇಗಕ್ಕಿಂತ ಕೇವಲ 1–2 ಕಿ.ಮೀ ಹೆಚ್ಚಾದರೂ ಆಟೋಮ್ಯಾಟಿಕ್ ಸ್ಪೀಡ್ ಕ್ಯಾಮರಾಗಳು ಪತ್ತೆಹಚ್ಚಿ ದಂಡದ ಚಲನ್ ಕಳುಹಿಸುತ್ತಿದ್ದ ವ್ಯವಸ್ಥೆಗೆ ಕಡಿವಾಣ ಹಾಕಲಾಗಿದ್ದು, ನಿಗದಿತ ವೇಗಮಿತಿಗಿಂತ ಶೇಕಡಾ 20ರವರೆಗೆ ವೇಗ ಹೆಚ್ಚಿದ್ದರೂ ದಂಡ ವಿಧಿಸದಿರಲು ತೀರ್ಮಾನಿಸಲಾಗಿದೆ.

ಹೊಸ ನಿಯಮಾವಳಿ ಅನ್ವಯ, ರಸ್ತೆಯಲ್ಲಿ ನಿಗದಿಪಡಿಸಲಾದ ಗರಿಷ್ಠ ವೇಗಕ್ಕಿಂತ ಶೇ. 20ರಷ್ಟು ಹೆಚ್ಚುವರಿ ವೇಗದಲ್ಲಿ ಚಲಿಸಿದರೂ ಇ–ಚಲನ್ ಜಾರಿಯಾಗುವುದಿಲ್ಲ. ಉದಾಹರಣೆಗೆ, ಗಂಟೆಗೆ 100 ಕಿಲೋಮೀಟರ್ ವೇಗಮಿತಿ ಇರುವ ಎಕ್ಸ್‌ಪ್ರೆಸ್‌ವೇಯಲ್ಲಿ ವಾಹನವು 120 ಕಿ.ಮೀ ವೇಗದಲ್ಲಿ ಚಲಿಸಿದರೂ ದಂಡ ವಿಧಿಸದಂತೆ ಸಂಚಾರ ಪೊಲೀಸ್ ಹಾಗೂ ಹೆದ್ದಾರಿ ಪ್ರಾಧಿಕಾರಕ್ಕೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಸಣ್ಣಪುಟ್ಟ ವೇಗದ ಏರಿಳಿತಗಳಿಗೆ ಚಾಲಕರು ಅನಗತ್ಯವಾಗಿ ಭಾರಿ ದಂಡ ತೆರುವುದನ್ನು ತಪ್ಪಿಸಲು ಈ ವಿನಾಯಿತಿ ಕಲ್ಪಿಸಲಾಗಿದೆ.

ಮಿತಿಮೀರಿದ ವೇಗಕ್ಕೆ ಕಠಿಣ ಕ್ರಮ ಮುಂದುವರಿಕೆ

ಶೇ.20ರಷ್ಟು ವಿನಾಯಿತಿ ಸಿಕ್ಕಿದೆ ಎಂದ ಮಾತ್ರಕ್ಕೆ ಎಲ್ಲೆಂದರಲ್ಲಿ ಅತಿಯಾದ ವೇಗಕ್ಕೆ ಅವಕಾಶವಿಲ್ಲ. ಗಂಟೆಗೆ 120 ಕಿ.ಮೀ ವೇಗದ ಮಿತಿಯಿರುವ ಹೆದ್ದಾರಿಯಲ್ಲಿ ವಾಹನವು ಶೇ. 20ಕ್ಕಿಂತ ಹೆಚ್ಚು, ಅಂದರೆ ಸುಮಾರು 144 ಕಿ.ಮೀ ಅಥವಾ ಅದಕ್ಕಿಂತ ಹೆಚ್ಚಿನ ವೇಗದಲ್ಲಿ ಸಾಗಿದರೆ ಸ್ವಯಂಚಾಲಿತ ಸಂಚಾರ ನಿರ್ವಹಣಾ ವ್ಯವಸ್ಥೆ ತಕ್ಷಣವೇ ನಿಯಮ ಉಲ್ಲಂಘನೆಯ ದಂಡದ ಚಲನ್ ರವಾನಿಸಲಿದೆ.

ಸುರಕ್ಷಿತ ಪ್ರಯಾಣಕ್ಕೆ ಮುನ್ನೆಚ್ಚರಿಕೆ ಅಗತ್ಯ

ಕಾರುಗಳು, ಲಘು ವಾಹನಗಳು ಹಾಗೂ ಭಾರಿ ಸರಕು ಸಾಗಣೆ ವಾಹನಗಳಿಗೆ ರಸ್ತೆಯ ಸ್ವರೂಪಕ್ಕೆ ತಕ್ಕಂತೆ ಪ್ರತ್ಯೇಕ ವೇಗಮಿತಿ ನಿಗದಿಯಾಗಿರುವುದರಿಂದ, ಪ್ರಯಾಣ ಬೆಳೆಸುವ ಮುನ್ನ ಆಯಾ ಮಾರ್ಗದ ಸೂಚನಾ ಫಲಕಗಳನ್ನು ಗಮನಿಸುವುದು ಕಡ್ಡಾಯವಾಗಿದೆ. ಇದರ ಜೊತೆಗೆ ಟೋಲ್ ಪ್ಲಾಜಾಗಳಲ್ಲಿ ಸರಾಗ ಸಂಚಾರಕ್ಕೆ ಫಾಸ್ಟ್‌ಟ್ಯಾಗ್‌ನಲ್ಲಿ ಸಾಕಷ್ಟು ಬ್ಯಾಲೆನ್ಸ್ ಕಾಯ್ದುಕೊಳ್ಳುವುದು ಹಾಗೂ ವಾಹನದ ಟೈರ್ ಮತ್ತು ಇಂಧನ ಮಟ್ಟವನ್ನು ಮೊದಲೇ ಪರಿಶೀಲಿಸಿಕೊಂಡು ಪ್ರಯಾಣಿಸುವುದು ಸುರಕ್ಷತೆಯ ದೃಷ್ಟಿಯಿಂದ ಅತ್ಯಗತ್ಯ.

ಬಾಗ್ಡೋಗ್ರಾ ವಾಯುನೆಲೆ ಪ್ರಾದೇಶಿಕ ಭದ್ರತೆಗೆ ಕಾರ್ಯತಂತ್ರದ ಗುರಾಣಿ: ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಣ್ಣನೆ



ಸಿಲಿಗುರಿ, ನ.7: ಬಾಗ್ಡೋಗ್ರಾ ವಾಯುನೆಲೆಯನ್ನು ಅತ್ಯಂತ ಸೂಕ್ಷ್ಮ ಪ್ರದೇಶದಲ್ಲಿ ನೆಲೆಗೊಂಡಿರುವ ಕಾರ್ಯತಂತ್ರದ ಪ್ರಮುಖ ವಾಯುನೆಲೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶನಿವಾರ ಬಣ್ಣಿಸಿದ್ದಾರೆ, ಪ್ರಾದೇಶಿಕ ಭದ್ರತೆಯನ್ನು ಕಾಪಾಡುವಲ್ಲಿ ಇದು ಪ್ರಮುಖ ಪಾತ್ರ ವಹಿಸುತ್ತಿದೆ. ವಾಯುನೆಲೆ ಬಲವಾದ ರಕ್ಷಣಾತ್ಮಕ ಗುರಾಣಿಯಾಗಿ ಕಾರ್ಯನಿರ್ವಹಿಸುತ್ತಿದೆ ಮತ್ತು ಹೆಚ್ಚುತ್ತಿರುವ ಭದ್ರತಾ ಸವಾಲುಗಳ ನಡುವೆಯೂ ಉನ್ನತ ಮಟ್ಟದ ಕಾರ್ಯಾಚರಣೆಯ ಸಿದ್ಧತೆಯನ್ನು ಕಾಯ್ದುಕೊಂಡಿದ್ದಕ್ಕಾಗಿ ವಾಯು ಯೋಧರನ್ನು ಶ್ಲಾಘಿಸಿದ್ದಾರೆ. ವಾಯುಪಡೆಯ ಸಿಬ್ಬಂದಿಯೊಂದಿಗೆ ದೀಪಾವಳಿ ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳಲು ಮತ್ತು ಅಧಿಕಾರಿಗಳು ಮತ್ತು ಸಿಬ್ಬಂದಿಯೊಂದಿಗೆ ಸಂವಹನ ನಡೆಸಲು ಸಿಂಗ್ ವಾಯುನೆಲೆಗೆ ಭೇಟಿ ನೀಡುತ್ತಿದ್ದರು. ಸಂವಾದಾತ್ಮಕ ಅಧಿವೇಶನದಲ್ಲಿ, ಭದ್ರತಾ ಬೆದರಿಕೆಗಳ ಸ್ವರೂಪವು ಹೆಚ್ಚು ಸಂಕೀರ್ಣವಾಗುತ್ತಿದೆ, ಇದು ಸಾಂಪ್ರದಾಯಿಕ ಯುದ್ಧವನ್ನು ಮೀರಿ ವಿಸ್ತರಿಸುತ್ತಿದೆ ಎಂದು ಅವರು ಹೇಳಿದರು. "ನಮ್ಮ ದೇಶದಲ್ಲಿ ಪ್ರತಿಯೊಂದು ಹಬ್ಬವನ್ನು ಸಂತೋಷ ಮತ್ತು ಶಾಂತಿಯಿಂದ ಆಚರಿಸಲಾಗುತ್ತದೆ ಏಕೆಂದರೆ ನಮ್ಮ ಸಶಸ್ತ್ರ ಪಡೆಗಳು ಗಡಿಯಾರದ ಸುತ್ತ ಕಾವಲು ಕಾಯುತ್ತಿವೆ" ಎಂದು ಅವರು ಹೇಳಿದರು, ಇಡೀ ರಾಷ್ಟ್ರವು ಅವರ ಶೌರ್ಯ ಮತ್ತು ನಿಸ್ವಾರ್ಥ ಸೇವೆಯ ಬಗ್ಗೆ ಅಪಾರ ಹೆಮ್ಮೆಪಡುತ್ತದೆ ಎಂದು ಅವರು ಹೇಳಿದರು. ಮುಂಚೂಣಿಯಲ್ಲಿ ಸೇವೆ ಸಲ್ಲಿಸುತ್ತಿರುವ ಪುರುಷರು ಮತ್ತು ಮಹಿಳೆಯರ ಶಕ್ತಿ, ಕರ್ತವ್ಯದ ಮೇಲಿನ ಭಕ್ತಿ ಮತ್ತು ಉನ್ನತ ಮನೋಸ್ಥೈರ್ಯವನ್ನು ಅವರು ಮೆಚ್ಚಿದರು ಮತ್ತು ಅವರನ್ನು ಭೇಟಿಯಾಗುವುದು ನಿಜವಾಗಿಯೂ ಸ್ಫೂರ್ತಿದಾಯಕವಾಗಿದೆ ಎಂದು ಹೇಳಿದರು.

ಗಾಜಿಯಾಬಾದ್ ಪೊಲೀಸ್ ಔಟ್‌ಪೋಸ್ಟ್ ಸ್ಫೋಟ: ಎಟಿಎಸ್‌ನಿಂದ ತನಿಖೆ ಆರಂಭ



ಗಾಜಿಯಾಬಾದ್, ನ.7: ಉತ್ತರ ಪ್ರದೇಶದ ಗಾಜಿಯಾಬಾದ್ ಪೊಲೀಸ್ ಹೊರಠಾಣೆಯೊಂದರಲ್ಲಿ ನಡೆದ ಸ್ಫೋಟದ ಹೊಣೆಯನ್ನು 'ತೆಹ್ರೀಕ್–ಉಲ್–ಮುಜಾಹಿದ್ದೀನ್' ಉಗ್ರ ಸಂಘಟನೆ ಸಾಮಾಜಿಕ ಜಾಲತಾಣದ ಹೇಳಿಕೆ ಮೂಲಕ ಹೊತ್ತುಕೊಂಡಿದ್ದು, ಈ ಕುರಿತ ತನಿಖೆ ಆರಂಭವಾಗಿದೆ.

ಉತ್ತರ ಪ್ರದೇಶದ ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್) ಕೂಡ ಈ ತನಿಖೆಯಲ್ಲಿ ಪಾಲ್ಗೊಂಡಿದೆ. ಶುಕ್ರವಾರ ರಾತ್ರಿ 9 ಗಂಟೆ ಸುಮಾರಿಗೆ ವಸುಂಧರಾ ಪೊಲೀಸ್ ಹೊರಠಾಣೆಯಲ್ಲಿ ಈ ಸ್ಫೋಟ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಅಲ್ಲಿನ ಎರಡು ಗಾಜಿನ ಕಿಟಕಿಗಳು ಪುಡಿಪುಡಿಯಾಗಿವೆ. ಈ ಘಟನೆಯಲ್ಲಿ ಆಹಾರ ವಿತರಣಾ ಸಿಬ್ಬಂದಿಯೊಬ್ಬರು (ಫುಡ್ ಡೆಲಿವರಿ ವರ್ಕರ್) ಗಾಯಗೊಂಡಿದ್ದು, ಅವರು ಚಿಕಿತ್ಸೆ ಪಡೆಯುತ್ತಿದ್ದಾರೆ.

'ತೆಹ್ರೀಕ್–ಎ–ಮುಜಾಹಿದ್ದೀನ್–ಎ–ಹಿಂದೂಸ್ತಾನ್' ಎಂದು ಕರೆದುಕೊಳ್ಳುವ ಉಗ್ರರ ಗುಂಪೊಂದು ಈ ಪೋಸ್ಟ್ ಮಾಡಿದ್ದು, ಕೇಸರಿ ಸರ್ಕಾರದ ವಿರುದ್ಧದ ಕ್ರಮವಾಗಿ ಪೊಲೀಸರನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆಸಲಾಗಿದೆ ಎಂದು ಹೇಳಿಕೊಂಡಿದೆ. ತಮ್ಮ ಮನೆ, ಮಸೀದಿ, ನಂಬಿಕೆ ಮತ್ತು ಸಂಸ್ಕೃತಿಯ ರಕ್ಷಣೆಗಾಗಿ ಹೋರಾಡುವ ಹಕ್ಕು ತಮಗಿದೆ ಎಂದು ಪ್ರತಿಪಾದಿಸಿರುವ ಆ ಗುಂಪು, ಈಗಿರುವುದು ಅಕ್ರಮ ಸರ್ಕಾರ ಎಂದು ಹೇಳಿದೆ.

ಆದಾಗ್ಯೂ, ಈ ಪೋಸ್ಟ್‌ನ ಸತ್ಯಾಸತ್ಯತೆಯನ್ನು ಅಥವಾ ಅದರಲ್ಲಿ ಮಾಡಲಾದ ಹೇಳಿಕೆಗಳನ್ನು ಪೊಲೀಸರು ಇನ್ನೂ ದೃಢಪಡಿಸಿಲ್ಲ. ವರದಿಗಳ ಪ್ರಕಾರ, 'ಗಾಜಿ 2' ಹೆಸರಿನ 'ಎಕ್ಸ್' ಖಾತೆಯ ಮೂಲಕ ಈ ಹೇಳಿಕೆಯನ್ನು ಹಂಚಿಕೊಳ್ಳಲಾಗಿದೆ. ವಸುಂಧರಾ ಹೊರಠಾಣೆಯಲ್ಲಿ ನಡೆದ ಸ್ಫೋಟದ ಹಿಂದೆ ತಮ್ಮ ಗುಂಪು ಇದೆ ಎಂದು ಆ ಖಾತೆಯಲ್ಲಿ ಹೇಳಿಕೊಳ್ಳಲಾಗಿದ್ದು, ಜೊತೆಗೆ ಪೊಲೀಸ್ ಠಾಣೆಯನ್ನು ಸ್ಫೋಟಿಸುವುದಾಗಿಯೂ ಬೆದರಿಕೆ ಹಾಕಲಾಗಿದೆ. ಪೊಲೀಸರು ಈ ಪೋಸ್ಟ್ ಅನ್ನು ಪರಿಶೀಲಿಸುತ್ತಿದ್ದು, ಇದರಲ್ಲಿ ನೀಡಿರುವ ಹೇಳಿಕೆ ನಿಜವೇ ಎಂದು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಸ್ಫೋಟಕ್ಕೆ ಸಂಬಂಧಿಸಿದ ಸನ್ನಿವೇಶಗಳನ್ನು ತನಿಖೆ ನಡೆಸಲು ಎಟಿಎಸ್ ತಂಡವೊಂದು ಸ್ಥಳಕ್ಕೆ ಆಗಮಿಸಿದೆ. ಉತ್ತರ ಪ್ರದೇಶದಲ್ಲಿ ಪೊಲೀಸ್ ಸಿಬ್ಬಂದಿ ಮತ್ತು ಭದ್ರತಾ ಪಡೆಗಳನ್ನು ಗುರಿಯಾಗಿಸಿಕೊಂಡು ದಾಳಿಗಳು ನಡೆಯಬಹುದು ಎಂಬ ಗುಪ್ತಚರ ಇಲಾಖೆಯ ಎಚ್ಚರಿಕೆಯ ಹಿನ್ನೆಲೆಯಲ್ಲಿ ಈ ಘಟನೆ ನಡೆದಿದೆ.

ಇತ್ತೀಚೆಗಷ್ಟೇ, ಪಾಕಿಸ್ತಾನದ ಐಎಸ್‌ಐ ಮತ್ತು ಶೆಹಜಾದ್ ಭಟ್ಟಿ ಎಂಬಾತನೊಂದಿಗೆ ಸಂಪರ್ಕ ಹೊಂದಿದ್ದ ಗುಂಪೊಂದನ್ನು ರಾಜ್ಯ ಪೊಲೀಸರು ಪತ್ತೆಹಚ್ಚಿ ಭೇದಿಸಿದ್ದರು. ಆರೋಪಿಗಳು ಪೊಲೀಸ್ ಸಿಬ್ಬಂದಿ ಮತ್ತು ಭದ್ರತಾ ಪಡೆಗಳನ್ನು ಗುರಿಯಾಗಿಸಲು ಯೋಜನೆ ರೂಪಿಸಿದ್ದರು ಎಂದು ಉತ್ತರ ಪ್ರದೇಶದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು (ಕಾನೂನು ಮತ್ತು ಸುವ್ಯವಸ್ಥೆ) ಅಮಿತಾಭ್ ಯಶ್ ತಿಳಿಸಿದ್ದರು. ವಸುಂಧರಾ ಪೊಲೀಸ್ ಹೊರಠಾಣೆಯಲ್ಲಿ ನಡೆದ ಸ್ಫೋಟಕ್ಕೆ ಸಂಬಂಧಿಸಿದಂತೆ ತನಿಖಾಧಿಕಾರಿಗಳು ಎಲ್ಲಾ ಆಯಾಮಗಳಿಂದಲೂ ಪರಿಶೀಲನೆ ನಡೆಸುತ್ತಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಮಾಡಲಾದ ಈ ಹೇಳಿಕೆ ಇನ್ನೂ ದೃಢಪಟ್ಟಿಲ್ಲ.

ಅಭಿಷೇಕ್ ಬ್ಯಾನರ್ಜಿ ಆರೋಪ ತಳ್ಳಿಹಾಕಿದ ಸಚಿವ ದಿಲೀಪ್ ಘೋಷ್



ಕೋಲ್ಕತಾ,ನ.7: ತೃಣಮೂಲ ಕಾಂಗ್ರೆಸ್ ಸಂಸದ ಅಭಿಷೇಕ್ ಬ್ಯಾನರ್ಜಿ ಅವರ ಕೋಲ್ಕತಾದ ನಿವಾಸದ ಬಳಿ ನಡೆದ ಗಲಾಟೆ ಪಶ್ಚಿಮ ಬಂಗಾಳದಲ್ಲಿ ರಾಜಕೀಯ ಸಂಘರ್ಷಕ್ಕೆ ಕಾರಣವಾಗಿದೆ. ಬಿಜೆಪಿ ಕಾರ್ಯಕರ್ತರು ತಮ್ಮ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ ಎಂಬ ಅಭಿಷೇಕ್ ಬ್ಯಾನರ್ಜಿ ಆರೋಪವನ್ನು ಬಿಜೆಪಿ ನಾಯಕ ಹಾಗೂ ಪಶ್ಚಿಮ ಬಂಗಾಳ ಸಚಿವ ದಿಲೀಪ್ ಘೋಷ್ ತಳ್ಳಿಹಾಕಿದ್ದಾರೆ. ಅಭಿಷೇಕ್ ಬ್ಯಾನರ್ಜಿ ಅವರ ಕಾಳಿಘಾಟ್ ನಿವಾಸದ ಬಳಿ ಶನಿವಾರ ಮುಂಜಾನೆ ಸುಮಾರು 2 ಗಂಟೆಗೆ ಘಟನೆ ನಡೆದಿದೆ. ಅಭಿಷೇಕ್ ಬ್ಯಾನರ್ಜಿ ಅವರ ಜನ್ಮದಿನ ಆಚರಣೆಗೆ ತೃಣಮೂಲ ಕಾಂಗ್ರೆಸ್ ಕಾರ್ಯಕರ್ತರು ಜಮಾಯಿಸಿದ್ದ ಸಂದರ್ಭದಲ್ಲಿ ಬಿಜೆಪಿ ಮತ್ತು ಟಿಎಂಸಿ ಕಾರ್ಯಕರ್ತರ ನಡುವೆ ಘರ್ಷಣೆ ನಡೆದಿದೆ ಎನ್ನಲಾಗಿದೆ. ಪರಸ್ಪರ ಘೋಷಣೆ, ವಾಗ್ವಾದದ ಬಳಿಕ ಪರಿಸ್ಥಿತಿ ವಿಕೋಪಕ್ಕೆ ತಿರುಗಿದೆ.

ಬಿಜೆಪಿ ಕಾರ್ಯಕರ್ತರು ತಮ್ಮ ಬೆಂಬಲಿಗರ ಮೇಲೆ ಹಲ್ಲೆ ನಡೆಸಿದ್ದು, ಇಟ್ಟಿಗೆ ಹಾಗೂ ಕಲ್ಲುಗಳಿಂದ ದಾಳಿ ಮಾಡಿದ್ದಾರೆ ಎಂದು ಅಭಿಷೇಕ್ ಬ್ಯಾನರ್ಜಿ ಆರೋಪಿಸಿದ್ದಾರೆ. ಕಳೆದ ಆರು ತಿಂಗಳಲ್ಲಿ ತಮ್ಮನ್ನು ಹತ್ಯೆ ಮಾಡಲು ನಡೆದ ಏಳನೇ ಪ್ರಯತ್ನ ಇದಾಗಿದೆ ಎಂದೂ ಅವರು ದೂರಿದ್ದಾರೆ. ಘಟನೆಯ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿ ಸ್ಥಳದಲ್ಲಿದ್ದರೂ ದಾಳಿ ತಡೆಯಲು ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ್ದಾರೆ.

ಈ ಆರೋಪಗಳಿಗೆ ಪ್ರತಿಕ್ರಿಯಿಸಿರುವ ದಿಲೀಪ್ ಘೋಷ್, ಅಭಿಷೇಕ್ ಬ್ಯಾನರ್ಜಿ ಅವರ ಹೇಳಿಕೆಗಳು ಜನರನ್ನು ದಾರಿ ತಪ್ಪಿಸುವ ಪ್ರಯತ್ನ ಎಂದು ಟೀಕಿಸಿದ್ದಾರೆ. ಫುಟ್ಪಾತ್‌ನಲ್ಲಿ ರಾಜಕಾರಣಿಯೊಬ್ಬರ ಜನ್ಮದಿನ ಆಚರಣೆ ನಡೆಸುತ್ತಿರುವುದನ್ನು ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ. ರಾತ್ರಿ ವೇಳೆ ಯಾರಾದರೂ ಗದ್ದಲ ಸೃಷ್ಟಿಸಿದರೆ ಅದಕ್ಕೆ ಪ್ರತಿರೋಧ ವ್ಯಕ್ತವಾಗುವುದು ಸಹಜ. ಅಭಿಷೇಕ್ ಬ್ಯಾನರ್ಜಿ ಅವರನ್ನು ಕೊಲ್ಲಲು ಯಾರಿಗೆ ಸಮಯವಿದೆ ಎಂದು ಪ್ರಶ್ನಿಸಿದ್ದಾರೆ. ಇದಕ್ಕೂ ಮುನ್ನ ಅಭಿಷೇಕ್ ಬ್ಯಾನರ್ಜಿ ತಮ್ಮ ನಿವಾಸ ಮತ್ತು ಕಚೇರಿಯ ಮೇಲೆ ಕಳೆದ ಎರಡು ದಿನಗಳಿಂದ ಅಪರಿಚಿತ ವ್ಯಕ್ತಿಗಳು ನಿಗಾ ಇರಿಸಿದ್ದಾರೆ ಎಂದು ಆರೋಪಿಸಿದ್ದರು. ವಿಚಾರಿಸಿದಾಗ ಅವರು ಪೊಲೀಸ್ ಸಿಬ್ಬಂದಿ ಎಂದು ಹೇಳಿಕೊಂಡಿದ್ದಾರೆ. ಈ ಬಗ್ಗೆ ತನಿಖೆ ನಡೆಸಿ, ನಿಗಾ ಇರಿಸಲು ಆದೇಶ ನೀಡಿದವರು ಯಾರು ಎಂಬುದನ್ನು ಪತ್ತೆಹಚ್ಚಬೇಕು ಎಂದು ಆಗ್ರಹಿಸಿದ್ದರು. ಘಟನೆಯಲ್ಲಿ ಹಲವರು ಗಾಯಗೊಂಡಿದ್ದು, ಮೂವರ ಸ್ಥಿತಿ ಗಂಭೀರವಾಗಿದೆ. ಘರ್ಷಣೆಯ ಹಿನ್ನೆಲೆಯಲ್ಲಿ ಕಾಳಿಘಾಟ್ ಪ್ರದೇಶದಲ್ಲಿ ಪೊಲೀಸರು ಹೆಚ್ಚುವರಿ ಭದ್ರತೆ ನಿಯೋಜಿಸಿದ್ದಾರೆ. ಘಟನೆಯಿಂದ ಬಿಜೆಪಿ ಮತ್ತು ತೃಣಮೂಲ ಕಾಂಗ್ರೆಸ್ ನಡುವಿನ ರಾಜಕೀಯ ವಾಕ್ಸಮರ ಮತ್ತಷ್ಟು ತೀವ್ರಗೊಂಡಿದೆ.

ಅಭಿಷೇಕ್ ಮನೆ ಮೇಲಿನ ದಾಳಿಗೆ ಮಮತಾ ವಾಗ್ದಾಳಿ

ಸೋದರಳಿಯ ಅಭಿಷೇಕ್ ಬ್ಯಾನರ್ಜಿ ಅವರ ನಿವಾಸದ ಮೇಲಿನ ದಾಳಿ ಹಾಗೂ ಕೋಲ್ಕತ್ತಾದ ಕಾಳಿಘಾಟ್‌ನಲ್ಲಿ ಕಾಳಿ ಪೂಜೆ ಆಚರಣೆಗಳಿಗೆ ಉಂಟಾದ ಅಡಚಣೆಗಳ ವಿಷಯದಲ್ಲಿ ಬಿಜೆಪಿ ಸರ್ಕಾರದ ವಿರುದ್ಧ ಪಶ್ಚಿಮ ಬಂಗಾಳ ಮಾಜಿ ಸಿಎಂ ಮಮತಾ ಬ್ಯಾನರ್ಜಿ ವಾಗ್ದಾಳಿ ನಡೆಸಿದ್ದಾರೆ. ಅಭಿಷೇಕ್ ಅವರನ್ನು ಭೇಟಿಯಾದ ನಂತರ ಸುದ್ದಿಗಾರರೊಂದಿಗೆ



ಮಾತನಾಡಿದ ಅವರು, ನಿಮ್ಮ ಬಳಿ ಎಷ್ಟು ಬುಲ್ಡೋಜರ್‌ಗಳಿವೆ ತನ್ನಿ, ನಾನು ನಿಮ್ಮ ಎದುರೇ ನಿಂತಿದ್ದೇನೆ. ನನ್ನ ಮೇಲೆಯೂ ಬುಲ್ಡೋಜರ್‌ಗಳನ್ನು ಹರಿಸಿ. ನೀವು ಎಷ್ಟು ಧೈರ್ಯಶಾಲಿಗಳಿದ್ದೀರಿ ಎಂದು ನೋಡಲು ಬಯಸುತ್ತೇನೆ' ಎಂದು ಕಿಡಿಕಾರಿದ್ದಾರೆ.

ಈ ಪ್ರದೇಶದಲ್ಲಿ ನಡೆಯುತ್ತಿದ್ದ ಸಾಂಪ್ರದಾಯಿಕ ಕಾಳಿಪೂಜೆ ಆಚರಣೆಗಳಿಗೆ ಅಡ್ಡಿಪಡಿಸಲಾಗುತ್ತಿದೆ. ದೀರ್ಘಕಾಲದಿಂದ ನಡೆದುಕೊಂಡು ಬರುತ್ತಿದ್ದ ಕೆಲವು ಪೂಜೆಗಳಿಗೆ ನೀಡಲಾಗಿದ್ದ ಅನುಮತಿಯನ್ನು ರದ್ದುಗೊಳಿಸಲಾಗಿದೆ, ಆದರೆ ಹೊಸದಾಗಿ ಆಯೋಜಿಸಲಾದ ಪೂಜೆಯೊಂದಕ್ಕೆ ಮುಖ್ಯ ರಸ್ತೆಯಲ್ಲಿ ನಡೆಯಲು ಅನುಮತಿ ನೀಡಲಾಗಿದೆ. ಈ ಪ್ರದೇಶವು ಕಾಳಿ ಪೂಜೆಯ ಮೆರವಣಿಗೆಗಳಿಗೆ ಸಾಂಪ್ರದಾಯಿಕ ಮಾರ್ಗವಾಗಿದೆ. ಅಲ್ಲದೆ, ಕಾಳಿ ಪೂಜೆ ಮತ್ತು ದೀಪಾವಳಿಯ ಮುನ್ನಾದಿನ ಇಂತಹ ಆಚರಣೆಗಳಿಗೆ ಏಕೆ ಅಡ್ಡಿಪಡಿಸಲಾಗುತ್ತಿದೆ ಎಂದು ಅವರು ಪ್ರಶ್ನಿಸಿದ್ದಾರೆ. ಸ್ಥಳೀಯ ಕ್ಲಬ್‌ಗಳು ತಮ್ಮ ಚಟುವಟಿಕೆಗಳನ್ನು ನಡೆಸದಂತೆ ತಡೆಯಲಾಗಿದೆ. ಅಲ್ಲದೆ, ಆ ಪ್ರದೇಶದಲ್ಲಿ ಗೊಂದಲ ಸೃಷ್ಟಿಸಲು ಬಿಜೆಪಿ ಪುಂಡಾಟಿಕೆಯನ್ನು ಬಳಸಿಕೊಳ್ಳುತ್ತಿದೆ. ಸಾಂಪ್ರದಾಯಿಕವಾಗಿ ಕಟ್ಟಡವೊಂದರ ಒಳಗೆ ಆಯೋಜಿಸಲಾಗುತ್ತಿದ್ದ ಪೂಜೆಯನ್ನು, ಈ ಬಾರಿ ಮುಖ್ಯ ರಸ್ತೆಯ ಮೇಲೆ ಏಕೆ ನಡೆಸಲಾಗುತ್ತಿದೆ. ಈ ಬದಲಾವಣೆಯಿಂದಾಗಿ, ತಾವು ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಹೋಗುವ ದಾರಿಯೇ ಬಂದ್ ಆಗಿದೆ ಎಂದು ದೂರಿದರು.

ಮೋದಿ ಸರ್ಕಾರದಿಂದ ದೇಶದ ಪ್ರಜಾಪ್ರಭುತ್ವಕ್ಕೆ ಧಕ್ಕೆ



ನವದೆಹಲಿ: ಕಳೆದ 12 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದ ಪ್ರಜಾಪ್ರಭುತ್ವ, ಸಾಂವಿಧಾನಿಕ ಸಂಸ್ಥೆಗಳು ಹಾಗೂ ಸಾಮಾಜಿಕ ವ್ಯವಸ್ಥೆಗೆ ದೊಡ್ಡ ಪ್ರಮಾಣದ ಹಾನಿ ಮಾಡಿದೆ ಎಂದು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಆರೋಪಿಸಿದ್ದಾರೆ.

ತಮ್ಮ ಮುಂಬರುವ ಆತ್ಮಕಥನದ ಬಿಡುಗಡೆ ಹಿನ್ನೆಲೆಯಲ್ಲಿ ಪತ್ರಿಕೆಗೆ ನೀಡಿದ ಸಂದರ್ಶನದಲ್ಲಿ ಅವರು ಕೇಂದ್ರ ಸರ್ಕಾರದ ಆಡಳಿತ ಹಾಗೂ ಕಾಂಗ್ರೆಸ್‌ನ ರಾಜಕೀಯ ಭವಿಷ್ಯದ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ. ಕಳೆದ 12 ವರ್ಷಗಳಲ್ಲಿ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತು ಸಾಂವಿಧಾನಿಕ ಸಂಸ್ಥೆಗಳಿಗೆ ಸಾಕಷ್ಟು ಹಾನಿಯಾಗಿದೆ. ಪ್ರಸ್ತುತ ಸರ್ಕಾರ ಅಧಿಕಾರದಿಂದ ಹೊರಬಂದ ನಂತರವೂ ದೇಶದ ವ್ಯವಸ್ಥೆಗಳನ್ನು ಮತ್ತೆ ಆರೋಗ್ಯಕರ ಸ್ಥಿತಿಗೆ ತರಲು ಸಾಕಷ್ಟು ಸಮಯ ಹಾಗೂ ರಾಜಕೀಯ ಪಕ್ಷಗಳ ನಿರಂತರ ಪ್ರಯತ್ನ ಅಗತ್ಯವಾಗಲಿದೆ ಎಂದು ಸೋನಿಯಾ ಗಾಂಧಿ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷದ ರಾಜಕೀಯ ಕುಸಿತ ಹಾಗೂ ಭವಿಷ್ಯದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳಿಗೆ ಸಮಾನ ರಾಜಕೀಯ ಅವಕಾಶಗಳು ದೊರೆಯುತ್ತಿಲ್ಲ ಎಂದು ಆರೋಪಿಸಿದ್ದಾರೆ. ಚುನಾವಣಾ ಆಯೋಗ ಸೇರಿದಂತೆ ವಿವಿಧ ಸಾಂವಿಧಾನಿಕ ಸಂಸ್ಥೆಗಳ ಮೇಲೆ ಆಡಳಿತಾರೂಢ ಪಕ್ಷದ ಪ್ರಭಾವವಿದೆ. ಮುಖ್ಯವಾಹಿನಿ ಮಾಧ್ಯಮಗಳ ಮೇಲಿನ ನಿಯಂತ್ರಣ, ಆರ್ಥಿಕ ಬಲ ಹಾಗೂ ಧರ್ಮದ ರಾಜಕೀಯ ಬಳಕೆಯೂ ವಿರೋಧ ಪಕ್ಷಗಳಿಗೆ ಸವಾಲಾಗಿದೆ ಎಂದು ದೂರಿದ್ದಾರೆ. ಇಷ್ಟೆಲ್ಲ ಸವಾಲುಗಳ ನಡುವೆಯೂ ಕಾಂಗ್ರೆಸ್ ಪಕ್ಷ ಹೋರಾಟ ಮುಂದುವರಿಸಿದ್ದು, ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ವಿವಿಧ ರೀತಿಯ ಕಿರುಕುಳ ಎದುರಿಸಿದ್ದಾರೆ. ಆದರೂ ದೇಶದ ಪ್ರತಿಯೊಂದು ಗ್ರಾಮ ಮತ್ತು ಜಿಲ್ಲೆಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಂವಿಧಾನದ ಮೌಲ್ಯಗಳಿಗಾಗಿ ಹೋರಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

ಇತ್ತೀಚಿನ ತಿಂಗಳುಗಳಲ್ಲಿ ಹಲವು ಚುನಾವಣೆಗಳಲ್ಲಿ ಅಕ್ರಮ ನಡೆದಿರುವುದು ಸಾಬೀತಾಗಿದೆ ಎಂದು ಆರೋಪಿಸಿದ ಸೋನಿಯಾ ಗಾಂಧಿ, ಈ ಬಗ್ಗೆ ಜನರಲ್ಲಿ ಅರಿವು ಹೆಚ್ಚುತ್ತಿದೆ ಎಂದಿದ್ದಾರೆ. ಕಾಂಗ್ರೆಸ್ ಪಕ್ಷವು ಸಮಾನ ಮನಸ್ಕ ರಾಜಕೀಯ ಪಕ್ಷಗಳೊಂದಿಗೆ ಕೈಜೋಡಿಸಿ ಕೆಲಸ ಮಾಡುತ್ತಿದ್ದು, ಪಕ್ಷದ ರಾಜಕೀಯ ಭವಿಷ್ಯ ದಿನದಿಂದ ದಿನಕ್ಕೆ ಸುಧಾರಿಸುತ್ತಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ರಾಜಕೀಯ ಬೆಳವಣಿಗೆಯಿಂದ ಕಾಂಗ್ರೆಸ್ ಏನನ್ನು ಕಲಿಯಬೇಕು ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಮೋದಿ ಅವರ ಸೈದ್ಧಾಂತಿಕ ಹಿನ್ನೆಲೆ ಕಾಂಗ್ರೆಸ್‌ಗಿಂತ ಭಿನ್ನವಾಗಿದೆ. ಕಾಂಗ್ರೆಸ್‌ನಲ್ಲಿಯೂ ಯಶಸ್ವಿ ರಾಜಕೀಯ ನಾಯಕರ ಉದಾಹರಣೆಗಳಿವೆ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಹಾಗೂ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಂತಹ ನಾಯಕರು ಪಕ್ಷದಲ್ಲೇ ರಾಜಕೀಯವಾಗಿ ಬೆಳೆದಿದ್ದಾರೆ. ಹೀಗಾಗಿ ಬಿಜೆಪಿ ಅಥವಾ ಆರ್‌ಎಸ್‌ಎಸ್‌ನಿಂದ ಕಾಂಗ್ರೆಸ್ ಕಲಿಯಬೇಕಾದದ್ದು ಹೆಚ್ಚೇನೂ ಇಲ್ಲ ಎಂದು ಹೇಳಿದ್ದಾರೆ.

2004ರಲ್ಲಿ ಯುಪಿಎ ಮೈತ್ರಿಕೂಟ ಅಧಿಕಾರಕ್ಕೆ ಬಂದಾಗ ತಾವು ಪ್ರಧಾನಿಯಾಗಿದ್ದರೆ ಸರ್ಕಾರದ ನೀತಿಗಳು ಹೇಗೆ ಬದಲಾಗುತ್ತಿದ್ದವು ಎಂಬ ಪ್ರಶ್ನೆಗೂ ಉತ್ತರಿಸಿದ ಅವರು, ಅಂತಹ ಆಲೋಚನೆ ತಮ್ಮ ಮನಸ್ಸಿಗೆ ಬಂದಿಲ್ಲ ಎಂದಿದ್ದಾರೆ. ಅಂದಿನ ಸರ್ಕಾರದಲ್ಲಿ ಮನಮೋಹನ್ ಸಿಂಗ್ ಆಡಳಿತದ ನೇತೃತ್ವ ವಹಿಸಿದ್ದರೆ, ತಾವು ಪಕ್ಷದ ಜವಾಬ್ದಾರಿ ನಿರ್ವಹಿಸಿದ್ದಾಗಿ ತಿಳಿಸಿದ್ದಾರೆ.

ಈ ನಡುವೆ, ಸೋನಿಯಾ ಗಾಂಧಿ ಅವರ 544 ಪುಟಗಳ ಆತ್ಮಕಥನ Belonging: A Journey of Love ನ.10ರಂದು ಹಾರ್ಪರ್‌ಕಾಲಿನ್ಸ್ ಪ್ರಕಾಶನದ ಮೂಲಕ ಬಿಡುಗಡೆಯಾಗಲಿದೆ. ತಮ್ಮ ಬಾಲ್ಯದ ದಿನಗಳು, ರಾಜೀವ್ ಗಾಂಧಿ ಅವರೊಂದಿಗಿನ ಪರಿಚಯ, ವಿವಾಹ, ಗಾಂಧಿ ಕುಟುಂಬದ ದುರಂತ ಘಟನೆಗಳು ಹಾಗೂ ಭಾರತದ ರಾಜಕೀಯ ಜೀವನದ ಅನುಭವಗಳನ್ನು ಈ ಪುಸ್ತಕ ಒಳಗೊಂಡಿದೆ.

ಐಎಎಫ್ ಹೊಸ ದಾಖಲೆ: ಲಡಾಖ್‌ನಲ್ಲಿ 13,629 ಅಡಿ ಎತ್ತರದಲ್ಲಿ ವಾಯುಪಡೆ ಸಾರಿಗೆ ವಿಮಾನ ಭೂಸ್ಪರ್ಶ



ನವದೆಹಲಿ, ನ.7: ರಷ್ಯಾ ಮೂಲದ ಭಾರತೀಯ ವಾಯುಪಡೆಯ ಸಾರಿಗೆ ವಿಮಾನ ಲಡಾಖ್‌ನ ನಿಯೋಮಾ ವಾಯುನೆಲೆಯಲ್ಲಿ ಶನಿವಾರ ಯಶಸ್ವಿಯಾಗಿ ಇಳಿಯುವ ಮೂಲಕ ಹೊಸ ದಾಖಲೆ ನಿರ್ಮಿಸಿದೆ. ಜಗತ್ತಿನಲ್ಲೇ, ಅತಿ ಎತ್ತರದ ಪ್ರದೇಶದಲ್ಲಿ ಇಳಿದ ಸಾಧನೆ ಈ ವಿಮಾನದ್ದಾಗಿದೆ ಎಂದು ಭಾರತೀಯ ವಾಯುಪಡೆ ತಿಳಿಸಿದೆ.

ಸಮುದ್ರ ಮಟ್ಟದಿಂದ ಸುಮಾರು 13,000 ಅಡಿ ಎತ್ತರದಲ್ಲಿರುವ ಈ ವಾಯುನೆಲೆಯು ಚೀನಾದೊಂದಿಗಿನ ವಾಸ್ತವಿಕ ನಿಯಂತ್ರಣ ರೇಖೆಯಿಂದ ಸುಮಾರು 25 ಕಿ.ಮೀ. ದೂರದಲ್ಲಿದೆ.

ಭಾರತೀಯ ವಾಯುಪಡೆಯ ಐಎಲ್–76ಎಂಡಿ ವಿಮಾನವು ನಿಯೋಮಾದಲ್ಲಿ ಯಶಸ್ವಿಯಾಗಿ ಇಳಿಯುವ ಮೂಲಕ ಇತಿಹಾಸ ನಿರ್ಮಿಸಿದೆ. ಜಗತ್ತಿನಲ್ಲೇ ಈ ವಿಮಾನವು ಅತಿ ಎತ್ತರದ ಪ್ರದೇಶದಲ್ಲಿ ಇಳಿದ ಸಾಧನೆ ಇದಾಗಿದೆ ಎಂದು ಭಾರತೀಯ ವಾಯುಪಡೆ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದೆ.

ವಿಮಾನದ ದೀರ್ಘಕಾಲೀನ ಕಾರ್ಯಕ್ಷಮತೆ, ಅದರ ಸಿಬ್ಬಂದಿಯ ಅಸಾಧಾರಣ ಕೌಶಲ, ನಿಖರತೆ ಮತ್ತು ವೃತ್ತಿಪರತೆಯನ್ನು ಈ ಸಾಧನೆ ಮತ್ತೊಮ್ಮೆ ಸಾಬೀತುಪಡಿಸಿದೆ ಎಂದು ಹೇಳಿದೆ.

ಈ ಸಾಧನೆಯು ಭಾರತದ ಕಾರ್ಯತಂತ್ರದ ವಾಯುಸಾಗಣೆ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವ ಮಹತ್ವದ ಮೈಲಿಗಲ್ಲಾಗಿದೆ ಎಂದು ವಾಯುಪಡೆ ಬಣ್ಣಿಸಿದೆ.

ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್



ಚೆನ್ನೈ,ನ.7: ತಮಿಳುನಾಡಿನ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್ಟಾಪ್ ವಿತರಿಸುವ ಉದ್ದೇಶದಿಂದ ಮುಖ್ಯಮಂತ್ರಿ ವಿಜಯ್ ಅವರು ವೆಟ್ರಿ ಲ್ಯಾಪ್‌ಟಾಪ್ ಯೋಜನೆ ಅನುಷ್ಠಾನಕ್ಕೆ ಆದೇಶ ನೀಡಿದ್ದಾರೆ. ಈ ಯೋಜನೆಗಾಗಿ ರಾಜ್ಯ ಸರ್ಕಾರ 2,000 ಕೋಟಿ ಅನುದಾನ ಮೀಸಲಿಟ್ಟಿದೆ.2026–27ನೇ ಸಾಲಿನ ರಾಜ್ಯ ಬಜೆಟ್‌ನಲ್ಲಿ ಘೋಷಿಸಲಾಗಿದ್ದ ಈ ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ಇದೀಗ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಫಲಾನುಭವಿಗಳ ಆಯ್ಕೆ ಹಾಗೂ ಯೋಜನೆಯ ಜಾರಿಗಾಗಿ ವಿವರವಾದ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ಯೋಜನೆಯ ಪರಿಣಾಮಕಾರಿ ಅನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ ಮುಖ್ಯಮಂತ್ರಿ ವಿಜಯ್ ಅವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲಾಗುತ್ತದೆ. 2026–27ನೇ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಹಾಗೂ ಸರ್ಕಾರದಿಂದ ಅನುದಾನ ಪಡೆಯುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪದವಿ ಮತ್ತು ಡಿಪ್ಲೊಮಾ ಕೋರ್ಸ್‌ಗಳ ಮೊದಲ ಹಾಗೂ ಎರಡನೇ ವರ್ಷದ ವಿದ್ಯಾರ್ಥಿಗಳು ಯೋಜನೆಯ ಫಲಾನುಭವಿಗಳಾಗಲಿದ್ದಾರೆ. ಕಲೆ, ವಿಜ್ಞಾನ, ಎಂಜಿನಿಯರಿಂಗ್, ಪಾಲಿಟೆಕ್ನಿಕ್, ಐಟಿಐ, ವೈದ್ಯಕೀಯ, ಪಶುವೈದ್ಯಕೀಯ, ಕೃಷಿ, ಮೀನುಗಾರಿಕೆ ಮತ್ತು ಕಾನೂನು ಸೇರಿದಂತೆ ವಿವಿಧ ವಿಭಾಗಗಳ ವಿದ್ಯಾರ್ಥಿಗಳಿಗೆ ಯೋಜನೆಯ ಲಾಭ ದೊರೆಯಲಿದೆ. ಇದಲ್ಲದೆ, 2025–26ನೇ ಶೈಕ್ಷಣಿಕ ವರ್ಷದಲ್ಲಿ ಉಚಿತ ಲ್ಯಾಪ್ಟಾಪ್ ಪಡೆಯಲು ಸಾಧ್ಯವಾಗದ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳ ವೃತ್ತಿಪರ ಕೋರ್ಸ್‌ಗಳ ಮೂರನೇ ಮತ್ತು ನಾಲ್ಕನೇ ವರ್ಷದ ವಿದ್ಯಾರ್ಥಿಗಳಿಗೂ ಈ ಯೋಜನೆಯನ್ನು ವಿಸ್ತರಿಸಲಾಗಿದೆ.

ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ವಿಶೇಷ ಲ್ಯಾಪ್ಟಾಪ್: ಎಂಜಿನಿಯರಿಂಗ್ ವಿದ್ಯಾರ್ಥಿಗಳ ತಾಂತ್ರಿಕ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಅವರಿಗೆ ಇಂಟೆಲ್ ಕೋರ್ ಐ5 ಪ್ರೊಸೆಸರ್ ಅಥವಾ ಅದಕ್ಕೆ ಸಮಾನ ಸಾಮರ್ಥ್ಯದ ಪ್ರೊಸೆಸರ್ ಹೊಂದಿರುವ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಸರ್ಕಾರ ನಿರ್ಧರಿಸಿದೆ. ಲ್ಯಾಪ್‌ಟಾಪ್‌ಗಳ ಖರೀದಿ ಜವಾಬ್ದಾರಿಯನ್ನು ತಮಿಳುನಾಡು ಸರ್ಕಾರದ ಎಲೆಕ್ಟ್ರಾನಿಕ್ಸ್ ಕಾರ್ಪೊರೇಷನ್‌ಗೆ ವಹಿಸಲಾಗಿದೆ. ನಿಗದಿತ ಗುಣಮಟ್ಟ ಮತ್ತು ತಾಂತ್ರಿಕ ಮಾನದಂಡಗಳನ್ನು ಪೂರೈಸುವ ಲ್ಯಾಪ್‌ಟಾಪ್ ಖರೀದಿಸಲು ಸಂಸ್ಥೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ ಹೆಚ್ಚಿಸುವುದು, ಕೌಶಲ ಅಭಿವೃದ್ಧಿ ತರಬೇತಿ ಪಡೆಯಲು ನೆರವಾಗುವುದು, ಆನ್‌ಲೈನ್ ಶಿಕ್ಷಣಕ್ಕೆ ಅವಕಾಶ ಕಲ್ಪಿಸುವುದು ಹಾಗೂ ಉದ್ಯೋಗಾವಕಾಶಗಳಿಗೆ ಸಿದ್ಧರಾಗಲು ಸಹಾಯ ಮಾಡುವುದು ಯೋಜನೆಯ ಉದ್ದೇಶವಾಗಿದೆ ಎಂದು ಸರ್ಕಾರ ತಿಳಿಸಿದೆ. ವಿಶೇಷವಾಗಿ ಆರ್ಥಿಕವಾಗಿ ಹಿಂದುಳಿದ ಹಾಗೂ ಮಧ್ಯಮ ವರ್ಗದ ಕುಟುಂಬಗಳ ವಿದ್ಯಾರ್ಥಿಗಳಿಗೆ ಡಿಜಿಟಲ್ ಶಿಕ್ಷಣದ ಸೌಲಭ್ಯ ಒದಗಿಸುವ ಮೂಲಕ ತಂತ್ರಜ್ಞಾನ ಆಧಾರಿತ ಶಿಕ್ಷಣಕ್ಕೆ ಉತ್ತೇಜನ ನೀಡಲು ಈ ಯೋಜನೆ ರೂಪಿಸಲಾಗಿದೆ.

ಡಿ.12ರಂದು ಅಯೋಧ್ಯೆಗೆ ಅಖಿಲೇಶ್ ಯಾದವ್

ಲಖನೌ,ನ.7: ಸಮಾಜವಾದಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹಾಗೂ ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಅಖಿಲೇಶ್ ಯಾದವ್ ಡಿ.12ರಂದು ಕುಟುಂಬ ಸಮೇತರಾಗಿ ಅಯೋಧ್ಯೆಗೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅಯೋಧ್ಯೆಯ ರಾಮಜನ್ಮಭೂಮಿ ಮಂದಿರಕ್ಕೆ ತೆರಳಿ ರಾಮಲಲ್ಲಾನ ದರ್ಶನ ಪಡೆಯಲಿದ್ದಾರೆ. ಸಮಾಜವಾದಿ ಪಕ್ಷದ ನಾಯಕ ಹಾಗೂ ಮಾಜಿ ಸಚಿವ ಪವನ್ ಪಾಂಡೆ ಅವರು ಅಖಿಲೇಶ್ ಯಾದವ್ ಅವರ ಅಯೋಧ್ಯೆ ಭೇಟಿಯ ದಿನಾಂಕವನ್ನು ಪ್ರಕಟಿಸಿದ್ದಾರೆ. ಅಖಿಲೇಶ್ ಯಾದವ್ ಅವರೊಂದಿಗೆ ಪತ್ನಿ ಹಾಗೂ ಸಂಸದೆ ಡಿಂಪಲ್ ಯಾದವ್, ಪುತ್ರ ಮತ್ತು ಪುತ್ರಿ ಕೂಡ ಅಯೋಧ್ಯೆಗೆ ತೆರಳಲಿದ್ದಾರೆ ಎಂದು ತಿಳಿಸಿದ್ದಾರೆ. ಅಯೋಧ್ಯೆಯಲ್ಲಿ ಅಖಿಲೇಶ್ ಯಾದವ್ ಇಡೀ ದಿನ ಕಳೆಯುವ ಸಾಧ್ಯತೆಯಿದೆ. ರಾಮಮಂದಿರದಲ್ಲಿ ರಾಮಲಲ್ಲಾನ ದರ್ಶನ ಪಡೆದ ಬಳಿಕ ಹನುಮಾನ್ಗಢಿ ದೇವಸ್ಥಾನಕ್ಕೂ ಭೇಟಿ ನೀಡಲಿದ್ದಾರೆ. ಅಲ್ಲದೆ, ಸಾಧು–ಸಂತರು ಹಾಗೂ ಮಹಂತರನ್ನು ಭೇಟಿಯಾಗಿ ಆಶೀರ್ವಾದ ಪಡೆಯಲಿದ್ದಾರೆ. ಅವರೊಂದಿಗೆ ಪ್ರಸಾದ ಸ್ವೀಕರಿಸಲಿದ್ದಾರೆ ಎಂದು ಪವನ್ ಪಾಂಡೆ ಮಾಹಿತಿ ನೀಡಿದ್ದಾರೆ.

2024ರ ಜನವರಿಯಲ್ಲಿ ಅಯೋಧ್ಯೆಯ ರಾಮಮಂದಿರದಲ್ಲಿ ನಡೆದ ರಾಮಲಲ್ಲಾ ಪ್ರಾಣಪ್ರತಿಷ್ಠಾಪನಾ ಸಮಾರಂಭಕ್ಕೆ ಅಖಿಲೇಶ್ ಯಾದವ್ ಅವರು ಹಾಜರಾಗಿರಲಿಲ್ಲ. ಇದೀಗ ಪ್ರಾಣಪ್ರತಿಷ್ಠಾಪನೆಯ ಬಳಿಕ ಮೊದಲ ಬಾರಿಗೆ ರಾಮಮಂದಿರಕ್ಕೆ ಭೇಟಿ ನೀಡುತ್ತಿರುವುದು ವಿಶೇಷವಾಗಿದೆ.

ಇನ್ನು ಉತ್ತರ ಪ್ರದೇಶ ವಿಧಾನಸಭೆ ಚುನಾವಣೆ ಮುಂದಿನ ವರ್ಷ ನಡೆಯಲಿರುವ ಹಿನ್ನೆಲೆಯಲ್ಲಿ ಅಖಿಲೇಶ್ ಯಾದವ್ ಅವರ ಅಯೋಧ್ಯೆ ಭೇಟಿ ರಾಜಕೀಯ ವಲಯದಲ್ಲೂ ಗಮನ ಸೆಳೆದಿದೆ.

ಕರ್ನಾಟಕ ಸೇರಿ ಐದು ದಕ್ಷಿಣ ರಾಜ್ಯಗಳಿಗೆ ಹೆಚ್ಚು ಭಾರತ್ ರೈಸ್

■ ಒಂದನೇ ಪುಟದಿಂದ...

ದಾಸ್ತಾನು ವಿವರ ಸಲ್ಲಿಕೆ ಕಡ್ಡಾಯ: ದೇಶಾದ್ಯಂತ ಅಕ್ಕಿ ಮತ್ತು ಭತ್ತ ಸಂಗ್ರಹಿಸಿಡುವ ಎಲ್ಲಾ ಸಂಸ್ಥೆಗಳಿಗೆ ದಾಸ್ತಾನು ವಿವರ ಸಲ್ಲಿಕೆ ಕಡ್ಡಾಯಗೊಳಿಸಿದ್ದು, ಪ್ರತಿ ಶುಕ್ರವಾರ ದಾಸ್ತಾನು ಪ್ರಮಾಣವನ್ನು ನವೀಕರಿಸಲು ಸೂಚಿಸಿದೆ. ಈ ಸಂಬಂಧ ನವೆಂಬರ್ 6ರಂದು ಆದೇಶ ಸಹ ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿರುವ ವ್ಯಾಪಾರಿಗಳು/ಸಗಟು ವ್ಯಾಪಾರಿಗಳು, ಚಿಲ್ಲರೆ ವ್ಯಾಪಾರಿಗಳು, ದೊಡ್ಡ ಚಿಲ್ಲರೆ ಸರಪಳಿ ಸಂಸ್ಥೆಗಳು ಹಾಗೂ ಸಂಸ್ಕರಣಾ ಘಟಕಗಳು/ಅಕ್ಕಿ ಗಿರಣಿದಾರರು ತಮ್ಮ ಬಳಿ ಇರುವ ಅಕ್ಕಿ ಮತ್ತು ಭತ್ತದ ದಾಸ್ತಾನಿನ ವಿವರಗಳನ್ನು ಆರು ವರ್ಗಗಳ ಅಡಿಯಲ್ಲಿ ಘೋಷಿಸಲು ಆದೇಶಿಸಿದ್ದಾಗಿ ತಿಳಿಸಿದ್ದಾರೆ. **ಕೇಂದ್ರದಿಂದ ಕಟ್ಟುನಿಟ್ಟಿನ ಕ್ರಮ:** ದೇಶಾದ್ಯಂತ ಗ್ರಾಹಕರಿಗೆ ಅದರಲ್ಲೂ ವಿಶೇಷವಾಗಿ ದಕ್ಷಿಣ ರಾಜ್ಯಗಳಲ್ಲಿ, ಅಕ್ಕಿ ಸಮಂಜಸ ಬೆಲೆಯಲ್ಲಿ ಲಭಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಕರ್ನಾಟಕ ಸೇರಿದಂತೆ ಐದು ರಾಜ್ಯಗಳಿಗೆ ದಾಸ್ತಾನು ಮಿತಿ ವಿಧಿಸಲು ಅನುಮತಿ ನೀಡಿದೆ. ಆಂಧ್ರಪ್ರದೇಶ, ಕರ್ನಾಟಕ, ಕೇರಳ, ತಮಿಳುನಾಡು ಮತ್ತು ತೆಲಂಗಾಣ ರಾಜ್ಯ ಸರ್ಕಾರಗಳಿಗೆ ಭತ್ತ ಮತ್ತು ಅಕ್ಕಿ ಮೇಲೆ ದಾಸ್ತಾನು ಮಿತಿ ವಿಧಿಸಲು ಅನುಮತಿ ನೀಡಿದೆ. ಮಾರುಕಟ್ಟೆಯಲ್ಲಿ ಸಾಕಷ್ಟು ಅಕ್ಕಿ ಲಭ್ಯತೆ ಖಚಿತಪಡಿಸಿಕೊಳ್ಳಲು ಹಾಗೂ ಅಕ್ರಮ ದಾಸ್ತಾನು ಮತ್ತು ಕಪ್ಪು ಮಾರುಕಟ್ಟೆ ತಡೆಯಲು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೈಗೊಳ್ಳುವ ಕಟ್ಟುನಿಟ್ಟಿನ ಕ್ರಮಗಳ ಅನುಷ್ಠಾನ ಕುರಿತು ನಿಕಟ ಮೇಲ್ವಿಚಾರಣೆ ಸಹ ಮಾಡಲಾಗುತ್ತದೆ ಎಂದು ಹೇಳಿದ್ದಾರೆ.

ಕಳೆದ ಆರ್ಥಿಕ ವರ್ಷದ ಇದೇ ಅವಧಿಯಲ್ಲಿ 11 ಲಕ್ಷ ಮೆಟ್ರಿಕ್ ಟನ್ ಅಕ್ಕಿ ಮಾರಾಟ ಮಾಡಲಾಗಿತ್ತು. ಇದೀಗ 25 ಲಕ್ಷ ಮೆಟ್ರಿಕ್ ಟನ್ ಮಾರಾಟ ಕಂಡಿದೆ. ಈ ಕ್ರಮಗಳು ಮಾರುಕಟ್ಟೆಯಲ್ಲಿ ಅಗತ್ಯ ಆಹಾರ ಪದಾರ್ಥಗಳ ಸಾಕಷ್ಟು ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು, ಬೆಲೆ ಸ್ಥಿರತೆ ಕಾಯ್ದುಕೊಳ್ಳಲು ಮತ್ತು ಗ್ರಾಹಕರ ಹಿತಾಸಕ್ತಿ ರಕ್ಷಿಸುವಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ.

ಗ್ರೀಕ್ ಥೀಮ್‌ನ ಸಲಾಂ ಸೂಕ್‌ಗೆ ಪ್ರವಾಸೋದ್ಯಮ ಇಲಾಖೆ ಸಹಯೋಗ: ಸಚಿವ ಕೆ.ಜೆ. ಜಾರ್ಜ್



ಗ್ರೀಸ್ ದೇಶದ ಬಣ್ಣ, ಆಹಾರ, ಸಂಗೀತ ಮತ್ತು ಮೆಡಿಟರೇನಿಯನ್ ಸಂಸ್ಕೃತಿಯ ಅನುಭವವನ್ನು ಬೆಂಗಳೂರಿಗೆ ಪರಿಚಯಿಸುವ ಕಾರ್ಯಕ್ರಮ

ಬೆಂಗಳೂರು, ನ.7: ಗ್ರೀಸ್ ದೇಶದ ಬಣ್ಣ, ಆಹಾರ, ಸಂಗೀತ ಮತ್ತು ಮೆಡಿಟರೇನಿಯನ್ ಸಂಸ್ಕೃತಿಯ ಅನುಭವವನ್ನು ಬೆಂಗಳೂರಿನಲ್ಲೇ ಪರಿಚಯಿಸುವ 'ಸಲಾಂ ಸೂಕ್ – ದಿ ಬಿಗ್ ಫ್ಯಾಟ್ ಗ್ರೀಕ್ ಸೂಕ್' ಕಾರ್ಯಕ್ರಮಕ್ಕೆ ಕರ್ನಾಟಕ ಪ್ರವಾಸೋದ್ಯಮ ಇಲಾಖೆ ಸಹಯೋಗ ನೀಡುತ್ತಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಭಾನುವಾರ ಪ್ಯಾಲೇಸ್ ಗ್ರೌಂಡ್ಸ್‌ನ ವೈಟ್ ಪೆಟಲ್ಸ್‌ನಲ್ಲಿ ನಡೆಯಲಿರುವ ಇದು ಸಲಾಂ ಸೂಕ್‌ನ 8ನೇ ಆವೃತ್ತಿಯಾಗಿದ್ದು, ಸರಣಿಯ ಮೊದಲ ಗ್ರೀಕ್ ಥೀಮ್ ಆವೃತ್ತಿಯಾಗಿದೆ.

ಗ್ರೀಸ್‌ನ ವಿಶಿಷ್ಟ ನೀಲಿ–ಬಿಳಿ ವಾತಾವರಣ, ಮೆಡಿಟರೇನಿಯನ್ ಶೈಲಿಯ ಬೀದಿ ಮಾರುಕಟ್ಟೆ, ಆಹಾರ, ಫ್ಯಾಷನ್, ಕಲೆ, ಸಂಗೀತ, ಗೃಹ ಅಲಂಕಾರ, ಸೌಂದರ್ಯ ಮತ್ತು ವೆಲ್‌ನೆಸ್ ಅನುಭವಗಳನ್ನು ಒಂದೇ ವೇದಿಕೆಯಲ್ಲಿ ಪರಿಚಯಿಸುವಂತೆ ಕಾರ್ಯಕ್ರಮ ರೂಪಿಸಲಾಗಿದೆ.

ಇಂದಿನ ಪ್ರವಾಸೋದ್ಯಮ ಕೇವಲ ತಾಣಗಳನ್ನು ವೀಕ್ಷಿಸುವುದಕ್ಕೆ ಸೀಮಿತವಾಗಿಲ್ಲ. ಆಹಾರ, ಸಂಗೀತ, ಕಲೆ, ಸಂಸ್ಕೃತಿ ಮತ್ತು ಜೀವನಶೈಲಿಯ ಅನುಭವಗಳೂ ಪ್ರವಾ ಸೋದ್ಯಮದ ಪ್ರಮುಖ ಭಾಗವಾಗಿವೆ. 'ದಿ ಬಿಗ್ ಫ್ಯಾಟ್ ಗ್ರೀಕ್ ಸೂಕ್'ನಂತಹ ಕಾರ್ಯಕ್ರಮಗಳು ಬೆಂಗಳೂರಿನ ಪ್ರವಾಸಿ ಅನುಭವಕ್ಕೆ ಹೊಸ ಆಯಾಮ ನೀಡುತ್ತವೆ. ವಿಶ್ವಾಸಾರ್ಹ ಆಯೋಜಕರೊಂದಿಗೆ ಸಹಯೋಗದ ಮೂಲಕ ಇಂತಹ ಗುಣಮಟ್ಟದ ಸಾಂಸ್ಕೃತಿಕ ಮತ್ತು ಅನುಭವಾಧಾರಿತ ಕಾರ್ಯಕ್ರಮಗಳನ್ನು ಉತ್ತೇಜಿಸುವುದು ನಮ್ಮ ಉದ್ದೇಶ ಎಂದು ಸಚಿವ ಕೆ.ಜೆ. ಜಾರ್ಜ್ ಹೇಳಿದರು.

ಬೆಂಗಳೂರಿನಲ್ಲೇ ಒಂದು ಗ್ರೀಕ್ ಸ್ಟ್ರೀಟ್ ಅನುಭವ: ಗ್ರೀಕ್ ನಗರಗಳ ಬೀದಿ ಮಾರುಕಟ್ಟೆ ಮತ್ತು ಮೆಡಿಟರೇನಿಯನ್ ಸಂಸ್ಕೃತಿಯಿಂದ ಪ್ರೇರಣೆ ಪಡೆದಿರುವ ಈ ಆವೃತ್ತಿಯಲ್ಲಿ ನೀಲಿ–ಬಿಳಿ ವಿನ್ಯಾಸ, ಮಾರುಕಟ್ಟೆ ಬೀದಿಗಳ ವಾತಾವರಣ, ಆಹಾರ ಮತ್ತು ಸಂಗೀತದ ಅನುಭವ ಪ್ರಮುಖ ಆಕರ್ಷಣೆಯಾಗಲಿದೆ. ಕೇವಲ ಶಾಪಿಂಗ್ ಕಾರ್ಯಕ್ರಮವಾಗಿರದೆ, ಜನರು ತಿರುಗಾಡಿ, ಆಹಾರ ಸವಿದು, ಸಂಗೀತ ಆನಂದಿಸಿ, ಹೊಸ ಸಂಸ್ಕೃತಿಯನ್ನು ಅನುಭವಿಸುವ ರೀತಿಯಲ್ಲಿ ಕಾರ್ಯಕ್ರಮ ರೂಪಿಸಲಾಗಿದೆ. ದಿ ಟ್ರೈಬ್ ಅಂಡ್ ಕಂಪೆನಿ ಸಂಸ್ಥೆಯ ಸಲಾಂ ಸೂಕ್ ಈ ಹಿಂದೆ ಮೊರಾಕೊ, ಟರ್ಕಿ, ಉಜ್ಬೇಕಿಸ್ತಾನ್, ಭಾರತ ಮತ್ತು ದುಬೈ ಸೇರಿದಂತೆ ವಿವಿಧ ಸಂಸ್ಕೃತಿಗಳನ್ನು ಆಧರಿಸಿದ ಕಾರ್ಯಕ್ರಮಗಳನ್ನು ಆಯೋಜಿಸಿದೆ. ಕಳೆದ ಆವೃತ್ತಿಯು ದುಬೈ ಥೀಮ್‌ನಲ್ಲಿ ನಡೆದಿದ್ದು, ಈ ಬಾರಿ ಗ್ರೀಕ್ ಸಂಸ್ಕೃತಿಯನ್ನು ಕೇಂದ್ರವಾಗಿಸಿಕೊಂಡಿದೆ.

ಬೆಂಗಳೂರಿನ ಸಾಂಸ್ಕೃತಿಕ ಪ್ರವಾಸೋದ್ಯಮ ವಿಸ್ತರಣೆ ಉದ್ದೇಶ



ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಒಂದು ನಗರದ ಪ್ರವಾಸಿ ಆಕರ್ಷಣೆಯನ್ನು ಕೇವಲ ಅದರ ಸ್ಮಾರಕಗಳು ಅಥವಾ ತಾಣಗಳು ನಿರ್ಧರಿಸುವುದಿಲ್ಲ. ವರ್ಷಪೂರ್ತಿ ನಡೆಯುವ ಗುಣಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮಗಳು, ಆಹಾರ ಮತ್ತು ಜೀವನಶೈಲಿ ಅನುಭವಗಳೂ ನಗರ ಪ್ರವಾಸೋದ್ಯಮಕ್ಕೆ ಮಹತ್ವದ ಕೊಡುಗೆ ನೀಡುತ್ತವೆ. ಇಂತಹ ಕಾರ್ಯಕ್ರಮಗಳೊಂದಿಗೆ ಸಹಯೋಗದ ಮೂಲಕ ಬೆಂಗಳೂರಿನ ಸಾಂಸ್ಕೃತಿಕ ಪ್ರವಾಸೋದ್ಯಮದ ವ್ಯಾಪ್ತಿಯನ್ನು ವಿಸ್ತರಿಸುವುದು ನಮ್ಮ ಉದ್ದೇಶ ಎಂದರು. ದಿ ಟ್ರೈಬ್ ಅಂಡ್ ಕಂಪನಿ ಸ್ಥಾಪಕಿ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿ ತಾರಾಖಾನ್ ಮಾತನಾಡಿದರು.

ಕಾರ್ಯಕ್ರಮ: ಸಲಾಂ ಸೂಕ್
ದಿನಾಂಕ: ನವೆಂಬರ್ 8, 2026
ಸಮಯ: ಮಧ್ಯಾಹ್ನ 12ರಿಂದ ರಾತ್ರಿ 10ರವರೆಗೆ
ಸ್ಥಳ: ವೈಟ್ ಪೆಟಲ್ಸ್, ಅರಮನೆ ಮೈದಾನ, ಬೆಂಗಳೂರು



ಕರ್ನಾಟಕ ಪೊಲೀಸರು ಆರಂಭಿಸಿರುವ "ಅಕ್ಕ ಪಡೆ" (ಅಕ್ಕ ಸ್ಕ್ವಾಡ್) ವಿಶೇಷ ಮಹಿಳಾ ನೇತೃತ್ವದ ಸುರಕ್ಷತಾ ಉಪಕ್ರಮವು ಶನಿವಾರ ಧಾರವಾಡದಲ್ಲಿ ಕೌಶಲ್ಯವನ್ನು ಪ್ರದರ್ಶಿಸಿತು.

ಭೂ ಅಕ್ರಮ ಮಂಜೂರಾತಿ, ಕೋಮುಲ್ ನೇಮಕಾತಿ ಅಕ್ರಮ ಪ್ರಕರಣ

ಶಾಸಕ ಕೆ.ವೈ. ನಂಜೇಗೌಡ ವಿರುದ್ಧ ಇ.ಡಿ. ಸಲ್ಲಿಸಿದ್ದ ದೂರು ರದ್ದುಗೊಳಿಸಿದ ಹೈಕೋರ್ಟ್

ಬೆಂಗಳೂರು, ನ.7: ಭೂಮಿ ಅಕ್ರಮ ಮಂಜೂರಾತಿ ಹಾಗೂ ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿಯಮಿತದ (ಕೋಮುಲ್) ನೇಮಕಾತಿ ಅಕ್ರಮ ಆರೋಪಗಳಿಗೆ ಸಂಬಂಧಿಸಿದಂತೆ ಮಾಲೂರು ಕ್ಷೇತ್ರದ ಕಾಂಗ್ರೆಸ್ ಶಾಸಕ ಕೆ. ವೈ.ನಂಜೇಗೌಡ ಅವರಿಗೆ ಹೈಕೋರ್ಟ್‌ನಲ್ಲಿ ಬೃಹತ್ ರಿಲೀಫ್ ಸಿಕ್ಕಿದೆ.

ನಂಜೇಗೌಡ ಅವರ ವಿರುದ್ಧ ಜಾರಿ ನಿರ್ದೇಶನಾಲಯ (ಇ.ಡಿ.) ದಾಖಲಿಸಿದ್ದ ಇಸಿಐಆರ್ ಹಾಗೂ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಸಲ್ಲಿಸಲಾಗಿದ್ದ ಖಾಸಗಿ ದೂರನ್ನು ಹೈಕೋರ್ಟ್ ರದ್ದುಪಡಿಸಿ ಆದೇಶಿಸಿದೆ. ಇಡಿ ದಾಖಲಿಸಿದ್ದ ಇಸಿಐಆರ್ ಮತ್ತು ಪಿಸಿಆರ್ ರದ್ದುಗೊಳಿಸುವಂತೆ ಕೋರಿ ಶಾಸಕ ಕೆ.ವೈ. ನಂಜೇಗೌಡ ಅವರು ಸಲ್ಲಿಸಿದ್ದ ಅರ್ಜಿಯ ಸುದೀರ್ಘ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಐ. ಅರುಣ್ ಅವರಿದ್ದ ಏಕಸದಸ್ಯ ಪೀಠವು ಈ ಪ್ರಮುಖ ತೀರ್ಪನ್ನು ಪ್ರಕಟಿಸಿದೆ. ಈ ಆದೇಶದಿಂದಾಗಿ ಶಾಸಕ



ನಂಜೇಗೌಡ ಅವರ ಮೇಲಿದ್ದ ಇಡಿ ತನಿಖೆಯ ತಲವಾರಿಗೆ ತೆರೆಬಿದ್ದಂತಾಗಿದೆ.

ಶಾಸಕ ಕೆ.ವೈ. ನಂಜೇಗೌಡ ಅವರ ವಿರುದ್ಧ ಆರಂಭದಲ್ಲಿ ಭೂಮಿ ಅಕ್ರಮ ಮಂಜೂರಾತಿ ಆರೋಪದ ಮೇಲೆ ಸ್ಥಳೀಯ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು. ಇದನ್ನೇ ಆಧಾರವಾಗಿಟ್ಟುಕೊಂಡು ಇಡಿ ಅಧಿಕಾರಿಗಳು ಇಸಿಐಆರ್ ದಾಖಲಿಸಿ, ನಂಜೇಗೌಡ ಅವರ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿದ್ದರು. ತದನಂತರ, 2023ರಲ್ಲಿ ನಡೆದ ಕೋಮುಲ್ ನೇಮಕಾತಿಯಲ್ಲಿ ಅಕ್ರಮ ಎಸಗಲಾಗಿದೆ ಮತ್ತು ಇದರಲ್ಲಿ ನಂಜೇಗೌಡ ಭಾಗಿಯಾಗಿದ್ದಾರೆ ಎಂದು ಆರೋಪಿಸಿ, ಲೋಕಾಯುಕ್ತ ಪೊಲೀಸರಿಂದ ತನಿಖೆ ನಡೆಸುವಂತೆ ಕೋರಿ ಇಡಿ ಅಧಿಕಾರಿಗಳು 2024ರ ಸೆಪ್ಟೆಂಬರ್ 11ರಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಖಾಸಗಿ ದೂರು ಸಲ್ಲಿಕೆ ಮಾಡಿದ್ದರು.

ಇದನ್ನು ಪ್ರಶ್ನಿಸಿ ನಂಜೇಗೌಡ ಅವರು 2025ರಲ್ಲಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಅರ್ಜಿದಾರರ ಪರ ವಾದ ಮಂಡಿಸಿದ ಹಿರಿಯ ವಕೀಲ ಕಿರಣ್ ಜವಳಿ ಅವರು, "ಮೂಲ ಭೂ ಅಕ್ರಮ ಪ್ರಕರಣದಲ್ಲಿ ಪೊಲೀಸರು ಈಗಾಗಲೇ 'ಬಿ ರಿಪೋರ್ಟ್' ಸಲ್ಲಿಸಿದ್ದು, ಅದನ್ನು ವಿಚಾರಣಾ ನ್ಯಾಯಾಲಯ ಕೂಡ ಅಂಗೀಕರಿಸಿದೆ. ಮೂಲ ಪ್ರಕರಣವೇ ಇಲ್ಲದಿರುವಾಗ ಇಡಿಗೆ ಖಾಸಗಿ ದೂರು ದಾಖಲಿಸುವ ಅಧಿಕಾರ ವ್ಯಾಪ್ತಿಯಿರುವುದಿಲ್ಲ" ಎಂದು ನ್ಯಾಯಪೀಠಕ್ಕೆ ಪ್ರಬಲ ವಾದ ಮಂಡಿಸಿದ್ದರು. ಶಾಸಕರ ಪರವಾಗಿ ವಕೀಲ ಸಿ.ಆರ್. ಮಹೇಂದ್ರ ಗೌಡ ಅವರು ವಕಾಲತ್ತು ವಹಿಸಿದ್ದರು. ಅರ್ಜಿದಾರರ ಪರ ವಕೀಲರ ವಾದವನ್ನು ಎತ್ತಿಹಿಡಿದ ಉನ್ನತ ನ್ಯಾಯಾಲಯವು, ಮೂಲ ಅಪರಾಧವೇ ರದ್ದಾಗಿರುವಾಗ ಇಡಿ ಕೈಗೊಂಡಿರುವ ಇಸಿಐಆರ್ ಹಾಗೂ ಪಿಸಿಆರ್ ಕ್ರಮಗಳು ಕಾನೂನುಬದ್ಧವಾಗಿ ನಿಲ್ಲುವುದಿಲ್ಲ ಎಂದು ಸ್ಪಷ್ಟಪಡಿಸಿ, ನಂಜೇಗೌಡ ವಿರುದ್ಧ ಇಡಿ ಹೂಡಿದ್ದ ಪ್ರಕರಣಗಳನ್ನು ರದ್ದುಗೊಳಿಸಿ ತೀರ್ಪು ನೀಡಿದೆ.

ಪಿಜಿ ವೈದ್ಯಕೀಯ ಮೊದಲ ಸುತ್ತಿನ ಫಲಿತಾಂಶ ಪ್ರಕಟ: 3,268 ಸೀಟು ಹಂಚಿಕೆ

ಬೆಂಗಳೂರು, ನ.7: ಸ್ನಾತಕೋತ್ತರ ವೈದ್ಯಕೀಯ ಕೋರ್ಸ್ ಪ್ರವೇಶಕ್ಕೆ ಮೊದಲ ಸುತ್ತಿನ ಸೀಟು ಹಂಚಿಕೆಯ ಅಂತಿಮ ಫಲಿತಾಂಶ ಪ್ರಕಟಿಸಿದ್ದು, ಪ್ರವೇಶ ಪ್ರಕ್ರಿಯೆಯ ವೇಳಾಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದೆ. ಈ ಸುತ್ತಿನಲ್ಲಿ ಒಟ್ಟು 4,388 ಸೀಟುಗಳ ಪೈಕಿ 3,268 ಸೀಟು ಹಂಚಿಕೆಯಾಗಿವೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ.

ಸೀಟು ಹಂಚಿಕೆಯಾದವರು



ನ.11ರವರೆಗೆ ಚಾಯ್ಸ್ ದಾಖಲಿಸಲು ಅವಕಾಶ ನೀಡಲಾಗಿದೆ. ಚಾಯ್ಸ್–1 ಮತ್ತು 2 ದಾಖಲಿಸಿದವರು ನ.11ರವರೆಗೆ ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕ ಪಾವತಿಸಬೇಕು. ನ.12ರೊಳಗೆ ಶುಲ್ಕ ಪಾವತಿಸಬೇಕು ಎಂದು ಅವರು ತಿಳಿಸಿದ್ದಾರೆ.

ಚಾಯ್ಸ್–1 ದಾಖಲಿಸಿದವರು, ಶುಲ್ಕ ಪಾವತಿ ನಂತರ ನ.13ರವರೆಗೆ ಕೆಇಎ ಕಚೇರಿಯಲ್ಲಿ ಮೂಲ ದಾಖಲೆ ಸಲ್ಲಿಸಿದ ನಂತರ ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಂಡು, ನ.14ರೊಳಗೆ ಕಾಲೇಜುಗಳಲ್ಲಿ ವರದಿ ಮಾಡಿಕೊಳ್ಳಬೇಕು ಎಂದು ಅವರು ವಿವರಿಸಿದ್ದಾರೆ.

ಎಂಎಸ್‌ಸಿ ನರ್ಸಿಂಗ್: ಪ್ರವೇಶಕ್ಕೆ ವೇಳಾಪಟ್ಟಿ ಪ್ರಕಟ

ಬೆಂಗಳೂರು, ನ.7: ಎಂಎಸ್ಸಿ ನರ್ಸಿಂಗ್ ಕೋರ್ಸ್ ಪ್ರವೇಶಕ್ಕೆ ಸಂಬಂದಿಸಿದಂತೆ ಮೊದಲ ಸುತ್ತಿನ ಸೀಟು ಹಂಚಿಕೆಗೆ ಪೂರಕವಾಗಿ ಅಭ್ಯರ್ಥಿಗಳ ಮೆರಿಟ್ ಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇಂದು ಪ್ರಕಟಿಸಿದೆ.

ಅಭ್ಯರ್ಥಿಗಳು ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿ ಸಿದ್ಧಪಡಿಸಿದ್ದು ವೇಳಾಪಟ್ಟಿ ಪ್ರಕಾರ ಪ್ರವೇಶ ಪಡೆಯಬೇಕು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಸೀಟ್ ಮ್ಯಾಟ್ರಿಕ್ಸ್ ಕೂಡ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ನ.7ರಂದು ಬೆಳಿಗ್ಗೆ 11 ಗಂಟೆ ನಂತರ ವೆರಿಫಿಕೇಷನ್ ಸ್ಲಿಪ್ ಡೌನ್‌ಲೋಡ್ ಮಾಡಿಕೊಳ್ಳಬೇಕು. ನ.7ರಂದು ಮಧ್ಯಾಹ್ನ 1 ಗಂಟೆಯಿಂದ ನ.12ರಂದು ಬೆಳಿಗ್ಗೆ 11ಗಂಟೆವರೆಗೆ ಇಚ್ಛೆ/ ಆಯ್ಕೆಗಳನ್ನು ದಾಖಲಿಸಬೇಕು. ನ.12ರಂದು ಮಧ್ಯಾಹ್ನ 3ಗಂಟೆ ನಂತರ ಅಣಕು ಸೀಟು ಹಂಚಿಕೆ ಫಲಿತಾಂಶ ಪ್ರಕಟಿಸಲಾಗುತ್ತದೆ. ನ.12ರಂದು ಸಂಜೆ 4ರಿಂದ ನ.14ರಂದು ಬೆಳಿಗ್ಗೆ 11ಗಂಟೆವರೆಗೆ ಇಚ್ಛೆ/ಆಯ್ಕೆಗಳನ್ನು ಅದಲು/ಬದಲು, ಅಳಿಸುವುದಕ್ಕೂ ಅವಕಾಶ ನೀಡಲಾಗಿದೆ. ನ.14ರಂದು ಸಂಜೆ 4 ಗಂಟೆ ನಂತರ ನೈಜ ಫಲಿತಾಂಶ ಪ್ರಕಟಿಸಲಾಗುತ್ತದೆ ಎಂದು ಅವರು ವಿವರಿಸಿದ್ದಾರೆ.

ಮೀಡಿಯಾ ಕಪ್: ಹರಾಜು ಪ್ರಕ್ರಿಯೆ ಚಾಲನೆ

ಬೆಂಗಳೂರು, ನ.7: ಪತ್ರಕರ್ತರು ಹಾಗೂ ಮಾಧ್ಯಮದ ಗೆಳೆಯರಿಗಾಗಿ ಫೈವ್‌ಸ್ಟಾರ್ಸ್ ಸಂಸ್ಥೆ ಆಯೋಜಿಸಿರುವ ಮೀಡಿಯಾ ಕಪ್‌ನ ಆಟಗಾರರ ಹರಾಜು ಪ್ರಕ್ರಿಯೆ ನಗರದ ಖಾಸಗಿ ಕ್ಲಬ್‌ನಲ್ಲಿ ನಡೆಯಿತು.

ಎವಿಆರ್ ಸಿನಿಮ್ಯಾಕ್ಸ್ ಅರ್ಪಿಸುತ್ತಿರುವ ಈ ಕ್ರಿಕೆಟ್ ಹಬ್ಬದ ಮೀಡಿಯಾ ಟ್ರೋಫಿಯನ್ನು ನಟ ವಸಿಷ್ಠ ಸಿಂಹ ಅನಾವರಣಗೊಳಿಸಿದರು. ಕಾರ್ಯಕ್ರಮದಲ್ಲಿ ಎಂಟು ತಂಡಗಳ ಆಯ್ಕೆ ನಡೆಯಿತು. ಇದೇ ವೇಳೆ ಎಲ್ಲ ತಂಡಗಳ ಜರ್ಸಿಗಳನ್ನು ಬಿಡುಗಡೆಗೊಳಿಸಲಾಯಿತು.

ನಿಶ್ಚಿತ ಚಾಲೆಂಜರ್ಸ್, ರಂಗ ಇಲೆವೆನ್, ಟೀಂ ಪರ್ವಂ, ಬಸವನಗುಡಿ ಸಾಯಿ ಕ್ರಿಕೆಟರ್ಸ್, ಸಿರ್ ಚಾಲೆಂಜರ್ಸ್, ದೇವ್ ಬ್ಯಾಟ್ಲರ್ಸ್, ಗುರು ಸುಜಯ್, ಕ್ರಿಕೆಟರ್ಸ್, ಮರ್ರೈನ್ ಫೈಟರ್ಸ್ ತಂಡಗಳು ಟೂರ್ನಿಯಲ್ಲಿ ಭಾಗವಹಿಸಲಿವೆ.

ಡಿಸೆಂಬರ್ ಮೊದಲ ವಾರದಲ್ಲಿ ನಡೆಯಲಿರುವ ಪಂದ್ಯಾವಳಿಯಲ್ಲಿ ಕೇವಲ ಮಾಧ್ಯಮ ಪ್ರತಿನಿಧಿಗಳಲ್ಲದೆ ಚಿತ್ರರಂಗದ ಕೆಲ ನಟರೂ ಕೂಡ ಭಾಗವಹಿಸಲಿದ್ದಾರೆ ಎಂದು ಆಯೋಜಕರು ತಿಳಿಸಿದರು.

ಇದಾದ ನಂತರ ಸುಮಾರು 200ರಕ್ಕೂ ಹೆಚ್ಚು ಅನುಭವಿ ಹಾಗೂ ಪರಿಣತ ಆಟಗಾರರ ಹರಾಜು ಪ್ರಕ್ರಿಯೆ ನಡೆಯಿತು. ಇದರಲ್ಲಿ ಚೇತನ್ ಸಿ.ಆರ್. ತಂಡದ ಸಿಆರ್ ಚಾಲೆಂಜರ್ಸ್ ತಂಡವು ಪ್ರಮುಖ ಆಟಗಾರರಾದ ಸೈಮೋನ್ ಅವರನ್ನು ಅತಿ ಹೆಚ್ಚಿನ ಬಿಡ್ ಮಾಡಿ ತನ್ನ ತೆಕ್ಕೆಗೆ ಹಾಕಿಕೊಂಡಿದ್ದಲ್ಲದೆ, ಐಪಿಎಲ್ ಮಾದರಿಯಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಇನ್ನೂ ಪ್ರಮುಖ ಆಟಗಾರರನ್ನು ಜಿದ್ದಾಜಿದ್ದಿಗೆ ಬಿದ್ದು ತಂಡಗಳು ಖರೀದಿಸಿದರು.

ಸಮಾರಂಭದಲ್ಲಿ ನಟ ವಸಿಷ್ಠ ಸಿಂಹ, ಪ್ರಾಯೋಜಕ ರಾಯರ ಬೃಂದಾವನದ, ಮಾಲೀಕ ಮಂಜುನಾಥ್ ಎನ್. ಹಾಗೂ ಟಾಸ್ಕ್ ಎಂಟರ್‌ಪ್ರೈಸಸ್ ಮಾಲೀಕ ಸಂಜಯ್, ಹಿರಿಯ ಪತ್ರಕರ್ತ ರಮಾಕಾಂತ್, ಪ್ರೆಸ್‌ಕ್ಲಬ್‌ನ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ಬೆಳ್ಳಿತಟ್ಟೆ, ಆಯೋಜಕರಾದ ಕೃಷ್ಣ ನಾಯಕ, ರಚನ್, ಜಯಪ್ರಕಾಶ್, ಸಯ್ಯದ್, ರವಿಕುಮಾರ್ ಸೇರಿದಂತೆ ಎಲ್ಲ ತಂಡಗಳ ಮಾಲೀಕರು ಭಾಗವಹಿಸಿದ್ದರು.

ರಾಜ್ಯದಲ್ಲಿ ಮುಂದುವರಿದ ಮಳೆಯ ಅಬ್ಬರ: ಮಂಡ್ಯದಲ್ಲಿ ಅತ್ಯಧಿಕ 7 ಸೆಂ.ಮೀ. ಮಳೆ ದಾಖಲು

ಬೆಂಗಳೂರು,ನ.7: ರಾಜ್ಯದಲ್ಲಿ ಕಳೆದೊಂದು ವಾರದಿಂದ ಮಳೆ ಅಬ್ಬರಿಸುತ್ತಿದೆ. ನಾನಾ ಭಾಗಗಳಲ್ಲಿ ಧಾರಾಕಾರ ಮಳೆ ಸುರಿಯುತ್ತಿದೆ. 13 ಜಿಲ್ಲೆಗಳಲ್ಲಿ ಇನ್ನೂ ಮೂರು ದಿನ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು ಹೇಳಿದೆ.

ಹವಾಮಾನ ವರದಿ ಪ್ರಕಾರ, ದಕ್ಷಿಣ ಒಳನಾಡಿನ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರು, ಮಂಡ್ಯ, ಚಾಮರಾಜನಗರ, ರಾಮನಗರ ಮತ್ತು ಕೋಲಾರ ಜಿಲ್ಲೆಗಳು ಹಾಗೂ ಕರಾವಳಿ ಭಾಗದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮಳೆಯಾಗಲಿದೆ. ಕಳೆದ 24 ಗಂಟೆಗಳ ಅವಧಿಯಲ್ಲಿ ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಉತ್ತಮ ಮಳೆ ದಾಖಲಾಗಿದೆ. ಮಂಡ್ಯ ಜಿಲ್ಲೆಯ ಬೆಳ್ಳೂರಿನಲ್ಲಿ ಅತ್ಯಧಿಕ 7 ಸೆಂ.ಮೀ. ಮಳೆಯಾಗಿದೆ. ಹಾಸನ ಜಿಲ್ಲೆಯ ಅರಕಲಗೂಡಿನಲ್ಲಿ 4 ಸೆಂ.ಮೀ., ಕೊಣನೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ ತಲಾ 3 ಸೆಂ.ಮೀ. ಮಳೆ ಸುರಿದಿದೆ. ಮಂಗಳೂರು, ಸುಳ್ಯ, ಪುತ್ತೂರು, ಕಡಬ, ಬೆಳ್ತಂಗಡಿ ಹಾಗೂ ಬಂಟ್ವಾಳ ಭಾಗಗಳಲ್ಲಿ ಉತ್ತಮ ಮಳೆಯಾಗಿದೆ.

ಆದಾಗ್ಯೂ, ರಾಯಚೂರು, ವಿಜಯಪುರ, ಬಾಗಲಕೋಟೆ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನಗಳ ಕಾಲ ಒಣಹವೆಯೇ ಮುಂದುವರಿಯಲಿದೆ. ಈ ಪ್ರದೇಶಗಳಲ್ಲಿ ಮಳೆಯ ಲಕ್ಷಣಗಳಿಲ್ಲದೆ, ಹಗಲಿನಲ್ಲಿ ತೀವ್ರ ಬಿಸಿಲು ಮತ್ತು ಸೆಕೆಯ ವಾತಾವರಣ ಇರಲಿದೆ ಎಂದು ಇಲಾಖೆ ತಿಳಿಸಿದೆ.

ಇನ್ನು ದಕ್ಷಿಣ ಒಳನಾಡಿನ ವ್ಯಾಪ್ತಿಗೆ ಒಳಪಡುವ ಬಳ್ಳಾರಿ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ತುಮಕೂರು ಹಾಗೂ ವಿಜಯನಗರ ಜಿಲ್ಲೆಗಳಲ್ಲೂ ಹವಾಮಾನವು ಒಣಹವೆಯಿಂದ ಕೂಡಿದ್ದು, ಬಿಸಿಲ



ವಾತಾವರಣ ಇರಲಿದೆ. ಆದರೂ, ಸಂಜೆ ವೇಳೆ ಸೋನೆ ಮಳೆಯಾಗುವ ನಿರೀಕ್ಷೆಯೂ ಇದೆ ಎಂದು ಇಲಾಖೆ ಹೇಳಿದೆ.

ಬಸ್, ಹಾಲಿನ ದರ ಏರಿಕೆ ಬೆನ್ನಲ್ಲೇ ಆಟೋಭತ್ಯೆ ಹೆಚ್ಚಳಕ್ಕೆ ಮನವಿ: ಕನಿಷ್ಠ ದರ 50 ರೂ.ಗೆ ಏರಿಸಲು ಒತ್ತಾಯ

ಬೆಂಗಳೂರು, ನ,7 : ರಾಜ್ಯದಲ್ಲಿ ಹಾಲು, ಮೊಸರು ಸೇರಿದಂತೆ ನಂದಿನಿ ಉತ್ಪನ್ನಗಳ ಬೆಲೆ ಏರಿಕೆ ಹಾಗೂ ಬಸ್ ಪ್ರಯಾಣ ದರ ಹೆಚ್ಚಳದ ಬೆನ್ನಲ್ಲೇ ಇದೀಗ ಆಟೋ ಪ್ರಯಾಣ ದರ ಏರಿಕೆಯ ಚರ್ಚೆ ಮುನ್ನೆಲೆಗೆ ಬಂದಿದೆ. ಆಟೋ ಪ್ರಯಾಣ ದರವನ್ನು ಪರಿಷ್ಕರಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲು ಆಟೋ ಸಂಘಟನೆಗಳ ಒಕ್ಕೂಟ ಸಿದ್ಧತೆ ನಡೆಸಿದ್ದು, ಜನಸಾಮಾನ್ಯರಿಗೆ ಮತ್ತೊಂದು ದರ ಏರಿಕೆಯ ಬಿಸಿ ತಟ್ಟುವ ಸಾಧ್ಯತೆ ಎದುರಾಗಿದೆ. ರಾಜ್ಯದಲ್ಲಿ ಪ್ರಸ್ತುತ ಆಟೋ ಪ್ರಯಾಣದ ಕನಿಷ್ಠ ದರ 36 ರೂ. ಇದ್ದು, ಪ್ರತಿ ಕಿಲೋಮೀಟರ್‌ಗೆ 18 ರೂ. ನಿಗದಿಯಾಗಿದೆ. ಈ ದರವನ್ನು ಹೆಚ್ಚಿಸುವಂತೆ ಆಟೋಚಾಲಕರ ಸಂಘಟನೆಗಳು ಒತ್ತಾಯಿಸುತ್ತಿವೆ. ಇಂಧನ ಬೆಲೆ, ವಾಹನ ನಿರ್ವಹಣೆ ವೆಚ್ಚ ಹಾಗೂ ಜೀವನ ನಿರ್ವಹಣೆಯ ಖರ್ಚು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ದರ ಪರಿಷ್ಕರಣೆ ಅಗತ್ಯ ಎಂಬುದು ಸಂಘಟನೆಗಳ ವಾದವಾಗಿದೆ.

ತಮಿಳುನಾಡು ಮಾದರಿ ಜಾರಿಗೆ ಒತ್ತಾಯ: ತಮಿಳುನಾಡಿನಲ್ಲಿ ಜಾರಿಯಲ್ಲಿದೆ ಎಂದು ಉಲ್ಲೇಖಿಸಲಾಗಿರುವ ದರ ಮಾದರಿಯಂತೆ ಕರ್ನಾಟಕದಲ್ಲೂ ಆಟೋ ಪ್ರಯಾಣ ದರ ನಿಗದಿಪಡಿಸಬೇಕು ಎಂಬ ಬೇಡಿಕೆ ಕೇಳಿಬಂದಿದೆ.

ಅಲ್ಲಿ ಕನಿಷ್ಠ ಪ್ರಯಾಣ ದರವನ್ನು 50 ರೂ. ಹಾಗೂ ಕಿ.ಮೀ.ಗೆ 25 ರೂ. ನಿಗದಿಪಡಿಸಿರುವ ಮಾದರಿಯನ್ನು ರಾಜ್ಯದಲ್ಲೂ ಜಾರಿಗೆ ತರಬೇಕೆಂದು ಆಟೋ ಸಂಘಟನೆಗಳ ಒಕ್ಕೂಟ ಆಗ್ರಹಿಸಲು ಮುಂದಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಪ್ರಸ್ತುತ ದರ ವ್ಯವಸ್ಥೆಯನ್ನು ಪರಿಷ್ಕರಿಸಿ, ಕನಿಷ್ಠ ಪ್ರಯಾಣ ದರ ಹಾಗೂ ಪ್ರತಿ ಕಿಲೋಮೀಟರ್‌ನ ದರವನ್ನು ಹೆಚ್ಚಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ನಡೆಯುತ್ತಿದೆ.

ಜನಸಾಮಾನ್ಯರ ಜೇಬಿಗೆ ಮತ್ತಷ್ಟು ಹೊರೆ? ಈಗಾಗಲೇ ಹಾಲು ಮತ್ತು ಮೊಸರಿನ ಬೆಲೆ ಏರಿಕೆ, ಬಸ್ ಪ್ರಯಾಣ ದರ ಹೆಚ್ಚಳದಿಂದ ಸಂಕಷ್ಟ



ಎದುರಿಸುತ್ತಿರುವ ಜನರಿಗೆ ಆಟೋ ದರ ಏರಿಕೆಯ ಪ್ರಸ್ತಾವನೆ ಮತ್ತೊಂದು ಹೊರೆ ತಂದೊಡ್ಡುವ ಆತಂಕ ಮೂಡಿಸಿದೆ. ದಿನನಿತ್ಯ ಕಚೇರಿ, ಶಾಲಾ–ಕಾಲೇಜು ಹಾಗೂ ಇತರ ಕೆಲಸಗಳಿಗೆ ಆಟೋಗಳನ್ನು ಅವಲಂಬಿಸಿರುವ ಪ್ರಯಾಣಿಕರ ಮೇಲೆ ದರ ಪರಿಷ್ಕರಣೆಯ ಪರಿಣಾಮ ಬೀರುವ ಸಾಧ್ಯತೆಯಿದೆ. ಒಕ್ಕೂಟವು ಸರ್ಕಾರಕ್ಕೆ ಅಧಿಕೃತ ಪ್ರಸ್ತಾವನೆ ಸಲ್ಲಿಸಿದ ಬಳಿಕ ದರ ಏರಿಕೆ ಕುರಿತು ಸರ್ಕಾರ ಯಾವ ನಿಲುವು ತೆಗೆದುಕೊಳ್ಳಲಿದೆ ಎಂಬುದು ಕುತೂಹಲ ಮೂಡಿಸಿದೆ. ಸದ್ಯಕ್ಕೆ ಆಟೋ ದರ ಏರಿಕೆ ಪ್ರಸ್ತಾವನೆ ಹಂತದಲ್ಲಿದ್ದು, ಅಂತಿಮ ನಿರ್ಧಾರ ಸರ್ಕಾರದ ಕೈಯಲ್ಲಿದೆ.

ಕೆಎಟಿ ಅಧ್ಯಕ್ಷ ಹರ್ಷಗುಪ್ತ ವರ್ಗಾವಣೆಗೆ ವಕೀಲರ ಸಂಘ ಆಗ್ರಹ: ಸರ್ಕಾರಕ್ಕೆ ಪತ್ರ

ಬೆಂಗಳೂರು, ನ.7: ಕರ್ನಾಟಕ ಮೇಲ್ಮನವಿ ನ್ಯಾಯಮಂಡಳಿಯಲ್ಲಿ (ಕೆಎಟಿ) ನ್ಯಾಯಾಲಯದ ವಿಚಾರಣೆಗಳನ್ನು ನ್ಯಾಯಾಂಗ ರೀತಿಯಲ್ಲಿ ನಡೆಸುತ್ತಿಲ್ಲ ಎಂದು ಆಕ್ಷೇಪಿಸಿರುವ 'ಬೆಂಗಳೂರು ವಕೀಲರ ಸಂಘ' (ಎಎಬಿ) ಕೆಎಟಿ ಅಧ್ಯಕ್ಷ ಹರ್ಷ ಗುಪ್ತ ಅವರನ್ನು ತಕ್ಷಣವೇ ವರ್ಗಾವಣೆ ಮಾಡುವಂತೆ ಕೋರಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತು ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ ಅವರಿಗೆ ಪತ್ರ



ಬರೆದಿದೆ. ಸಂಘದ ಅಧ್ಯಕ್ಷ ವಿವೇಕ ರೆಡ್ಡಿ, ಪ್ರಧಾನ ಕಾರ್ಯದರ್ಶಿ ಎಚ್.ವಿ.ಪ್ರವೀಣ್‌ಗೌಡ, ಉಪಾಧ್ಯಕ್ಷ ಸಿ.ಎಸ್.ಗಿರೀಶ್ ಕುಮಾರ್ ಮತ್ತು ಖಜಾಂಚಿ ಶ್ವೇತಾ ರವಿಶಂಕರ್ ಅವರು ಸಹಿ ಮಾಡಿರುವ ಎರಡು ಪುಟಗಳ ಪತ್ರದಲ್ಲಿ ಹರ್ಷ ಗುಪ್ತ ಆಡಳಿತದ ಕಾರ್ಯವೈಖರಿ ವಿರುದ್ಧ 10ಕ್ಕೂ ಹೆಚ್ಚು ಅಂಶಗಳ ಆಕ್ಷೇಪಣೆ ವ್ಯಕ್ತಪಡಿಸಲಾಗಿದೆ.

ಹರ್ಷ ಗುಪ್ತ ನ್ಯಾಯ ನೀಡುವ ಬದಲು ಬಾಕಿ ಇರುವ ಪ್ರಕರಣಗಳನ್ನು ಕಡಿಮೆ ಮಾಡುವ ಏಕೈಕ ಉದ್ದೇಶದಿಂದ ಪ್ರಕರಣಗಳನ್ನು ವಜಾಗೊಳಿಸುತ್ತಿದ್ದಾರೆ. ಇದರಿಂದ, ವಕೀಲರು ಮತ್ತು ಕಕ್ಷಿಗಾರರು ತೀವ್ರ ತೊಂದರೆ ಅನುಭವಿಸುವಂತಾಗಿದೆ ಎಂದು ಪತ್ರದಲ್ಲಿ ದೂರಲಾಗಿದೆ.

ಕಾಂಗ್ರೆಸ್‌ನವರು ಹುಟ್ಟಿದ್ದು ದೇಶಕ್ಕಾಗಿ, ಬಿಜೆಪಿಯವರು ದ್ವೇಷಕ್ಕಾಗಿ: ಯುವ ಕಾಂಗ್ರೆಸ್‌ನಿಂದ ಪೋಸ್ಟರ್ ಅಭಿಯಾನ

ಬೆಂಗಳೂರು, ನ.7: ಬಿ.ವೈ. ವಿಜಯೇಂದ್ರ ಕಾಂಗ್ರೆಸ್ ನಾಯಕರ ವಿರುದ್ಧ ಇತ್ತೀಚೆಗೆ ಬಳಸಿದ್ದ ಏಕವಚನ ಮತ್ತು ಆಕ್ಷೇಪಾರ್ಹ ಪದಪ್ರಯೋಗ ವನ್ನು ಖಂಡಿಸಿ, ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರಮುಖ ಬಿಜೆಪಿ ನಾಯಕರ ನಿವಾಸ ಹಾಗೂ ಕಚೇರಿಗಳ ಬಳಿ ತೀವ್ರ ಪ್ರತಿಭಟನಾತ್ಮಕ ಪೋಸ್ಟರ್ ಅಭಿಯಾನ ನಡೆಸಿದ್ದಾರೆ.

ಶುಕ್ರವಾರ ತಡರಾತ್ರಿ ಮತ್ತು ಶನಿವಾರ ಮುಂಜಾನೆಯ ವೇಳೆ ಯುವ ಕಾಂಗ್ರೆಸ್ ಕಾರ್ಯಕರ್ತರು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಕಚೇರಿ, ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ನಿವಾಸ, ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ನಿವಾಸಗಳ ಮುಂಭಾಗ, ಸುತ್ತಮುತ್ತಲಿನ ಗೋಡೆಗಳ ಮೇಲೆ ಪ್ರಚೋದನಾತ್ಮಕ ವಾಕ್ಯಗಳಿರುವ ಸ್ಟಿಕ್ಕರ್‌ಗಳನ್ನು ಅಂಟಿಸಿದ್ದಾರೆ.

ಅಂಟಿಸಲಾಗಿರುವ ಪೋಸ್ಟರ್ ಮತ್ತು ಸ್ಟಿಕ್ಕರ್‌ಗಳಲ್ಲಿ ಕಾಂಗ್ರೆಸ್ ಮಕ್ಕಳು ಗಾಂಧೀಜಿಯ ಮಕ್ಕಳು, ವಿಜಯೇಂದ್ರನ ಮಕ್ಕಳು ಕಳ್ ನನ್‌ಮಕ್ಕಳು ಹಾಗೂ ಕಾಂಗ್ರೆಸ್‌ನವರು ದೇಶಕ್ಕಾಗಿ ಹುಟ್ಟಿದವರು, ಬಿಜೆಪಿಯವರು ದ್ವೇಷಕ್ಕಾಗಿ ಹುಟ್ಟಿದವರು ಎಂಬ ಬರಹಗಳು ಪ್ರಮುಖವಾಗಿ ಕಂಡುಬಂದಿವೆ.

ವಾರ್ಡ್ ಒನ್ ಕಾರ್ಯಕ್ರಮದಲ್ಲೇ ರಾದ್ಧಾಂತ: ಶಾಸಕ ಬೈರತಿ ಬಸವರಾಜು ವಿಧಾನ ಪರಿಷತ್ ಸದಸ್ಯ ನಾರಾಯಣಸ್ವಾಮಿ ನಡುವೆ ಮಾತಿನ ಚಕಮಕಿ

ಬೆಂಗಳೂರು:ನ,7: ನಗರದ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸುವ ಉದ್ದೇಶದಿಂದ ಹಮ್ಮಿಕೊಂಡಿರುವ ವಾರ್ಡ್ ಒನ್ ಕಾರ್ಯಕ್ರಮದಲ್ಲೇ ಕಾಂಗ್ರೆಸ್ ಮತ್ತು ಬಿಜೆಪಿ ಮುಖಂಡರ ನಡುವೆ ತೀವ್ರ ಮಾತಿನ ಚಕಮಕಿ ನಡೆದಿದೆ. ಕೆ.ಆರ್.ಪುರದ ಟಿನ್ ಫ್ಯಾಕ್ಟರಿ ಜಂಕ್ಷನ್‌ನಲ್ಲಿ ಸಚಿವ ಕೃಷ್ಣ ಬೈರೇಗೌಡ ಅವರ ಸಮ್ಮುಖದಲ್ಲೇ ಸ್ಥಳೀಯ ಶಾಸಕ ಬೈರತಿ ಬಸವರಾಜು ಹಾಗೂ ಕಾಂಗ್ರೆಸ್ ಎಂಎಲ್ಸಿ ನಾರಾಯಣಸ್ವಾಮಿ ನಡುವೆ ವಾಗ್ವಾದ ನಡೆದಿದ್ದು, ಪರಿಸ್ಥಿತಿ ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿತು. ಟಿನ್ ಫ್ಯಾಕ್ಟರಿ ಪ್ರದೇಶದ ರಸ್ತೆ ಗುಂಡಿಗಳು, ಕಸದ ಸಮಸ್ಯೆ ಹಾಗೂ ಸಂಚಾರ ದಟ್ಟಣೆ ಪರಿಶೀಲಿಸಲು ಸಚಿವ ಕೃಷ್ಣ ಬೈರೇಗೌಡ ಸ್ಥಳಕ್ಕೆ ಭೇಟಿ ನೀಡಿದ್ದರು. ಈ ವೇಳೆ ರಸ್ತೆ ಗುಂಡಿಗಳ ಬಗ್ಗೆ ಸ್ಥಳೀಯರು ಸಚಿವರ ಗಮನ ಸೆಳೆದರು. ಸಮಸ್ಯೆ ಕುರಿತು ಪ್ರಶ್ನೆ ಎತ್ತಿದ ಸಂದರ್ಭದಲ್ಲಿ ಸಚಿವರು ರಾಜಕೀಯ ಮಾಡದಂತೆ ಸೂಚಿಸಿದ್ದು, ಇದು ಸರ್ಕಾರದ ಕಾರ್ಯಕ್ರಮವಾಗಿದ್ದು, ಸಾರ್ವಜನಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದೇ ಮುಖ್ಯ. ಇದೇವೇಳೆ ಸ್ಥಳೀಯರ ಸಮಸ್ಯೆ ಹಾಗೂ ಕ್ಷೇತ್ರದ ಅಭಿವೃದ್ಧಿ ವಿಚಾರವಾಗಿ ಕಾಂಗ್ರೆಸ್ ಮತ್ತು ಬಿಜೆಪಿ ಮುಖಂಡರ ನಡುವೆ ವಾಗ್ವಾದ ಆರಂಭವಾಯಿತು. ಕಾಂಗ್ರೆಸ್ ಎಂಎಲ್‌ಸಿ ನಾರಾಯಣಸ್ವಾಮಿ ಮತ್ತು ಶಾಸಕ ಬೈರತಿ ಬಸವರಾಜು ಪರಸ್ಪರ ಆರೋಪ–ಪ್ರತ್ಯಾರೋಪದಲ್ಲಿ ತೊಡಗಿದರು. ಮಾತಿನ ಚಕಮಕಿ ತೀವ್ರಗೊಂಡು, ಎರಡೂ ಕಡೆಯ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು.





'ಶಾಸಕನಾಗಿ ನಾನಿರುವುದಾದರೂ ಏಕೆ': ಸ್ಥಳೀಯ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡುತ್ತಿಲ್ಲ. ರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚುವ ಕೆಲಸವನ್ನು ಸಮರ್ಪಕವಾಗಿ ನಿರ್ವಹಿಸುತ್ತಿಲ್ಲ. ಈ ಬಗ್ಗೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಸಮಸ್ಯೆ ಬಗೆಹರಿದಿಲ್ಲ ಎಂದು ಶಾಸಕ ಬೈರತಿ ಆಕ್ರೋಶ ವ್ಯಕ್ತಪಡಿಸಿದರು.

ಅಧಿಕಾರಿಗಳ ಕಾರ್ಯವೈಖರಿಯನ್ನು ಪ್ರಶ್ನಿಸಲು ಹೋದರೆ ಎಂಎಲ್‌ಸಿ ನಾರಾಯಣಸ್ವಾಮಿ ಅವರ ಅನುಯಾಯಿಗಳು ತಮ್ಮ ಮುಂದೆ ದರ್ಪ ತೋರುತ್ತಿದ್ದಾರೆ. ಹಾಗಾದರೆ ಸಾರ್ವಜನಿಕರ ಸಮಸ್ಯೆಗಳನ್ನು ಕೇಳಬಾರದಾ ಶಾಸಕನಾಗಿ ನಾನಿರುವುದಾದರೂ ಏಕೆ ಎಂದು ಪ್ರಶ್ನಿಸಿ ನಾರಾಯಣಸ್ವಾಮಿ ವಿರುದ್ಧ ಕಿಡಿಕಾರಿದರು.

'ನಿನ್ನನ್ನು ಎಂಎಲ್‌ಸಿ ಮಾಡಿದ್ದು ನಾನೋ' ಎಂದು ಪ್ರಶ್ನಿಸಿದ ಬೈರತಿ ಬಸವರಾಜು, ತಮ್ಮ ಹಿಂದಿನ ಸಹಕಾರವನ್ನು ಮರೆತು ಈಗ ತಮ್ಮೊಂದಿಗೆ ಕಿರಿಕ್ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಈ ಮಾತುಗಳಿಂದಾಗಿ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ಗಲಾಟೆ ತಿಳಿಗೊಳಿಸಿದ ಸಚಿವರು: ಮುಖಂಡರ ನಡುವಿನ ವಾಗ್ವಾದ ಹೆಚ್ಚಾಗುತ್ತಿದ್ದಂತೆ ಮಧ್ಯಪ್ರವೇಶಿಸಿದ ಸಚಿವ ಕೃಷ್ಣ ಬೈರೇಗೌಡ, ಪರಸ್ಪರ ಕಿತ್ತಾಡುವುದರಿಂದ ಜನರ ಸಮಸ್ಯೆಗಳಿಗೆ ಪರಿಹಾರ ಸಿಗುವುದಿಲ್ಲ ಎಂದು ಹೇಳಿದರು. 'ನಾನು ನಿಮ್ಮ ಸಮಸ್ಯೆಗಳನ್ನು ನೋಡಲು ಬಂದಿದ್ದೇನೆ. ನೀವೇ ಕಿತ್ತಾಡಿದರೆ ನಿಮ್ಮ ಸಮಸ್ಯೆಗಳನ್ನು ಯಾರು ಹೇಳುತ್ತಾರೆ' ಎಂದು ಪ್ರಶ್ನಿಸಿದ ಸಚಿವರು, ಟಿನ್ ಫ್ಯಾಕ್ಟರಿ ಪ್ರದೇಶದಲ್ಲಿ ಸಾಕಷ್ಟು ಸಮಸ್ಯೆಗಳಿದ್ದು, ಮೊದಲು ಅವುಗಳ ಪರಿಹಾರಕ್ಕೆ ಆದ್ಯತೆ ನೀಡಬೇಕು. ನಂತರ ರಾಜಕೀಯ ವಿಚಾರಗಳ ಬಗ್ಗೆ ಮಾತನಾಡಬಹುದು ಎಂದು ಮುಖಂಡರಿಗೆ ತಿಳಿಸಿದರು.

ಟಿನ್ ಫ್ಯಾಕ್ಟರಿಯಲ್ಲಿ ಸಮಸ್ಯೆಗಳ ಸರಮಾಲೆ: ಟಿನ್ ಫ್ಯಾಕ್ಟರಿ ಜಂಕ್ಷನ್‌ನಲ್ಲಿ ಪ್ರತಿದಿನ ಸಾವಿರಾರು ಜನರು ಸಂಚರಿಸುತ್ತಾರೆ. ಇಲ್ಲಿ ಸಂಚಾರ ದಟ್ಟಣೆ ದೊಡ್ಡ ಸಮಸ್ಯೆಯಾಗಿದ್ದು, ಮಳೆ ಬಂದಾಗ ರಸ್ತೆಗಳು ನೀರಿನಿಂದ ಜಲಾವೃತಗೊಳ್ಳುತ್ತವೆ. ರಸ್ತೆ ಗುಂಡಿಗಳು ಹಾಗೂ ಕಸದ ಸಮಸ್ಯೆಯೂ ಜನರನ್ನು ಕಾಡುತ್ತಿದೆ. ಈ ಮೂಲಸೌಕರ್ಯ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಉದ್ದೇಶದಿಂದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಎರಡನೇ ಹಂತದಲ್ಲಿ 51 ವಾರ್ಡ್‌ಗಳಲ್ಲಿ ಅಭಿಯಾನ: ನವೆಂಬರ್ 1ರಿಂದ ಆರಂಭಗೊಂಡಿರುವ ವಾರ್ಡ್ ಒನ್ ಕಾರ್ಯಕ್ರಮದಡಿ ಎಂಟು ಇಲಾಖೆಗಳ ಸಮನ್ವಯದೊಂದಿಗೆ ಮೊದಲ ಹಂತದಲ್ಲಿ 43 ವಾರ್ಡ್‌ಗಳಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು. ವಾರ್ಡ್‌ಗಳಲ್ಲಿನ ಸಮಸ್ಯೆಗಳನ್ನು ಸ್ಥಳದಲ್ಲೇ ಗುರುತಿಸಿ, ಸಾಧ್ಯವಾದಷ್ಟು ತ್ವರಿತವಾಗಿ ಪರಿಹರಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಕೆ.ಆರ್.ಪುರದ ಟಿನ್ ಫ್ಯಾಕ್ಟರಿ ಜಂಕ್ಷನ್‌ನಲ್ಲಿ ರಸ್ತೆ ಗುಂಡಿ, ಕಸ ವಿಲೇವಾರಿ ಮತ್ತು ಸಂಚಾರ ದಟ್ಟಣೆ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. ಎರಡನೇ ಹಂತದಲ್ಲಿ 51 ವಾರ್ಡ್‌ಗಳನ್ನು ಅಭಿಯಾನದ ವ್ಯಾಪ್ತಿಗೆ ತೆಗೆದುಕೊಳ್ಳಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು. ಜನರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕಾದ ಸರ್ಕಾರಿ ಕಾರ್ಯಕ್ರಮವೇ ರಾಜಕೀಯ ಮುಖಂಡರ ವಾಗ್ವಾದಕ್ಕೆ ವೇದಿಕೆಯಾಗಿದ್ದು, ಸ್ಥಳೀಯರ ಅಸಮಾಧಾನಕ್ಕೆ ಕಾರಣವಾಯಿತು.



ದೇವಿರಮ್ಮ ದೀಪೋತ್ಸವದ ಅಂಗವಾಗಿ ಶನಿವಾರ ಸಾವಿರಾರು ಭಕ್ತರು ಚಿಕ್ಕಮಗಳೂರಿನ ಮಲ್ಲೇನಹಳ್ಳಿ ದೇವಿರಮ್ಮ ಬೆಟ್ಟಕ್ಕೆ ಭೇಟಿನೀಡಿ ದೇವಿಯ ಆಶೀರ್ವಾದ ಪಡೆದರು.

ದಲಿತರಿಗೆ ಸಾಮಾಜಿಕ ನ್ಯಾಯ ದೊರಕಿಸಲು ಬದ್ಧ: ಈಶ್ವರ ಖಂಡ್ರೆ

ಬೀದರ್, ನ. 7: ತಾಲ್ಲೂಕಿನ ಅತಿವಾಳ ಸಮೀಪ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಹಾಗೂ ಸಾಂಸ್ಕೃತಿಕ ಕೇಂದ್ರಕ್ಕೆ ಜಮೀನು ಹಾಗೂ ಅನುದಾನ ಮಂಜೂರು ಮಾಡಿಸಿದಕ್ಕಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರನ್ನು ದಲಿತ ಸಮಾಜದ ವತಿಯಿಂದ ನಗರದ ಜಿಲ್ಲಾ ರಂಗ ಮಂದಿರದಲ್ಲಿ ಅಭಿನಂದನಾ ಸಮಾರಂಭದಲ್ಲಿ ದಲಿತ ಸಮಾಜದ ಮುಖಂಡರು ಸಚಿವ ಖಂಡ್ರೆ ಅವರಿಗೆ ಮೈಸೂರು ಪೇಟ ತೊಡಿಸಿ, ಸ್ಮರಣಿಕೆ ಕೊಟ್ಟು ಗೌರವಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಹಾಗೂ ಸಾಂಸ್ಕೃತಿಕ ಕೇಂದ್ರಕ್ಕೆ ಅತಿವಾಳ ಸಮೀಪ 10 ಎಕರೆ ಜಮೀನು ಹಾಗೂ ರೂ.15 ಕೋಟಿ ಅನುದಾನ ಮಂಜೂರು



ಬೀದರ ತಾಕಲ್ಲೂಕಿನ ಅತಿವಾಳ ಸಮೀಪ ಡಾ.ಅಂಬೇಡ್ಕರ್ ಅಧ್ಯಯನ ಹಾಗೂ ಸಾಂಸ್ಕೃತಿಕ ಕೇಂದ್ರಕ್ಕೆ ಜಮೀನು ಮತ್ತು ಅನುದಾನ ಮಂಜೂರು ಮಾಡಿದ್ದಕ್ಕಾಗಿ ಜಿಲ್ಲಾ ಉಸ್ತುವರಿ ಸಚಿವ ಈಶ್ವರ ಖಂಡ್ರೆಯನ್ನು ದಲಿತ ಸಮುದಾಯದ ವತಿಯಿಂದ ಜಿಲ್ಲಾ ರಂಗಮಂದಿರದಲ್ಲಿ ಸನ್ಮಾನಿಸಲಾಯಿತು.

ಮಾಡಿಸಲಾಗಿದೆ. ಇದರಿಂದ ದಲಿತ ಸಮಾಜದ ಬಹು ದಿನಗಳ ಬೇಡಿಕೆ ಈಡೇರಿದೆ. ಬರುವ ದಿನಗಳಲ್ಲಿ 50 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಕೇಂದ್ರ ನಿರ್ಮಾಣವಾಗಲಿದೆ ದಲಿತ ಸಮಾಜಕ್ಕೆ ಸಾಮಾಜಿಕ ನ್ಯಾಯ ದೊರಕಿಸಿಕೊಡಲು ಬದ್ಧನಾಗಿರುವೆ. ಸಮಾಜದವರ ಅಭಿವೃದ್ಧಿಗೆ ಸಾಧ್ಯವಾದ ಎಲ್ಲ ಪ್ರಯತ್ನಗಳನ್ನು ಮಾಡಲಾಗುವುದು ಎಂದು ತಿಳಿಸಿದರು.

ಅಭಿನಂದನಾ ಸಮಿತಿಯ ಪ್ರಮುಖರೂ ಆದ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ವಿನೋದಕುಮಾರ ಅಪ್ಪೆ, ಕೌಠಾ (ಬಿ) ಬಸವ ಯೋಗಾಶ್ರಮದ ಬೆಲ್ದಾಳ ಸಿದ್ಧರಾಮ ಶರಣರು, ಆಣದೂರಿನ ಭಂತೆ ಸಂಘರಖ್ಖಿತ, ರೇಕುಳಗಿ ಮೌಂಟ್ ಬುದ್ಧ ವಿಹಾರದ ಭಂತೆ ರೇವತ, ಶಾಸಕ ರಹೀಂ ಖಾನ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಬಕ್ಕಪ್ಪ ಕೋಟೆ, ಮಾರುತಿ ಬೌದ್ಧೆ, ಶಿವರಾಜ ಹಾಸನಕರ್, ಅನಿಲಕುಮಾರ ವಿಲಾಸ್ ಮೋರೆ, ಮಾರುತಿ ಭಂಗಾರೆ, ವಿಠಲದಾಸ್ ಪ್ಯಾಗೆ, ವಿಜಯಕುಮಾರ ಸೋನಾರೆ, ಸೂರ್ಯಕಾಂತ ಸಾಧುರೆ, ವಿನೋದ ಬಂದಗೆ, ಪ್ರಶಾಂತ ದೊಡ್ಡಿ, ವಿನಯ್ ಕುಮಾರ್ ಮಾಳಗೆ, ರಾಹುಲ್ ಭಂಗೂರೆ, ವಿಶಾಲ್ ಅಪ್ಪೆ, ದಿಗಂಬರ್ ಪುಂಗೆ ಉಪಸ್ಥಿತರಿದ್ದರು.

ಗ್ಯಾರಂಟಿ ತಲುಪಿದ ಬಗ್ಗೆ ವಾರದಲ್ಲಿ ವರದಿ ಸಲ್ಲಿಸಿ: ಪರಮೇಶ್ವರ ನಾಯಕ್

ಬೀದರ್, ನ. 7: ರಾಜ್ಯ ಸರ್ಕಾರದ ಮಹತ್ವಕಾಂ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿದ ಬಗ್ಗೆ ಒಂದು ವಾರದೊಳಗೆ ವರದಿ ನೀಡು ವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ ನಾಯಕ್ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣ ದಲ್ಲಿ ಬುಧವಾರ ಆಯೋಜಿಸಿದ್ದ ಜಿಲ್ಲಾ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಜನೆ ಅನುಷ್ಠಾನದಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಅಧಿಕಾರಿಗಳು ತಕ್ಷಣ ಕಾರ್ಯಪ್ರವೃತ್ತ ರಾಗಿ ಕಾರ್ಯನಿರ್ವ ಹಿಸಬೇಕು ಎಂದು ತಾಕೀತು ಮಾಡಿದರು.

ಜಿಲ್ಲೆಯಲ್ಲಿ ಒಟ್ಟು ಗೃಹಲಕ್ಷ್ಮಿ ಯೋಜನೆಯಡಿ ಯಲ್ಲಿ ನೋಂದಣಿ ಯಾದ 3,64,287 ಫಲಾನುಭವಿಗಳ ಪೈಕಿ ಪರಿಷ್ಕರಣೆ ಗೊಂಡ ನಂತರ ಉಳಿದ 3,40,756 ಫಲಾನುಭವಿಗಳ ಖಾತೆಗೆ ಜುಲೈವರೆಗೆ ಒಟ್ಟು 2,111 ಕೋಟಿ73 ಲಕ್ಷ ರೂ. ಜಮೆ ಮಾಡಲಾಗಿದೆ. ಉಳಿದ ಕಂತಿನ ಹಣವನ್ನು ಸಹ ಸಂಪನ್ಮೂಲಗಳನ್ನು ಕ್ರೂಢೀಕರಿಸಿ ಹಂತಹಂತವಾಗಿ ಅವರ ಖಾತೆಗೆ ಜಮೆ ಮಾಡಲಾಗುವುದು ಎಂದರು.



ಬೀದರ್‌ನಲ್ಲಿ ಹಮ್ಮಿಕೊಂಡಿದ್ದ ಪ್ರಗತಿ ಪರಿಶೀಲನೆ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಪಿ.ಟಿ. ಪರಮೇಶ್ವರ ನಾಯಕ್ ಮಾತನಾಡಿದರು. ಅಮೃತರಾವ ಚಿಮಕೋಡೆ, ಜಿಪಂ ಸಿಇಒ ಗಿತ್ತೆ ಮಾಧವ್ ಇತರರಿದ್ದರು.

ಜಿಲ್ಲೆಯಲ್ಲಿ ಒಟು 18 ಲಕ್ಷದಷ್ಟು ಜನಸಂಖ್ಯೆ ಇದ್ದು ಅದರಲ್ಲಿ ಗ್ಯಾರಂಟಿ ಯೋಜನೆಯಡಿ ಸುಮಾರು 13 ಲಕ್ಷದಷ್ಟು ಫಲಾನುಭವಿಗಳಿದ್ದಾರೆ. ಕಳೆದ 6 ತಿಂಗಳಲ್ಲಿ ಮರಣ ಹೊಂದಿದ 7 ಸಾವಿರದಷ್ಟು ಜನರನ್ನು ಗುರುತಿಸಿ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ. ವೈದ್ಯಕೀಯ ಹಿನ್ನೆಲೆ ಹೊಂದಿದ ಸುಮಾರು 100 ಜನರನ್ನು ಗುರುತಿಸಿ ಪಡಿತರ ಚೀಟಿಗಳನ್ನು ನೀಡಲಾಗಿದೆ ಎಂದು ಹೇಳಿದರು.

ಗೃಹಜ್ಯೋತಿ ಯೋಜನೆಯಡಿ ನಿಜವಾದ ಫಲಾನುಭವಿಗಳಿಗೆ ಯೋಜನೆ ಸಿಗುವಂತಾಗಬೇಕು. ತೆರಿಗೆ ಪಾವತಿಸುವ ಹಾಗೂ ಹೊರಜಿಲ್ಲೆಯಿಂದ ನೆಲೆಸಿದವರನ್ನು ಗುರುತಿಸಿ ಈ ಯೋಜನೆಯಿಂದ ಹೊರಗಿಡುವಂತಾಗಬೇಕು. ನಿಖರವಾಗಿ ಸಮೀಕ್ಷೆ ನಡೆಸಿ ಈ ಯೋಜನೆಯಲ್ಲಿ ವಂಚಿತ ರಾದವರನ್ನು ಗುರುತಿಸಿ ಅಂತವರಿಗೆ ಯೋಜನೆಗಳ ಲಾಭ ಸಿಗುವಂತಾಗಬೇಕು. ಶೀಘ್ರವಾಗಿ ಪರಿಷ್ಕರಣೆ ಕಾರ್ಯ ಪೂರ್ಣಗೊಳಿಸಬೇಕು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ಇಲ್ಲಯವರೆಗೆ 19.59 ಲಕ್ಷದಷ್ಟು ಮಹಿಳೆಯರು ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಪ್ರಯಾಣಿಸಿ ದ್ದಾರೆ. ಬಸ್‌ನಿಲ್ದಾಣಗಳಲ್ಲಿ ಮಹಿಳೆಯರಿಗಾಗಿ ವಿಶೇಷ ಹಾಲು ಉಣಿಸುವ ಕೋಣೆ, ಕುಡಿಯುವ ಶುದ್ಧ ನೀರು, ಶೌಚಗೃಹ ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಎಚ್ಚರಿಸಿದರು.

ಕಾಲೇಜು ವಿದ್ಯಾರ್ಥಿಗಳು ಯುವನಿಧಿ ಯೋಜನೆಗೆ ಹೆಚ್ಚು ಆಸಕ್ತಿ ನೀಡದಿರುವುದು ಕಂಡುಬಂದಿದೆ. ಅಧಿಕಾರಿಗಳು ಖಾಸಗಿ ಹಾಗೂ ಸರ್ಕಾರಿ ಕಾಲೇಜುಗಳಿಗೆ ಭೇಟಿ ನೀಡಿ ಈ ಯೋಜನೆ ಸಮರ್ಪಕವಾಗಿ ಅನು ಷ್ಠಾನಗೊಳ್ಳುವಂತೆ ಯುವಕರಲ್ಲಿ ಪ್ರೇರೆಪಿಸಬೇಕು. ಈ ಯೋಜನೆಗಳ ಕರಪತ್ರ ನೀಡಿ ಮಾಹಿತಿ ನೀಡಿ ಯೋಜನೆಗಳ ಲಾಭ ಪಡೆದು ಕೊಳ್ಳುವಂತಾಗಬೇಕು ಎಂದು ಹೇಳಿದರು.

> **ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಸದಸ್ಯರ ನಿಯೋಗದೊಂದಿಗೆ ಬಸ್ ನಿಲ್ದಾಣಗಳ ಸ್ವಚ್ಛತೆ ಹಾಗೂ ಮೂಲಸೌಕರ್ಯಗಳ ಕುರಿತು ಪರಿಶೀಲಿಸಿ ವರದಿ ನೀಡಬೇಕು.**
> **–ಟಿ.ಪರಮೇಶ್ವರ ನಾಯಕ್, ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ.**

ಭೋವಿ ನಿಗಮದ 'ಭೂ ಒಡೆತನ' ಯೋಜನೆಯಲ್ಲಿ ಭ್ರಷ್ಟಾಚಾರ

ಫಲಾನುಭವಿಗಳಿಂದ ಭೋವಿ ಅಭಿವೃದ್ಧಿ ನಿಗಮದ ಅಧಿಕಾರಿಗಳು ಹಾಗೂ ಮಧ್ಯವರ್ತಿಗಳಿಂದ ಲಂಚ ವಸೂಲಿ ಆರೋಪ



ರಾಯಚೂರು, ನ.7: ಜಿಲ್ಲೆಯ ಭೋವಿ ಅಭಿವೃದ್ಧಿ ನಿಗಮದ 'ಭೂ ಒಡೆತನ ಯೋಜನೆ'ಯಲ್ಲಿ ಭಾರಿ ಪ್ರಮಾಣದ ಭ್ರಷ್ಟಾಚಾರ ಮತ್ತು ವಂಚನೆ ನಡೆದಿರುವ ಗಂಭೀರ ಆರೋಪ ಕೇಳಿಬಂದಿದೆ. ನಿಗಮದ ಅಧಿಕಾರಿಗಳು ಹಾಗೂ ಮಧ್ಯವರ್ತಿಗಳು (ಬ್ರೋಕರ್‌ಗಳು) ಕೈಜೋಡಿಸಿ ಯೋಜನೆಗೆ ಆಯ್ಕೆಯಾದ ಪ್ರತಿ ಫಲಾನುಭವಿಯಿಂದ ಸುಮಾರು 80, 000 ರೂಪಾಯಿ ಲಂಚ ವಸೂಲಿ ಮಾಡಿದ್ದಾರೆ ಎನ್ನಲಾಗಿದೆ.

ಸರ್ಕಾರದ ಯೋಜನೆಯಡಿ ಜಮೀನು ಪಡೆಯಲು ಆಸಕ್ತಿ ಹೊಂದಿದ್ದ ಬಡ ಫಲಾನುಭವಿಗಳಿಂದ ಹಣ ಹಾಗೂ ಪ್ರಮುಖ ದಾಖಲೆಗಳನ್ನು ಪಡೆದುಕೊಂಡಿರುವ ಬ್ರೋಕರ್‌ಗಳು, ಇದೀಗ ಅವರಿಗೆ ವಂಚಿಸಿ ಸಂಕಷ್ಟಕ್ಕೆ ತಳ್ಳಿದ್ದಾರೆ ಎಂದು ಸಂತ್ರಸ್ತರು ಆಕ್ರೋಶ ಹೊರಹಾಕಿದ್ದಾರೆ.

ಫಲಾನುಭವಿಗಳಿಗೆ ಅತ್ಯಂತ ಫಲವತ್ತಾದ ಹಾಗೂ ಕೃಷಿಗೆ ಯೋಗ್ಯವಾದ ಭೂಮಿಯನ್ನು ಗುರುತಿಸಿ, ಎಕರೆಗೆ 15 ಲಕ್ಷ ರೂಪಾಯಿ ಮೌಲ್ಯದ ಜಮೀನು ನೀಡಲಾಗುವುದು ಎಂದು ಅಧಿಕಾರಿಗಳು ಹಾಗೂ ಬ್ರೋಕರ್‌ಗಳು ನಂಬಿಸಿದ್ದರು. ಆದರೆ, ವಾಸ್ತವದಲ್ಲಿ ಸಂಪೂರ್ಣ ಕಸ, ಗಿಡ–ಗಂಟೆಗಳಿಂದ ಕೂಡಿದ, ಉಳುಮೆ ಮಾಡಲು ಯೋಗ್ಯವಲ್ಲದ ಕೇವಲ 4 ರಿಂದ 5 ಲಕ್ಷ ರೂಪಾಯಿ ಮೌಲ್ಯದ ಕಳಪೆ ಭೂಮಿಯನ್ನು ಮಂಜೂರು ಮಾಡಿ ವಂಚಿಸಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಸರ್ಕಾರದಿಂದ ಸೂಕ್ತ ಭೂಮಿ ಸಿಗದೇ, ತ್ರತ್ತ ಕಷ್ಟಪಟ್ಟು ತಂದಿದ್ದ ಹಣ ಹಾಗೂ ದಾಖಲೆಗಳನ್ನೂ ಕಳೆದುಕೊಂಡು ಭೋವಿ ಸಮುದಾಯದ ಫಲಾನುಭವಿಗಳು ಇದೀಗ ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ.

ಹಳ್ಳಿ ಗುಗ್ಗು ಹೇಳಿಕೆ ಅಪಮಾನಕರ ಪ್ರಿಯಾಂಕ್ ಕ್ಷಮೆಗೆ ಆಗ್ರಹಿಸಿ ಹೋರಾಟ



ರಾಯಚೂರು, ನ. 7: ಹಳ್ಳಿ ಜನರನ್ನು ಅವಮಾನಿಸುವ ರೀತಿಯಲ್ಲಿ ಹಳ್ಳಿ ಗುಗ್ಗು ಎಂದು ಮಾತನಾಡಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೇಷರತ್ ಕ್ಷಮೆಯಾಚಿಸಬೇಕು ಹಾಗೂ ಏರಿಕೆಯಾಗಿರುವ ಬಸ್ ಪ್ರಯಾಣ, ಹಾಲು ಮತ್ತು ಮೊಸರು ದರಗಳನ್ನು ಕಡಿಮೆ ಮಾಡಬೇಕು ಎಂದು ಆಗ್ರಹಿಸಿ ಜೆಡಿಎಸ್ ಜಿಲ್ಲಾ ಘಟಕದ ಕಾರ್ಯಕರ್ತರು ಶುಕ್ರವಾರ ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಹೋರಾಟ ನಡೆಸಿದರು.

ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಎನ್. ಶಿವಶಂಕರ ವಕೀಲ ಮಾತನಾಡಿ, ರಾಜ್ಯದ ಬಹುಪಾಲು ಜನರು ಗ್ರಾಮೀಣ ಪ್ರದೇಶದಲ್ಲಿ ವಾಸಿಸುತ್ತಿದ್ದಾರೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರನ್ನು ಮಾತನಾಡುವ ಸಂದರ್ಭದಲ್ಲಿ ಪ್ರಿಯಾಂಕ್ ಖರ್ಗೆ ಅವರು 'ಳ್ಳಿ ಗುಗ್ಗು', 'ವಿಲೇಜ್ ಈಡಿಯಟ್ಸ್' ಎಂಬ ಪದಗಳನ್ನು ಬಳಸಿರುವುದು ಇಡೀ ಗ್ರಾಮೀಣ ಜನರಿಗೆ ಮಾಡಿದ ಅವಮಾನವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಾವು ಹಳ್ಳಿ ಗುಗ್ಗುಗಳು ಏನಿವಾಗ' ಎಂಬ ಸಂದೇಶದೊಂದಿಗೆ ಪ್ರತಿಭಟನೆ ನಡೆಸುತ್ತಿದ್ದು, ಹಳ್ಳಿಯಿಂದ ಬಂದಿ ರುವುದಕ್ಕೆ ನಮಗೆ ಹೆಮ್ಮೆ ಇದೆ. ಗ್ರಾಮೀಣ ಜನರ ಭಾವನೆಗಳಿಗೆ ಧಕ್ಕೆ ತಂದಿರುವ ಗೃಹ ಸಚಿವರು ಕೂಡಲೇ ಬೇಷರತ್ ಕ್ಷಮೆಯಾಚಿಸ ಬೇಕು ಎಂದು ಒತ್ತಾಯಿಸಿದರು.

ಸರ್ಕಾರ ಬಸ್ ಪ್ರಯಾಣ ದರ, ಹಾಲು ಮತ್ತು ಮೊಸರಿನ ದರ ಹೆಚ್ಚಿಸಿ ಜನಸಾಮಾನ್ಯರ ಬದುಕನ್ನು ದುಸ್ತರಗೊಳಿಸಿದೆ. ಬೆಳೆ ಪರಿಹಾರ, ರೈತರ ಸಮಸ್ಯೆಗಳು ಹಾಗೂ ಕಬ್ಬು ಬೆಳೆಗಾರರ ಹೋರಾಟದ ಕುರಿತು ಸರ್ಕಾರ ತಕ್ಷಣ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು. ರೈತರ ಸಮಸ್ಯೆಗಳನ್ನು ಪರಿಹರಿಸುವ ಬದಲು ಸಚಿವರು ವಿವಾದಾತ್ಮಕ ಹೇಳಿಕೆ ನೀಡುವುದರಲ್ಲಿ ತೊಡಗಿರುವುದು ಸರಿಯಲ್ಲ ಎಂದು ಆಕ್ರೋಶ ಹೊರಹಾಕಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಗ್ರಾಮೀಣ ಹಿನ್ನೆಲೆಯಿಂದ ಬಂದವರಾಗಿದ್ದು, ನೀರಾವರಿ ಯೋಜನೆಗಳು ಹಾಗೂ ರೈತರ ಪರ ಹಲವು ಕ್ರಮಗಳಿಗೆ ಕೊಡುಗೆ ನೀಡಿದ್ದಾರೆ. ಅಂತಹ ನಾಯಕರನ್ನು ಅವಹೇಳನ ಮಾಡುವ ಮೂಲಕ ಗ್ರಾಮೀಣ ಜನರ ಭಾವನೆಗಳಿಗೆ ಧಕ್ಕೆ ಉಂಟುಮಾಡಲಾಗಿದೆ ಎಂದರು.

ಪ್ರತಿಭಟನೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ, ಗ್ರಾಮಾಂತರ ಅಧ್ಯಕ್ಷ ನಾಗರಾಜ ಗೌಡ, ಜಿಲ್ಲಾ ಪರಿಶಿಷ್ಟ ಘಟಕದ ಅಧ್ಯಕ್ಷ ಹಂಪಯ್ಯ ನಾಯಕ, ನರಸಪ್ಪ ಆಶಾಪುರ, ಪಿ. ರಾಜು, ನರಸಿಂಹಲು, ಆಂಜನೇಯ ಯಾದವ್, ಸೀಮಾ ನದಾಫ್, ಶಾಲಂ, ಅಮ್ಮದ್ ಹುಸೇನ್, ಸಾಬೀರ್, ಪರ್ವೇಜ್, ಅಲಂಬಾಬು, ಆದಿರಾಜ್, ಪಿ. ನರಸಿಂಹಲು, ವೆಂಕಟಸ್ವಾಮಿ, ಅಮಿತ್ ಸುಂಕಾರಿ ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

ತಜ್ಞರ ಸಲಹೆ ಪರಿಶೀಲಿಸಿದ ಸಚಿವ ಪ್ರಿಯಾಂಕ್ ಖರ್ಗೆ

ಕಲಬುರಗಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಕ್ರಮ

ಕಲಬುರಗಿ, ನ.7: ಕಲಬುರಗಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿರುವುದಕ್ಕೆ ಕಾರಣ ಗಳನ್ನು ಪತ್ತೆಹಚ್ಚಿ, ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಗೃಹ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರು ತಜ್ಞರ ತಂಡಕ್ಕೆ ಸೂಚನೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಶಿಕ್ಷಣ ಕ್ಷೇತ್ರದ ಪರಿಣಿತರು ನಡೆಸಿದ ಪ್ರಾಥಮಿಕ ಪರಿಶೀಲನೆಯ ಆಧಾರದ ಮೇಲೆ ಸಿದ್ಧಪಡಿಸಿರುವ ಸಲಹೆಗಳನ್ನು ಸಚಿವರು ಪರಿಶೀಲಿಸಿದರು. ಜಿಲ್ಲೆಯ ಶಾಲೆಗಳಲ್ಲಿ ಕಲಿಕೆಯ ಗುಣಮಟ್ಟ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಶಿಕ್ಷಕರ ಬೋಧನಾ ವಿಧಾನ ಹಾಗೂ ಪರೀಕ್ಷಾ ಸಿದ್ಧತೆಯಲ್ಲಿರುವ ಕೊರತೆಗಳನ್ನು ಗುರುತಿಸಿ, ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಅಗತ್ಯವನ್ನು ಅವರು ಒತ್ತಿಹೇಳಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಕೇವಲ ಪರೀಕ್ಷೆಗೆ ಮುನ್ನ ಕೈಗೊಳ್ಳುವ ಕ್ರಮಗಳಿಗೆ ಸೀಮಿತವಾಗ ಬಾರದು. ಶೈಕ್ಷಣಿಕ ವರ್ಷದ ಆರಂಭ ದಿಂದಲೇ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯವನ್ನು ನಿರಂತರವಾಗಿ ಮೌಲ್ಯಮಾಪನ ಮಾಡಬೇಕು. ವಿಷಯವಾರು ವಿದ್ಯಾರ್ಥಿಗಳ ಪ್ರಗತಿಯನ್ನು ಗಮನಿಸಿ, ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳಿಗೆ ವಿಶೇಷ ತರಗತಿಗಳು ಹಾಗೂ ವೈಯಕ್ತಿಕ ಮಾರ್ಗದರ್ಶನ ಒದಗಿಸಬೇಕು ಎಂಬ ಅಭಿಪ್ರಾಯ ಸಭೆಯಲ್ಲಿ



ವ್ಯಕ್ತವಾಯಿತು. ಕಳೆದ ವರ್ಷ ಕಲಬುರಗಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದ ವಿದ್ಯಾರ್ಥಿಗಳಿಗಾಗಿ ನಿರೀಕ್ಷಿತ ಪ್ರಶ್ನೆಗಳ ಬ್ಯಾಂಕ್ ಸಿದ್ಧಪಡಿಸಿ ವಿತರಿಸಲಾಗಿತ್ತು. ಈ ಪ್ರಯತ್ನದಿಂದ ವಿದ್ಯಾರ್ಥಿಗಳಿಗೆ ಯಾವ ರೀತಿ ಅನುಕೂಲವಾಗಿದೆ, ಪ್ರಶ್ನೆಗಳ ಬ್ಯಾಂಕ್ ಬಳಕೆಯಿಂದ ಅವರ ಪರೀಕ್ಷಾ ಸಿದ್ಧತೆ ಮತ್ತು ಸಾಧನೆಯಲ್ಲಿ ಎಷ್ಟರಮಟ್ಟಿಗೆ ಸುಧಾರಣೆ ಕಂಡು ಬಂದಿದೆ ಎಂಬ ಬಗ್ಗೆ ಸಮಗ್ರ ಮಾಹಿತಿ ಸಂಗ್ರಹಿಸುವಂತೆ ಸಚಿವರು ಸೂಚಿಸಿದರು. ಈ ಕ್ರಮದ ಪರಿಣಾಮಕಾರಿ ತ್ವವನ್ನು ಪರಿಶೀಲಿಸಿ, ಮುಂದಿನ ವರ್ಷಗಳಲ್ಲಿ ಇಂತಹ ಶೈಕ್ಷಣಿಕ ನೆರವನ್ನು ಇನ್ನಷ್ಟು ಪರಿಣಾಮಕಾರಿ ಯಾಗಿ ರೂಪಿಸುವಂತೆ ಅವರು ಸಲಹೆ ನೀಡಿದರು.

ಶಿಕ್ಷಕರಿಗೆ ಅಗತ್ಯ ತರಬೇತಿ, ಶಾಲೆಗಳಲ್ಲಿ ನಿಯಮಿತ ಶೈಕ್ಷಣಿಕ ಮೇಲ್ವಿಚಾರಣೆ, ಮಾದರಿ ಪರೀಕ್ಷೆ ಗಳು, ಪೋಷಕರ ಸಹಭಾಗಿತ್ವ ಹಾಗೂ ವಿದ್ಯಾರ್ಥಿಗಳಲ್ಲಿ ಪರೀಕ್ಷೆಯ ಬಗ್ಗೆ ಆತ್ಮವಿಶ್ವಾಸ ಮೂಡಿಸುವಂತಹ ಕ್ರಮಗಳಿಗೂ ಆದ್ಯತೆ ನೀಡಬೇಕೆಂದು ಸಚಿವರು ಸೂಚಿಸಿದರು. ತಜ್ಞರು ನೀಡಿರುವ ಸಲಹೆಗಳನ್ನು ಸಮಗ್ರ ವಾಗಿ ಪರಿಶೀಲಿಸಿ, ಕಲಬುರಗಿ ಜಿಲ್ಲೆಯ ಶಾಲೆಗಳ ವಾಸ್ತವ ಪರಿಸ್ಥಿತಿಗೆ ಅನುಗುಣವಾಗಿ ಕಾರ್ಯ ಗತ ಗೊಳಿಸಬಹುದಾದ ಕ್ರಮಗಳನ್ನು ಒಳಗೊಂಡ ಸ್ಪಷ್ಟ ಕಾರ್ಯಯೋಜನೆ ರೂಪಿಸಬೇಕು. ಈ ಕಾರ್ಯ ಯೋಜನೆಯ ಅನುಷ್ಠಾನ ಮತ್ತು ಫಲಿತಾಂಶದ ಪ್ರಗತಿಯನ್ನು ನಿರಂತರ ವಾಗಿ ಪರಿಶೀಲಿಸುವ ವ್ಯವಸ್ಥೆಯನ್ನೂ ರೂಪಿಸಬೇಕು ಎಂದು ಪ್ರಿಯಾಂಕ್ ಖರ್ಗೆ ಅವರು ನಿರ್ದೇಶನ ನೀಡಿದರು.

ಕಲಬುರಗಿ ಜಿಲ್ಲೆಯ ವಿದ್ಯಾರ್ಥಿ ಗಳಿಗೆ ಗುಣಮಟ್ಟದ ಶಿಕ್ಷಣ ಹಾಗೂ ಉತ್ತಮ ಶೈಕ್ಷಣಿಕ ಅವಕಾಶ ಗಳನ್ನು ಒದಗಿಸುವ ಮೂಲಕ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಗಮನಾರ್ಹ ಸುಧಾರಣೆ ತರುವುದು ಈ ಪ್ರಯತ್ನದ ಉದ್ದೇಶವಾಗಿದೆ. ಸಭೆಯಲ್ಲಿ ಸುಭಾಷ್ ವಿ ರಾಠೋಡ್ ಇತರರು ಭಾಗ ವಹಿಸಿದ್ದರು.

ಬಳ್ಳಾರಿಗೆ ಇಂದು ಸಚಿವ ಖಾದರ್ ಭೇಟಿ

ಬಳ್ಳಾರಿ,ನ.07.ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಸಚಿವರಾದ ಯು.ಟಿ. ಖಾದರ್ ಫರೀದ್ ಅವರು ನವೆಂಬರ್ 8 ರಂದು ಬಳ್ಳಾರಿ ನಗರಕ್ಕೆ ಭೇಟಿ ನೀಡಲಿದ್ದಾರೆ.



ಕರ್ನಾಟಕ ರಾಜ್ಯ ನದಾಫ್/ ಪಿಂಜಾರ ಸಂಘದ 34ನೇ ವರ್ಷದ ರಾಜ್ಯ ಮಟ್ಟದ ಸಂಸ್ಥಾಪನಾ ದಿನಾ ಚರಣೆ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸಚಿವರು ಪಾಲ್ಗೊಳ್ಳಲಿದ್ದಾರೆ.

ಸಮಾರಂಭವು ಮಧ್ಯಾಹ್ನ 12 ಗಂಟೆಗೆ ಬಳ್ಳಾರಿಯ ಕೌಲ್ ಬಜಾರ್ ನ ನಲ್ಲಚೆರುವು ಬಳಿಯಿರುವ ಜಿಲ್ಲಾ ಕ್ರೀಡಾಂಗಣ ರಸ್ತೆಯ ವಾಲ್ಮೀಕಿ ಭವನದಲ್ಲಿ ಜರುಗಲಿದೆ. ನಂತರ ಮಧ್ಯಾಹ್ನ 3 ಗಂಟೆಗೆ ಬಳ್ಳಾರಿಯಿಂದ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಜನಸಾಮಾನ್ಯರ ಕುಂದುಕೊರತೆಗಳಿಗೆ ಅಧಿಕಾರಿಗಳು ತಾಯಿ ಹೃದಯದಿಂದ ಸ್ಪಂದಿಸಿ: ಶಾಸಕ ಜೆ.ಎನ್.ಗಣೇಶ್ ಕರೆ



ಬಳ್ಳಾರಿ,ನ.07.ಅಧಿಕಾರಿಗಳು ಕಚೇರಿಗಳಿಗೆ ಬರುವ ಜನರೊಂದಿಗೆ ತಾಳ್ಮೆಯಿಂದ ವರ್ತಿಸಿ, ತಾಯಿ ಹೃದಯದಿಂದ ಸ್ಪಂದಿಸಬೇಕು ಎಂದು ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳಿ ನಿಯಮಿತ (ಕಾವೇರಿ ಹ್ಯಾಂಡ್‌ಲೂಮ್ಸ್) ಅಧ್ಯಕ್ಷರೂ ಆದ ಕಂಪ್ಲಿ ಶಾಸಕ ಜೆ.ಎನ್ ಗಣೇಶ್ ಅವರು ಹೇಳಿದರು.

ರಾಜ್ಯ ಸರ್ಕಾರದ ನಿರ್ದೇಶನದಂತೆ, ?ಬಾಗಿಲಿಗೆ ಬಂತು ಸರ್ಕಾರ–ಸೇವೆಗೆ ಇರಲಿ ಸಹಕಾರ? ಎಂಬ ಆಶಯದಡಿ ಜಿಲ್ಲಾಡಳಿತ, ತಾಲೂಕು ಆಡಳಿತ ಕುರುಗೋಡು ಇವರ ಸಂಯುಕ್ತಾಶ್ರಯದಲ್ಲಿ ಸೋಮಸಮುದ್ರ ಗ್ರಾಮದಲ್ಲಿ ಶನಿವಾರ ಆಯೋಜಿಸಿದ್ದ ಪ್ರಜಾಸೇವಾ ಆಂದೋಲನ ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲೇ ಆಲಿಸಿ ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಹಮ್ಮಿಕೊಂಡಿರುವ ?ಪ್ರಜಾಸೇವೆ? ಜನಸ್ಪಂದನ ಕಾರ್ಯಕ್ರಮವು ಶ್ಲಾಘನೀಯವಾಗಿದೆ ಎಂದರು.

ಕಚೇರಿಗಳು, ಆಸ್ಪತ್ರೆಗಳು ಮತ್ತು ಗ್ರಾಮ ಪಂಚಾಯಿತಿಗಳಿಗೆ ಬರುವ ಸಾರ್ವಜನಿಕರನ್ನು ಗೌರವದಿಂದ ಬರಮಾಡಿಕೊಂಡು ಅವರ ಸಮಸ್ಯೆಗಳನ್ನು ತಕ್ಷಣವೇ ಪರಿಹರಿಸಬೇಕು. ಸಣ್ಣಪುಟ್ಟ ಕೆಲಸಗಳಿಗಾಗಿ ತಿಂಗಳುಗಟ್ಟಲೆ ಅಲೆದಾಡಿಸಬಾರದು. ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯರು ರೋಗಿಗಳಿಗೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಬೇಕು ಎಂದು ಮನವಿ ಮಾಡಿದರು.

ತಾಲೂಕು ಪಂಚಾಯಿತಿ ಅಧಿಕಾರಿಗಳು ಗ್ರಾಮಗಳಲ್ಲಿ ರಸ್ತೆ, ಚರಂಡಿ ಸೇರಿದಂತೆ ದೊಡ್ಡ ಯೋಜನೆಗಳ ಬಗ್ಗೆ ಚಿಂತಿಸದೆ, ಮೊದಲು ಚರಂಡಿ ಬ್ಲಾಕ್ ಆಗಿ ನೀರು ರಸ್ತೆಗೆ ಬರುವುದನ್ನು ತಡೆಗಟ್ಟಬೇಕು. ಡೆಂಗ್ಯೂ, ಮಲೇರಿಯಾ ದಂತಹ ಸಾಂಕ್ರಾಮಿಕ ರೋಗಗಳು ಹರಡದಂತೆ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು ಹಾಗೂ ಬೀದಿ ದೀಪಗಳ ದುರಸ್ತಿ ಮುಂತಾದ ಮೂಲಭೂತ ಕೆಲಸಗಳನ್ನು ತಕ್ಷಣವೇ ಕೈಗೆತ್ತಿಕೊಳ್ಳಬೇಕು ಎಂದು ತಾಕೀತು ಮಾಡಿದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ ಪ್ರಕರಣಗಳು ಕಂಡುಬಂದಲ್ಲಿ ಅಧಿಕಾರಿಗಳು ಯಾವುದೇ ಪ್ರಭಾವಕ್ಕೆ ಒಳಗಾಗದೆ ನಿರ್ದಾಕ್ಷಿಣ್ಯ ಕ್ರಮ ಜರುಗಿಸಬೇಕು. ಕೃಷಿ ಕೆಲಸಗಳಿಗೆ ಮಕ್ಕಳನ್ನು ತೊಡಗಿಸದೆ, ಶಿಕ್ಷಣಕ್ಕೆ ಆದ್ಯತೆ ನೀಡುವಂತೆ ಪೋಷಕರಲ್ಲಿ ಜಾಗೃತಿ ಮೂಡಿಸಲು ತಿಳಿಸಿದರು.

ಕುರುಗೋಡು ಭಾಗದ ಜನರಿಗೆ ಶಾಶ್ವತ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು 100 ಎಕರೆ ಜಾಗದಲ್ಲಿ ಮಲ್ಲಪ್ಪ ಕೆರೆ ಅಭಿವೃದ್ಧಿ ಕಾಮಗಾರಿ ಹಾಗೂ ಕೆಎಂಇಆರ್‌ಸಿ ಅಡಿಯಲ್ಲಿ ಸುಮಾರು 70 ರಿಂದ 80 ಕೋಟಿ ವೆಚ್ಚದ ಯೋಜನೆಗಳನ್ನು ಪ್ರಸ್ತಾಪಿಸಲಾಗಿದೆ.

ಅಲ್ಲದೆ, ತಾಲೂಕಿನ 156 ಸರ್ಕಾರಿ ಶಾಲೆಗಳ ಅಭಿವೃದ್ಧಿ ಹಾಗೂ ವಿವಿಧ ಗ್ರಾಮಗಳ ಕುಡಿಯುವ ನೀರಿನ ಕೆರೆಗಳ ಭರ್ತಿಗೆ ಕ್ರಮ ವಹಿಸಲಾಗಿದೆ ಎಂದು ವಿವರಿಸಿದರು.

ಈ ಬಾರಿಯ ತೀವ್ರ ಬರಗಾಲದ ನಡುವೆಯೂ ರೈತರ ಬೆಳೆಗಳಿಗೆ ಕಾಲುವೆ ಮೂಲಕ ನೀರು ಒದಗಿಸಲು ಸರ್ಕಾರ ಬದ್ಧವಾಗಿದೆ. ನವೆಂಬರ್ 20ರ ನಂತರವೂ ನೀರು ಹರಿಸಲು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗಿದೆ. ಸರ್ಕಾರದ ಗೃಹಲಕ್ಷ್ಮಿ, ಉಚಿತ ವಿದ್ಯುತ್ ಹಾಗೂ ಉಚಿತ ಬಸ್ ಪ್ರಯಾಣದಂತಹ ಯೋಜನೆಗಳು ಬಡ ಜನರ ಜೀವನಕ್ಕೆ ಆಸರೆಯಾಗಿವೆ ಎಂದರು.

ಸೂಪರ್ ಎಲ್–ನೀನೋ ಪರಿಣಾಮ, ಜಿಲ್ಲೆಯ 54 ಹಳ್ಳಿಗಳಲ್ಲಿ ಕುಡಿಯುವ ನೀರಿನ ತತ್ವಾರ

ಕಲಬುರಗಿ, ನ. 7: ಸೂಪರ್ ಎಲ್–ನೀನೋ ಪರಿಣಾಮದಿಂದ ಜಿಲ್ಲೆಯಲ್ಲಿ ಭೀಕರ ಬರಗಾಲ ಆವರಿಸಿದೆ. ಜಿಲ್ಲೆಯ ಭೀಮಾ, ಕಾಗಿಣಾ, ಕೃಷ್ಣಾ, ಅಮರ್ಜಾ, ಕಾರಂಜಾ ನದಿಗಳು ಹರಿದರೂ ಮುಂಗಾರು–ಹಿಂಗಾರು ಅವಧಿಯಲ್ಲೇ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿಗೂ ತತ್ವಾರ ಎದುರಾಗಿದೆ.

ಜಿಲ್ಲೆಯಲ್ಲಿ 11 ತಾಲ್ಲೂಕುಗಳ ವ್ಯಾಪ್ತಿಯಲ್ಲಿ 261 ಗ್ರಾಮ ಪಂಚಾಯಿತಿಗಳಿದ್ದು, 1,235 ಜನವಸತಿ ಪ್ರದೇಶಗಳಿವೆ. ಜೇವರ್ಗಿ, ಶಹಾಬಾದ್ ಹಾಗೂ ಸೇಡಂ ಹೊರತುಪಡಿಸಿ ಇನ್ನುಳಿದ ಎಂಟು ತಾಲ್ಲೂಕುಗಳ 44 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ 54 ಹಳ್ಳಿಗಳಲ್ಲಿ ನೀರಿಗೆ ಬರ ಎದುರಾಗಿದೆ.

ಕಲಬುರಗಿ ತಾಲ್ಲೂಕಿನ ಎರಡು ಹಾಗೂ ಕಾಳಗಿ ತಾಲ್ಲೂಕಿನ ಒಂದು ಹಳ್ಳಿಗೆ ಮೂರು ಟ್ಯಾಂಕರ್‌ಗಳ ಮೂಲಕ ನಿತ್ಯ ಒಟ್ಟು 9 ಟ್ರಿಪ್ ಮೂಲಕ ನೀರು ಪೂರೈಸಲಾಗುತ್ತಿದೆ. ಅಫಜಲಪುರ ತಾಲ್ಲೂಕಿನ 3, ಆಳಂದದಲ್ಲಿ 24, ಚಿಂಚೋಳಿಯಲ್ಲಿ 2, ಚಿತ್ತಾಪುರದಲ್ಲಿ 3, ಕಲಬುರಗಿಯಲ್ಲಿ 10, ಕಮಲಾಪುರದ 4, ಯಡ್ರಾಮಿಯ 4, ಕಾಳಗಿಯ 1 ಸೇರಿದಂತೆ ಒಟ್ಟು 51 ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸಲು ಜಿಲ್ಲಾಡಳಿತವು 74 ಖಾಸಗಿ ಕೊಳವೆಬಾವಿಗಳನ್ನು ಈಗಾಗಲೇ ಬಾಡಿಗೆಗೆ ಪಡೆದಿದೆ.

ಕಲಬುರಗಿ ನಗರಕ್ಕೆ ಟ್ಯಾಂಕರ್ ನೀರೇ ಗತಿ: ಇನ್ನು ಕಲಬುರಗಿ ಮಹಾನಗರದಲ್ಲೂ ದಿನೇದಿನೆ ಕುಡಿಯುವ ನೀರಿನ ಸ್ಥಿತಿ ಬಿಗಡಾಯಿಸುತ್ತಿದೆ. ಕೆರೆಬೋಸಗಾದಲ್ಲಿನ ನೀರು ಸಂಪೂರ್ಣ ಬತ್ತಿದೆ. ಕುರಿಕೋಟಾ ಬೆಣ್ಣೆತೊರಾ ಹಿನ್ನೀರಿನ ಜಾಕ್‌ವೆಲ್ ಬಳಿಯ ನೀರು ಕ್ರಮೇಣ ಕಡಿಮೆಯಾಗುತ್ತಿದೆ. ಕೊಳವೆ ಬಾವಿಗಳೂ ಬಿಕ್ಕುತ್ತಿವೆ. ಪಾಲಿಕೆಯ 1,530 ಕೊಳವೆ ಬಾವಿಗಳ ಪೈಕಿ ಈಗಾಗಲೇ 75 ಬೋರ್‌ವೆಲ್‌ಗಳು ಒಣಗಿವೆ. ಸಾವಿರಾರು ಖಾಸಗಿ ಕೊಳವೆಬಾವಿಗಳಲ್ಲಿ ಅಂತರ್ಜಲ ಕುಸಿಯುತ್ತಿದೆ. ಬಹುತೇಕ ಸಂಪೂರ್ಣ ಬತ್ತಿ ಹೋಗಿವೆ. ನಗರದ ನಾಗರಿಕರು ನೀರಿಗಾಗಿ ಪಾಲಿಕೆಗೆ ಮೊರೆ ಇಡುತ್ತಿದ್ದಾರೆ. ಅನುಕೂಲಸ್ತರು ಟ್ಯಾಂಕರ ನೀರು ತರಿಸಿಕೊಳ್ಳುತ್ತಿದ್ದಾರೆ. ಅದಕ್ಕೂ ಕ್ಯೂನಲ್ಲಿ ನಿಲ್ಲುವಂಥ ಪರಿಸ್ಥಿತಿ ನಿರ್ಮಾಣವಾಗಿದೆ. ಟ್ಯಾಂಕರ್‌ಗೆ ಹಣ ನೀಡಿದರೂ ಅಂದೇ



ಸಿಗುವದಿಲ್ಲ. ಒಂದೆರಡು ದಿನ ಕಾಯುವಂಥ ಭೀಕರ ಸ್ತಿತಿ ಬಂದಿದೆ. ನಾವೆಲ್ಲ ಸಹಜವಾಗಿ ಬೇಸಿಗೆ ಅವಧಿಯ ಫೆಬ್ರುವರಿ ಅಂತ್ಯದಿಂದ ಮೇ ಅಂತ್ಯದ ತನಕ ಟ್ಯಾಂಕರ್ ನೀರು ಪೂರೈಸುತ್ತಿದ್ದೆವು. ಈ ಸಲ ಬರದಿಂದಾಗಿ ಸೆಪ್ಟೆಂಬರ್‌ನಿಂದಲೇ ಟ್ಯಾಂಕರ್ ನೀರು ಒದಗಿಸುವಂತಾಗಿದೆ. ನಿತ್ಯ 50 ಟ್ರಿಪ್ ಟ್ಯಾಂಕರ್ ನೀರು ಪೂರೈಸುತ್ತಿದ್ದೇವೆ. ದಿನಾಲೂ 50ಕ್ಕೂ ಜನ ಬಂದು ನಮ್ಮ ಏರಿಯಾಗೆ ನೀರು ಬಿಡಿ, ಟ್ಯಾಂಕರ್ ನೀರು ಕಳಿಸಿ ಎಂದು ಒತ್ತಾಯಿಸುತ್ತಿದ್ದಾರೆ ಎಂದು ಕಲಬುರಗಿಯ ಕೆಯುಐಡಿಎಫ್‌ಸಿ ಅಧಿಕಾರಿಯೊಬ್ಬರು ಹೇಳುತ್ತಾರೆ.

168 ಜನವಸತಿಗಳಲ್ಲಿ ಪರಿಸ್ಥಿತಿ ಗಂಭೀರ: ಜಿಲ್ಲೆಯಲ್ಲಿ ಸದ್ಯ 54 ಹಳ್ಳಿಗಳಲ್ಲಿ ನೀರಿನ ಸಮಸ್ಯೆ ಇದ್ದು, ಅಲ್ಲಿ ಟ್ಯಾಂಕರ್ ಹಾಗೂ ಕೊಳವೆಬಾವಿ ಬಾಡಿಗೆ ಪಡೆದು ನೀರು ಪೂರೈಸಲಾಗುತ್ತಿದೆ. ಜಿಲ್ಲೆಯಲ್ಲಿ ಒಟ್ಟು 1,235 ಜನವಸತಿ ಪ್ರದೇಶಗಳಿವೆ. 2027ರ ಮೇ ತನಕ ಒಟ್ಟು 168 ಜನವಸತಿ ಪ್ರದೇಶಗಳಲ್ಲಿ ಕುಡಿಯುವ ನೀರಿನ ತೀವ್ರತರ ಸಮಸ್ಯೆ ಎದುರಾಗುವ ಅಂದಾಜಿದೆ ಎಂದು ಕುಡಿಯುವ ನೀರಿನ ಜಿಲ್ಲಾ ತಾಂತ್ರಿಕ ನೋಡಲ್ ಅಧಿಕಾರಿಯೂ ಆಗಿರುವ ಗ್ರಾಮೀಣ ಕುಡಿಯುವ ನೀರಿನ ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ಜಗದೇವಪ್ಪ ಜೀವಣಗಿ ತಿಳಿಸಿದರು.

ಕುಡಿಯುವ ನೀರಿನ ಸಮಸ್ಯೆ ನಿರ್ವಹಣೆಗೆ ಈತನಕ ಜಿಲ್ಲೆಗೆ ರೂ.13 ಕೋಟಿ ಮಂಜೂರಾಗಿದೆ. ಅದರಲ್ಲಿ ಒಟ್ಟು ರೂ.8 ಕೋಟಿ ಮೊತ್ತದ ಕ್ರಿಯಾಯೋಜನೆ ರೂಪಿಸಲಾಗಿದೆ. ಅದರಲ್ಲಿ ರೂ.3.50 ಕೋಟಿ ವೆಚ್ಚವಾಗಿದೆ. ನೀರು ಒದಗಿಸುವ ಜೊತೆಗೆ ನೀರಿನ ಗುಣಮಟ್ಟಕ್ಕೂ ಒತ್ತು ನೀಡಲಾಗಿದೆ ಎಂದು ವಿವರಿಸಿದರು.

ಭಾರತದ ಭವಿಷ್ಯ ಭದ್ರಗೊಳಿಸುವ ಗುರಿ ಇರಲಿ: ನಾಗೇಶರೆಡ್ಡಿ ಕರೆ



ಬೀದರ್, ನ. 7: ಪ್ರತಿಯೊಬ್ಬ ವಿದ್ಯಾರ್ಥಿ ಶ್ರೇಷ್ಠ ವಿಚಾರ, ಗುರಿಯನ್ನು ಇಟ್ಟುಕೊಂಡು ಸಂಪೂರ್ಣ ಏಕಾಗ್ರಚಿತ್ತದಿಂದ ಭಾರತದ ಭವಿಷ್ಯವನ್ನು ಭದ್ರಗೊಳಿಸುವ ಪ್ರಯತ್ನ ಮಾಡಬೇಕು ಎಂದು ಸರಸ್ವತಿ ಶಿಕ್ಷಣ ವಿಕಾಸ ಸಂಸ್ಥೆ ಉಪಾಧ್ಯಕ್ಷ ನಾಗೇಶರೆಡ್ಡಿ ಹೇಳಿದರು.

ನಗರದ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಸಂಚಾಲಿತ ಮಡಿವಾಳೇಶ್ವರ ಶಿಶುಮಂದಿರ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಪ್ರಾಚೀನ ಭಾರತ ಸಾಧನ ಯಾತ್ರೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ನಮ್ಮ ಪೂರ್ವಜರ ಆಚಾರ–ವಿಚಾರಗಳ ಬಗ್ಗೆ ಆಳವಾಗಿ ತಿಳಿದುಕೊಂಡು ಪ್ರತಿಯೊಬ್ಬ ಭಾರತೀಯನ ಮನದಾಳದಲ್ಲಿ ಇಳಿಸುವ ಪ್ರಯತ್ನ ಮಾಡಬೇಕು ಎಂದರು.

ಜ್ಞಾನಭಾರತಿ ಶಿಕ್ಷಣ ಸಂಸ್ಥೆ ಅಧ್ಯಕ್ಷ ಸೂರ್ಯಕಾಂತ್ ಮಠಪತಿ, ಕಾರ್ಯದರ್ಶಿ ಹನುಮಂತರಾವ್ ಪಾಟೀಲ ಮಾತನಾಡಿದರು. ಶಿವಶರಣಪ್ಪ ಪಾಟೀಲ, ಅನಿತಾ ಅಶೋಕ, ಚನ್ನಬಸವಂತರಡ್ಡಿ, ಶಿವಕುಮಾರ ಉಪ್ಪೆ, ಶರಣು ಪಾಟೀಲ, ಅರ್ಚನಾ ಸಿರಿಗೆರೆ, ಅಶ್ವಿನಿ ಪಾಟೀಲ, ಪ್ರತಿಭಾ ತೇಲಿ ಇದ್ದರು.

ಮತದಾರರ ಪಟ್ಟಿ ಪರಿಷ್ಕರಣೆ ವಿರೋಧಿಸುವ ಕಾಂಗ್ರೆಸ್ ದ್ವಂದ್ವನೀತಿ

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆಗೆ ಏಕೆ ವಿರೋಧಿಸಲಿಲ್ಲ: ಸುನಿಲ್‌ಕುಮಾರ್

ಕಲಬುರಗಿ, ನ. 7: ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಹೆಸರಿನಲ್ಲಿ ಕಳೆದ ಮೂರು ತಿಂಗಳಿಂದ ಗ್ಯಾರಂಟಿ ಯೋಜನೆಗಳಿಗೆ ಹಣ ಕೊಡುವುದನ್ನೇ ನಿಲ್ಲಿಸಿದೆ. ಚುನಾವಣಾ ಆಯೋಗದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ವಿರೋಧಿಸುತ್ತಿರುವ ಕಾಂಗ್ರೆಸ್ ನಾಯಕರು, ಗ್ಯಾರಂಟಿ ಪರಿಷ್ಕರಣೆಯನ್ನು ಏಕೆ ವಿರೋಧಿಸುತ್ತಿಲ್ಲ ಎಂದು ಕಾರ್ಕಳ ಬಿಜೆಪಿ ಶಾಸಕ ವಿ.ಸುನಿಲ್ ಕುಮಾರ್ ಪ್ರಶ್ನಿಸಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಆಯೋಗವು 18 ವರ್ಷಗಳ ನಂತರ ಮತದಾರರ ಪರಿಷ್ಕರಣೆ ನಡೆಸುತ್ತಿದೆ. ಇದು ಆಯೋಗದ ಸಾಮಾನ್ಯ ಪ್ರಕ್ರಿಯೆ. ಇದನ್ನು ವಿರೋಧಿಸುವ ಕಾಂಗ್ರೆಸ್ ನಾಯಕರು ಕೇವಲ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಪರಿಷ್ಕರಣೆಗೆ ಏಕಾಏಕಿ ಮುಂದಾಗಿದೆ. ಇದರ ನೆಪದಲ್ಲಿ ಅನೇಕ ತಿಂಗಳಿಂದ ಗೃಹಲಕ್ಷ್ಮಿ ಹಣವನ್ನು ಫಲಾನುಭವಿಗಳಿಗೆ ಜಮಾ ಮಾಡಲಿಲ್ಲ. ಮತ್ತೊಂದೆಡೆ ಬರಗಾಲದಿಂದ ಬೆಳೆನಷ್ಟ ಮಾಡಿಕೊಂಡಿರುವ ರೈತರಿಗೆ 2500 ಪರಿಹಾರ ನೀಡುವುದಾಗಿ ಭರವಸೆ ನೀಡಿದ್ದರೂ ಅದಿನ್ನೂ ಜಮಾ ಮಾಡಿಲ್ಲ. ಸಾಲದೆಂಬಂತೆ ಪರಿಹರ ಪಡೆಯಲು 17 ಷರತ್ತುಗಳನ್ನು ವಿಧಿಸಿದೆ. ಇದು ರೈತರ ನೆರವಿಗೆ ಬರುವ ರೀತಿಯೇ ಎಂದು ಪ್ರಶ್ನಿಸಿದರು.

ಬಿಜೆಪಿ ಅಭಿಯಾನ: ದೇಶದಲ್ಲಿ ಎಸ್‌ಐಆರ್ ಹೆಸರಿನಲ್ಲಿ ಕಾಂಗ್ರೆಸ್ ನಡೆಸುತ್ತಿರುವ ಅಪಪ್ರಚಾರದ ವಿರುದ್ಧ, ದೇಶದ ಜನರಿಗೆ ವಾಸ್ತವ ಸಂಗತಿ ತಿಳಿಸಿ ಪ್ರಜಾಪ್ರಭುತ್ವ ಉಳಿಸಲು ಬಿಜೆಪಿ ರಾಜ್ಯದಾದ್ಯಂತ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಮಹಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.



ಚುನಾವಣಾ ಆಯೋಗ ಒಂದು ಸಾಂವಿಧಾನಿಕ ಸಂಸ್ಥೆ. ಅದರ ಕಾರ್ಯದಲ್ಲಿ ಕೇಂದ್ರ ಸರ್ಕಾರ ಎಂದೂ ಹಸ್ತಕ್ಷೇಪ ಮಾಡಲು ಬರುವುದಿಲ್ಲ. ಆದರೆ ಹಿಂದೆ ಕಾಂಗ್ರೆಸ್ ಪಕ್ಷ ಹಸ್ತಕ್ಷೇಪ ಮಾಡಿದಂತೆ ಕಂಡು ಬರುತ್ತದೆ. ಆದ್ದರಿಂದಲೇ ಚುನಾವಣಾ ಆಯೋಗಕ್ಕೆ ಆದೇಶಿಸಲು ಪ್ರಯತ್ನಿಸಿ ವಿಫಲವಾದಾಗ, ಬೀದಿಗಿಳಿದಿರುವ ಕಾಂಗ್ರೆಸ್ ಎಸ್‌ಐಆರ್ ಹೆಸರಿನಲ್ಲಿ ದೇಶದ ಯುವ ಸಮುದಾಯವನ್ನು ದಾರಿ ತಪ್ಪಿಸುತ್ತಿದೆ. ಇದಕ್ಕೆ ಪ್ರತಿಯಾಗಿ ಯುವಕರಲ್ಲಿ ಜಾಗೃತಿ ಮೂಡಿಸಲು ಬಿಜೆಪಿ ನವೆಂಬರ್ ಇಡೀ ತಿಂಗಳು ಅಭಿಯಾನ ನಡೆಸುತ್ತಿದೆ ಎಂದರು.

ಕಾಲೇಜು ವಿದ್ಯಾರ್ಥಿಗಳು ಹಾಗೂ ಯುವಕರೊಂದಿಗೆ 500ಕ್ಕೂ ಅಧಿಕ ಸಂವಾದ ಆಯೋಜಿಸಲಾಗುವುದು. ದೀಪಾವಳಿ ಬಳಿಕ ರಾಜ್ಯದ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ 35 ವರ್ಷದೊಳಗಿನ ಯುವಕರೊಂದಿಗೆ ಸಂವಾದ ನಡೆಸಲಾಗುವುದು. ನ.3ರಂದು ಹುಬ್ಬಳ್ಳಿಯಲ್ಲಿ ಸಂಸದ ತೇಜಸ್ವಿ ಸೂರ್ಯ ನೇತೃತ್ವದಲ್ಲಿ ಅಭಿಯಾನಕ್ಕೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು.

ಸಮಗ್ರ ಶಿಶು ಅಭಿವೃದ್ಧಿ ಯೋಜನೆ: ಕೇಂದ್ರದ ಅನುದಾನಕ್ಕೆ ಆಗ್ರಹ

ಕಲಬುರಗಿ, ನ.7: ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಐಸಿಡಿಎಸ್‌ಗೆ ಕೇಂದ್ರ ಸರ್ಕಾರ ನೀಡುವ ಅನುದಾನವನ್ನು ಮೊದಲಿನಂತೆ ಶೇ.90ಕ್ಕೆ ಹೆಚ್ಚಳ ಮಾಡುವ ಜತೆಗೆ ದೇಶದ 10.50 ಕೋಟಿ ಫಲಾನುಭವಿ ಮಕ್ಕಳಿಗೆ ಆಹಾರ ಮತ್ತು ಪೌಷ್ಟಿಕತೆ ಹಕ್ಕು ದೊರಕಿಸಿಕೊಡಲು ಯೋಜನೆ ಕಾಯಂಗೊಳಿಸಬೇಕು ಎಂದು ಅಂಗನವಾಡಿ ನೌಕರರ ಸಂಘದ ರಾಜ್ಯಾಧ್ಯಕ್ಷೆ ಎಸ್.ವರಲಕ್ಷ್ಮೀ ಆಗ್ರಹಿಸಿದರು.



> ಅಂಗನವಾಡಿ ನೌಕರರು ಕೆಳಹಂತದಲ್ಲಿ ಸರ್ಕಾರಿ ಯೋಜನೆ ಅನುಷ್ಠಾನಗೊಳಿಸುವ ಸಮರ್ಥರು ಎನ್ನುವ ಸರ್ಕಾರ ಸೌವಲತ್ತು ನೀಡುತ್ತಿಲ್ಲ. ಡಿಜಿಟಲೀಕರಣ ಮಾಡಿರುವುದರಿಂದ ಇಡೀ ದಿನ ಮೊಬೈಲ್‌ನಲ್ಲಿ ಮಾಹಿತಿ ಅಪ್ಲೋಡ್? ಮಾಡುವುದರಲ್ಲಿಯೇ ಹೋಗುತ್ತಿದೆ. ಹೀಗಾಗಿ ಮಕ್ಕಳ ಲಾಲನೆ, ಪಾಲನೆ, ಅವರ ಕಲಿಕೆಯತ್ತ ಗಮನ ಹರಿಸುವುದು ಆಗುತ್ತಿಲ್ಲ. ಹೀಗಾಗಿ ಅನ್ಯ ಕೆಲಸಗಳಿಗೆ ನಿಯೋಜಿಸುವುದು ನಿಲ್ಲಿಸಬೇಕು.
> –ಎಸ್.ವರಲಕ್ಷ್ಮೀ, ರಾಜ್ಯಾಧ್ಯಕ್ಷೆ, ಅಂಗನವಾಡಿ ನೌಕರರ ಸಂಘ

ಕನ್ನಡ ಭವನದಲ್ಲಿ ಆಯೋಜಿಸಿದ್ದ ಅಂಗನವಾಡಿ ನೌಕರರ ಜಿಲ್ಲಾ ಸಮಾವೇಶ ಉದ್ಘಾಟಿಸಿ ಮಾತನಾಡಿ, ಐಸಿಡಿಎಸ್ ಜಾರಿಗೊಂಡು 52 ವರ್ಷಗಳಾಗಿವೆ. ದೇಶದ ಮಕ್ಕಳಿಗೆ ಕಲಿಕೆಯ ಜತೆಗೆ ಪೌಷ್ಟಿಕ ಆಹಾರ ನೀಡುವ ಅಂಗನವಾಡಿ ಯೋಜನೆ ದುರ್ಬಲಗೊಳಿಸಲು ಕೇಂದ್ರ ಸರ್ಕಾರ 2018ರಿಂದ ಇದುವರೆಗೂ ಬಜೆಟ್‌ನಲ್ಲಿ ಅನುದಾನ ಹೆಚ್ಚಳ ಮಾಡಿಲ್ಲ. ಹೀಗಾಗಿ ಈ ಕೂಡಲೇ ಹೆಚ್ಚಿನ ಅನುದಾನ ನೀಡುವುದರ ಜತೆಗೆ ತನ್ನ ಪಾಲು ಹೆಚ್ಚಿಸಬೇಕು, ನೌಕರರನ್ನು ಕಾಯಂಗೊಳಿಸಬೇಕು ಎಂದು ಒತ್ತಾಯಿಸಿದರು.

ಅಂಗನವಾಡಿ ನೌಕರರಿಗೆ ಜೀವಿಸುವ ಹಕ್ಕು ಇಲ್ವಾ? ನಾವು ಜೀವಿಸಬೇಕು ಎಂದರೆ ಪಗಾರ ಹೆಚ್ಚಳ ಮಾಡಿ. ಯೋಜನೆ ಕಾಯಂಗೊಳಿಸಿ, ನೌಕರರನ್ನು ಕಾರ್ಮಿಕರೆಂದು ಪರಿಗಣಿಸಿ ಶಾಸನಬದ್ಧ ಸೌಲಭ್ಯ ನೀಡಬೇಕು, ಕಾಯ್ದೆಯಂತೆ ಕನಿಷ್ಠ ವೇತನ ನೀಡಬೇಕು. ಆಹಾರ ಗುಣಮಟ್ಟ ಹೆಚ್ಚಿಸಲು ಯೂನಿಟ್ ದರ ಹೆಚ್ಚಿಸಬೇಕು. ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಆಗ್ರಹಿಸಿದರು.

ಪ್ರಧಾನಿ ನೇತೃತ್ವದ ಸಮಿತಿಯಲ್ಲಿಯೇ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ಕಾರ್ಮಿಕರು ಎಂದು ಪರಿಗಣಿಸಲು ಒಪ್ಪಿಗೆ ನೀಡಿದೆ. ಇನ್ನೊಂದೆಡೆ ನ್ಯಾಯಾಲಯವು ಯೋಜನೆಯಡಿ ಕೆಲಸ ಮಾಡುವರು ಮತ್ತು ಸರ್ಕಾರ ನಡುವಿನ ಸಂಬಂಧ ಮಾಲೀಕರು ಮತ್ತು ಕೆಲಸಗಾರರಂತಿದೆ ಎಂದಿದೆ. ಹೀಗಿದ್ದರೂ ಯಾಕೆ ಅನುದಾನ ಕಡಿತಗೊಳಿಸಲಾಗುತ್ತಿದೆ, ಅದನ್ನು ಇಲಾಖೆಯಾಗಿ ಪರಿ ವರ್ತಿಸಲು ಏಕೆ ಸರ್ಕಾರ ಹಿಂಜರಿಯುತ್ತಿದೆ ಎಂದು ಪ್ರಶ್ನಿಸಿದರು.

ಜಿಲ್ಲಾಧ್ಯಕ್ಷೆ ಗೌರಮ್ಮ ಪಾಟೀಲ್, ಪ್ರಮುಖರಾದ ಎಂ.ಬಿ.ಸಜ್ಜನ್, ಶಾಂತಾ, ಶ್ರೀಮಂತ ಬಿರಾದಾರ ಇತರರಿದ್ದರು.

ಫೆಬ್ರವರಿಯಲ್ಲಿ ಅಂಗನವಾಡಿ ಅನಿರ್ದಿಷ್ಟ ಬಂದ್: ಬೆಲೆ ಏರಿಕೆಗೆ ತಕ್ಕಂತೆ ನೌಕರರ ವೇತನ ಹೆಚ್ಚಳ ಮಾಡುವುದು ಸೇರಿ ಇನ್ನಿತರ ಬೇಡಿಕೆಗಳಿಗೆ ಆಗ್ರಹಿಸಿ ಸಿಐಟಿಯುಸಿ ನೇತೃತ್ವದಲ್ಲಿ ದೆಹಲಿಯಲ್ಲಿ ಹೋರಾಟ ನಡೆಸಲಾಗುವುದು. ಇದಕ್ಕೆ ಸ್ಪಂದಿಸದಿದ್ದರೆ ಫೆಬ್ರವರಿಯಲ್ಲಿ ರಾಜ್ಯದಲ್ಲಿ ಅಂಗನವಾಡಿಗಳನ್ನು ಅನಿರ್ದಿಷ್ಟಾವಧಿ ಬಂದ್ ಮಾಡಿ ಹೋರಾಟ ಆರಂಭಿಸಬೇಕಾಗುತ್ತದೆ. ರಾಜ್ಯ ಸರ್ಕಾರವು ತನ್ನ ಹೊಣೆಯಿಂದ ನುಣಚಿಕೊಳ್ಳಬಾರದು. ಗೌರವ ಧನ ಹೆಚ್ಚಳ ಮಾಡಲು ಮುಂದಾಗಬೇಕು ಎಂದು ವರಲಕ್ಷ್ಮೀ ಆಗ್ರಹಿಸಿದರು.



ದೀಪಾವಳಿ ಹಿನ್ನೆಲೆಯಲ್ಲಿ ಬೆಂಗಳೂರಿನ ಮಲ್ಲೇಶ್ವರದಲ್ಲಿ ಶನಿವಾರ ಜನರಿಂದ ಖರೀದಿ ಭರಾಟೆ

ಸೂರ್ಯನಾರಾಯಣನ ಸನ್ನಿಧಿಯಲ್ಲಿ ಪೇಜಾವರಶ್ರೀ

ಕಲಬುರಗಿ, ನ. 7: ನಗರದ ಸಂಗಮೇಶ್ವರ ಕಾಲೋನಿಯಲ್ಲಿರುವ ಶ್ರೀ ಸೂರ್ಯನಾರಾಯಣ ದೇವಸ್ಥಾನದ ಶ್ರೀ ಯೋಗೀಶ್ವರ ಯಾವಲಕ್ಷೀ ಭವನದಲ್ಲಿ ನಡೆಯುತ್ತಿರುವ ಕೋಟಿ ಸೂರ್ಯನಾರಾಯಣ ನಾಮಜಪದ ಪವಿತ್ರ ಗಳಿಗೆಯಲ್ಲಿ ಉಡುಪಿಯ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥರು ಭೇಟಿ ನೀಡಿ ಆಶೀರ್ವಾದ ನೀಡಿದರು.



ಬೆಳಗ್ಗೆ ಶ್ರೀ ಸೂರ್ಯನಾರಾಯಣ ದೇವಸ್ಥಾನಕ್ಕೆ ಆಗಮಿಸಿದ ಶ್ರೀಗಳು, ಭಗವಾನ್ ಶ್ರೀ ಸೂರ್ಯನಾರಾಯಣ ದೇವರು ಹಾಗೂ ಮಹರ್ಷಿ ಶ್ರೀ ಯೋಗೀಶ್ವರ ಯಾವಲ್ಕ್ಯರಿಗೆ ವಿಶೇಷ ಮಂಗಳಾರತಿ ಸಲ್ಲಿಸಿದರು. ಬಳಿಕ ಸೇವಾ ಸಮಿತಿಯಿಂದ ಶ್ರೀಗಳ ಪಾದಪೂಜೆ ನೆರವೇರಿಸಲಾಯಿತು.

ರಥಸಪ್ತಮಿಯ ಪವಿತ್ರ ಸಂದರ್ಭದಲ್ಲಿ ಸಮಿತಿಯು ಹಮ್ಮಿಕೊಂಡಿರುವ ಶ್ರೀ ಯೋಗೀಶ್ವರ ಯಾಜ್ಞವಲ್ಕ್ಯರ ಮೂರ್ತಿ ಪುನರ್ ಪ್ರತಿಷ್ಠಾಪನಾ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಲಿ ಎಂದು ಶ್ರೀಗಳು ಹಾರೈಸಿದರು.

ಶಾಮಾಚಾರ್ಯ ಬೈಚಬಾಳ, ರಾವೇಂದ್ರ ವಕೀಲ್, ಚಂದ್ರಕಾಂತ ಗದಾರ್, ವಿನೂತ ಜೋಶಿ, ಶಾಮರಾವ ಕುಲಕರ್ಣಿ, ವೆಂಕಟೇಶ ಕುಲಕರ್ಣಿ, ರಾವೇಂದ್ರ ನೀಲೂರು, ಸತ್ಯನಾರಾಯಣ ಕುಲಕರ್ಣಿ, ದತ್ತಾತ್ರೇಯ ಕುಲಕರ್ಣಿ, ದತ್ತಾತ್ರೇಯ ಸಬ್ನವಿಸ್, ವಾಸುದೇವ 'ರಾವ ಕುಳಗೇರಿ, ಅಶೋಕ ಮಳ್ಳಿ, ಗೋಪಾಲರಾವ್ ದೇಶಪಾಂಡೆ, ಮನೋಹರರಾವ್, ಪ್ರತಿಭಾ ಕುಲಕರ್ಣಿ, ಛಾಯಾ ಯರಗೊಳ, ಸುನಿತಾ ದೇಶಪಾಂಡೆ, ಶೋಭಾ ಕುಲಕರ್ಣಿ, ಲೀಲಾವತಿ ಕುಲಕರ್ಣಿ, ಪದ್ಮಾವತಿ, ವಾಣಿ ಕುಲಕರ್ಣಿ, ಸೀತಾಬಾಯಿ ಬೈಚಬಾಳ ಇತರರಿದ್ದರು.

ಫೆ.13ರವರೆಗೆ ನಾಮಜಪ

ಸಂಗಮೇಶ್ವರ ಬಡಾವಣೆಯ ಶ್ರೀ ಸೂರ್ಯನಾರಾಯಣ ದೇವ 'ಸ್ಥಾನದ ಶ್ರೀ ಯಾವಲ್ಕ್ಯ ಭವನದಲ್ಲಿ ಕೋಟಿ ಸೂರ್ಯನಾರಾಯಣ ನಾಮಜಪ ಯಜ್ಞ ಶುರುವಾಗಿದೆ. ಈ ಜಪಾನುಷ್ಠಾನವು 2027ರ ಫೆಬ್ರವರಿ 13ರವರೆಗೆ ನಡೆಯಲಿದ್ದು, ಪ್ರತಿ ಭಾನುವಾರ ನೂರಾರು ಭಕ್ತರು ಸೂರ್ಯ ನಾರಾಯಣ ದೇವರ ಜಪ ನಡೆಸಲಿದ್ದಾರೆ.

ಕೆಪಿಎಸ್‌ಸಿ ಗೆಜೆಟೆಡ್ ಪ್ರೊಬೇಷನರಿ ಪೂರ್ವಭಾವಿ ಪರೀಕ್ಷೆ ನಿರ್ವಹಣೆಯಲ್ಲಿ ಲೋಪ ಆಗದಂತೆ ನಿಗಾವಹಿಸಿ: ಜಿಲ್ಲಾಧಿಕಾರಿ

ವಿಜಯಪುರ, ನ.7, ಕರ್ನಾಟಕ ಲೋಕಸೇವಾ ಆಯೋಗ ನಡೆಸುವ (ಕೆಪಿಎಸ್‌ಸಿ) ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳ ನೇಮಕಾತಿಗಾಗಿ ನವೆಂಬರ್ 15ರಂದು ನಡೆಯಲಿರುವ ಪೂರ್ವಭಾವಿ ಪರೀಕ್ಷೆಯನ್ನು ಅತ್ಯಂತ ಜವಾಬ್ದಾರಿ ಹಾಗೂ ಜಾಗರೂಕತೆಯಿಂದ ನಿರ್ವಹಿಸಬೇಕು.ಯಾವುದೇ ಗೊಂದಲ, ಲೋಪದೋಷ ಅಥವಾ ಅಹಿತಕರ ಘಟನೆಗೆ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಪರೀಕ್ಷಾ ಕಾರ್ಯಕ್ಕೆ ನೇಮಕಗೊಂಡ ಅಧಿಕಾರಿ ಗಳಿಗೆ ಸೂಚಿಸಿದರು.



ಶನಿವಾರ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಪರೀಕ್ಷಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ನಗರದ 20 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದ್ದು, ಒಟ್ಟು 8,117 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಕೆಪಿಎಸ್‌ಸಿ ಪರೀಕ್ಷೆ ಅತ್ಯಂತ ಸೂಕ್ಷ್ಮ ಹಾಗೂ ಮಹತ್ವದ್ದಾಗಿರುವುದರಿಂದ, ಈ ಹಿಂದಿನ ಪರೀಕ್ಷೆಗಳ ಅನುಭವದೊಂದಿಗೆ ಹೆಚ್ಚಿನ ಮುನ್ನೆಚ್ಚರಿಕೆ ವಹಿಸಬೇಕು. ಪರೀಕ್ಷೆಗೆ ಸಂಬಂಧಿಸಿದ ಎಲ್ಲ ಸಿದ್ಧತೆಗಳನ್ನು ಮುಂಚಿತವಾಗಿಯೇ ಪೂರ್ಣಗೊಳಿಸಿ, ನಿಗದಿತ ನಮೂನೆಗಳಲ್ಲಿ ಮಾಹಿತಿಯನ್ನು ನಿಖರವಾಗಿ ಭರ್ತಿ ಮಾಡಬೇಕು. ಅಭ್ಯರ್ಥಿಗಳು ಮೊಬೈಲ್ ಫೋನ್, ಬ್ಯಾಗ್ ಸೇರಿದಂತೆ ನಿಷೇಧಿತ ವಸ್ತುಗಳನ್ನು ಪ್ರವೇಶ ಸಂದರ್ಭದಲ್ಲಿ ಫ್ರಿಸ್ಕಿಂಗ್ ವ್ಯವಸ್ಥೆಯ ಮೊದಲೇ ಇರಿಸಲು ವ್ಯವಸ್ಥೆ ಮಾಡಿಕೊಳ್ಳಬೇಕು. ಯಾವುದೇ ಅನಗತ್ಯ ಗೊಂದಲ ವಾಗದಂತೆ ವ್ಯವಸ್ಥೆ ಮಾಡಬೇಕು. ಪರೀಕ್ಷೆ ಆರಂಭವಾಗುತ್ತಿದ್ದಂತೆ ಕೊಠಡಿಗಳಲ್ಲಿನ ಜಾಮರ್‌ಗಳನ್ನು ಚಾಲನೆಗೊಳಿಸಬೇಕು ಎಂದು ಸೂಚಿಸಿದರು.

ಪ್ರತಿಯೊಂದು ಪರೀಕ್ಷಾ ಕೊಠಡಿಯೂ ಸಿಸಿಟಿವಿ ಕಾಮರಾದ ವ್ಯಾಪ್ತಿಗೆ ಒಳಪಡುವಂತೆ ನೋಡಿಕೊಳ್ಳಬೇಕು. ಯಾವುದೇ ಸ್ಥಳ ಕ್ಯಾಮೆರಾ ವ್ಯಾಪ್ತಿಯಿಂದ ಹೊರಗುಳಿಯದಂತೆ ಪರಿಶೀಲಿಸಬೇಕು. ವೆಬ್‌ಕಾಸ್ಟಿಂಗ್ ವ್ಯವಸ್ಥೆಯ ಪ್ರಾಯೋಗಿಕ ಪರೀಕ್ಷೆ ನಡೆಸಿ,ಎಲ್ಲ ಕೊಠಡಿಗಳ ದೃಶ್ಯಾವಳಿ ಸ್ಪಷ್ಟವಾಗಿ ಪ್ರಸಾರವಾಗುವುದನ್ನು ಖಚಿತಪಡಿಸಿಕೊಳ್ಳಬೇಕು. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಪ್ರತ್ಯೇಕ ವೆಬ್‌ಕಾಸ್ಟಿಂಗ್ ತಂಡವನ್ನು ನಿಯೋಜಿಸಲಾಗಿದ್ದು, ಅಲ್ಲಿಂದ ಪ್ರತಿ ಕೊಠಡಿಯ ಪರೀಕ್ಷಾ ಚಟುವಟಿಕೆಗಳನ್ನು ನೇರವಾಗಿ ವೀಕ್ಷಿಸಲಾಗುವುದು

ಪ್ರಶ್ನೆಪತ್ರಿಕೆ ಹಾಗೂ ಒಎಂಆರ್ ಹಾಳೆಗಳನ್ನು ನಿಗದಿತ ಸಮಯಕ್ಕೆ ಪರೀಕ್ಷಾ ಕೊಠಡಿಗಳಿಗೆ ತಲುಪಿಸಿ, ಪರೀಕ್ಷಾ ಸಾಮಗ್ರಿಗಳ ಸಿದ್ಧತೆ ಮತ್ತು ವಿತರಣೆಗೆ ಮುಂಚಿತವಾಗಿಯೇ ಯೋಜನೆ ರೂಪಿಸಬೇಕು. ಒಎಂಆರ್ ಹಾಳೆಯಲ್ಲಿ ಉತ್ತರಿಸದ ಪ್ರಶ್ನೆಗಳಿಗೆ ಸಂಬಂಧಿಸಿದ ಐದನೇ ಬಬಲ್ ಶೇಡ್ ಮಾಡುವ ನಿಯಮದ ಬಗ್ಗೆ ಅಭ್ಯರ್ಥಿಗಳಿಗೆ ಸ್ಪಷ್ಟ ಮಾಹಿತಿ ನೀಡಬೇಕು. ಈ ನಿಯಮ ಪಾಲನೆಯಾಗುವಂತೆ ಕೊಠಡಿ ಮೇಲ್ವಿಚಾರಕರು ಗಮನಹರಿಸಬೇಕು ಎಂದು ತಿಳಿಸಿದರು.

ಪರೀಕ್ಷ ಸಂಪೂರ್ಣ ಮುಕ್ತಾಯ ಆಗುವವರೆಗೆ ಪರೀಕ್ಷಾರ್ಥಿ ಪರೀಕ್ಷಾ ಕೇಂದ್ರ ಬಿಟ್ಟು ಹೊರ ಬರುವಂತಿಲ್ಲ. ಪರೀಕ್ಷೆಯ ಮೇಲ್ವಿಚಾರಣೆಗಾಗಿ ಹಿರಿಯ ಅಧಿಕಾರಿಗಳನ್ನು ವೀಕ್ಷಕರನ್ನಾಗಿ ನೇಮಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಜಾರಿಯಲ್ಲಿ ರುತ್ತದೆ. ಪರೀಕ್ಷೆಗೆ ನಿಯೋಜಿಸಲಾದ ಪ್ರತಿಯೊಬ್ಬ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು. ಶಿಸ್ತು, ಸಮಯ ಪಾಲನೆ ಮತ್ತು ಹೊಣೆಗಾರಿಕೆಗೆ ಆದ್ಯತೆ ನೀಡಿ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಬೇಕು. ಪರೀಕ್ಷೆಯ ಗೌಪ್ಯತೆ ಮತ್ತು ಪಾರದರ್ಶಕತೆ ಕಾಪಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆ ಕರಡು ಪ್ರಕಟಣೆ ಆಕ್ಷೇಪಣೆ ಸಲ್ಲಿಸಲು ನ.28 ಕೊನೆಯ ದಿನ

ವಿಜಯಪುರ,ನ.7ವಿಜಯಪುರ ಹಿರಿಯ ಉಪನೋಂದಣಿ ಕಚೇರಿ ವ್ಯಾಪ್ತಿಯ ನಗರ ಹಾಗೂ ಗ್ರಾಮಾಂತರ ಪ್ರದೇಶಗಳ ಸ್ಥಿರಾಸ್ತಿಗಳ 2026–27ನೇ ಸಾಲಿನ ಪರಿಷ್ಕೃತ ಮಾರ್ಗಸೂಚಿ ಬೆಲೆಗಳ ಕರಡು ಪ್ರತಿಯನ್ನು ಪ್ರಕಟಿಸಲಾಗಿದ್ದು, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ವಿಜಯಪುರ ತಹಶೀಲ್ದಾರರು ಹಾಗೂ ಮಾರುಕಟ್ಟೆ ಮೌಲ್ಯ ನಿರ್ಧರಣಾ ಉಪಸಮಿತಿ ಅಧ್ಯಕ್ಷರ ನೇತೃತ್ವದಲ್ಲಿ ನ.6ರಂದು ನಡೆದ ಉಪಸಮಿತಿ ಸಭೆಯ ನಿರ್ದೇಶನ ಹಾಗೂ ಮಾರ್ಗದರ್ಶನ ದಂತೆ ಸ್ಥಿರಾಸ್ತಿಗಳ ಮಾರ್ಗಸೂಚಿ ಬೆಲೆಗಳನ್ನು ಪರಿಷ್ಕರಿಸಲಾಗಿದೆ. ಪರಿಷ್ಕೃತ ಮಾರ್ಗಸೂಚಿ ಬೆಲೆಗಳ ಕರಡು ಪ್ರತಿಯನ್ನು ಸಾರ್ವಜನಿಕರ ಮಾಹಿತಿಗಾಗಿ ವಿಜಯಪುರದ ಹಿರಿಯ ಉಪನೋಂದಣಿ ಕಚೇರಿಯಲ್ಲಿ ಪ್ರಕಟಿಸಲಾಗಿದೆ. ಈ ಬೆಲೆಗಳ ಕುರಿತು ಸಾರ್ವಜನಿಕರು ತಮ್ಮ ಆಕ್ಷೇಪಣೆ ಅಥವಾ ಸಲಹೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಆಸಕ್ತರು ನ.9ರಿಂದ 28ರವರೆಗೆ ತಮ್ಮ ಲಿಖಿತ ಆಕ್ಷೇಪಣೆಗಳನ್ನು ಹಿರಿಯ ಉಪನೋಂದಣಿ ಅಧಿಕಾರಿಗಳಿಗೆ ಸಲ್ಲಿಸಬಹುದು ಎಂದು ಹಿರಿಯ ಉಪನೋಂದಣಿ ಅಧಿಕಾರಿಗಳು ಹಾಗೂ ಮಾರುಕಟ್ಟೆ ಮೌಲ್ಯ ನಿರ್ಧರಣಾ ಉಪಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಭೀಮಾಶಂಕರ ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಮಾರಿ ವಿ. ಮಧುರಾ ಭರತನಾಟ್ಯ ರಂಗಪ್ರವೇಶ

ಶಿವಶಕ್ತಿ ಡ್ಯಾನ್ಸ್ ಸ್ಕೂಲ್, ಸುಬ್ರಹ್ಮಣ್ಯನಗರ, ಬೆಂಗಳೂರು ಇದರ ಸಂಸ್ಥಾಪಕಿ ಹಾಗೂ ನಿರ್ದೇಶಕಿ ವಿದುಷಿ ಗುಣವತಿ ಕೆ.ಆರ್. ಅವರ ಶಿಷ್ಯೆ ಕುಮಾರಿ ವಿ. ಮಧುರಾ ಅವರು ಮಲ್ಲೇಶ್ವರಂನ ಸೇವಾ ಸದನದಲ್ಲಿ ತಮ್ಮ ಭರತನಾಟ್ಯ ರಂಗ ಪ್ರವೇಶವನ್ನು ಸಾದರಪಡಿಸಿದರು.



ಗುರುಗಳಿಂದ ಗೆಜ್ಜೆ ಸ್ವೀಕರಿಸಿದ ನಂತರ, ಅವರು ಪುಷ್ಪಾಂಜಲಿಯೊಂದಿಗೆ ಕಾರ್ಯ ಕ್ರಮ ಆರಂಭಿಸಿ, ಅಲಾರಿಪು, ಜತಿಸ್ವರ, ಶಬ್ದಂ, ಸ್ವರಜತಿ ವರ್ಣಂ, ಪದಂ, ದೇವರನಾಮ, ಜಾವಳಿ ಮತ್ತು ತಿಲ್ಲಾನವನ್ನು ಪ್ರಸ್ತುತಪಡಿಸಿದರು.

ಅಚ್ಚುಕಟ್ಟಾದ ಪ್ರಸ್ತುತಿ, ಲಾಲಿತ್ಯ, ಪ್ರಭುತ್ವ ಮತ್ತು ದೋಷರಹಿತ ನಿರ್ವಹಣೆಯಿಂದ ಕುಮಾರಿ ಮಧುರ ಅವರ ನೃತ್ಯ ಪ್ರದರ್ಶನ ಕಲಾಸಕ್ತರ ಅಪಾರ ಮೆಚ್ಚುಗೆಗೆ ಪಾತ್ರವಾಯಿತು.

ನೃತ್ಯಗಂಗಾ ಪ್ರದರ್ಶಕ ಕಲಾ ಕೇಂದ್ರ, ಬೆಂಗಳೂರು ಇದರ ಕಲಾ ನಿರ್ದೇಶಕಿ ವಿದುಷಿ ರೂಪಶ್ರೀ ಮಧುಸೂದನ್ ಅವರು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿದ್ದರು. ವಿದುಷಿ ಶಾರದಾ ರಾಮನಾಥ್, ಡಾ. ಎಚ್.ಆರ್. ನಂದಿನಿ ದೇವಿ, ಕಲಾಯೋಗಿ ಗುರು ಕೆ.ಪಿ.ಸತೀಶ್‌ಬಾಬು ಮತ್ತು ಗುರು ವಿದ್ವಾನ್ ಕೆ.ಆರ್. ಹರೀಶ್ ರಾಮನ್ ಈ ಶುಭ ಸಂದರ್ಭದಲ್ಲಿ ಉಪ ಸ್ಥಿತರಿದ್ದರು.

ನಟ್ಟುವಾಂಗಂನಲ್ಲಿ ವಿದುಷಿ ಗುಣವತಿ ಕೆ.ಆರ್., ಗಾಯನದಲ್ಲಿ ವಿದ್ವಾನ್ ರೋಹಿತ್ ಭಟ್ ಉಪ್ಪೂರ್, ಮೃದಂಗಂ ನಲ್ಲಿ ವಿದ್ವಾನ್ ಕಾತಿಕ್ ವ್ಯಾಥಾತ್ರಿ, ಕೊಳಲಿನಲ್ಲಿ ವಿದ್ವಾನ್ ಜಯರಾಮನ್ ಮತ್ತು ರಿದಂ ಪ್ಯಾಡ್‌ನಲ್ಲಿ ವಿದ್ವಾನ್ ಡಿ. ಅರುಣ್ ಕುಮಾರ್ ಅವರಿಗೆ ಅತ್ಯುತ್ತಮವಾಗಿ ಸಹಕರಿಸಿದರು.

ಸ್ಪರ್ಧಾತ್ಮಕ ಪರೀಕ್ಷೆ ಯಶಸ್ಸಿಗೆ ನಿರಂತರ ಪ್ರಯತ್ನ ಅಗತ್ಯ: ಡಿ.ಸಿ ಪೂವಿತಾ ಅಭಿಮತ

ರಾಯಚೂರು, ನ. 7: ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ನಿರಂತರ ಅಧ್ಯಯನ, ಆತ್ಮವಿಶ್ವಾಸ, ಕಠಿಣ ಪರಿಶ್ರಮ ಹಾಗೂ ಸ್ವಯಂ ಪ್ರೇರಣೆ ಅಗತ್ಯ. ಜಿಲ್ಲೆಯ ಯುವಜನರು ಸರ್ಕಾರಿ ಹುದ್ದೆಗೇರುವ ಮೂಲಕ ಜಿಲ್ಲೆಯ ಆಡಳಿತ ಮತ್ತು ಅಭಿವೃದ್ಧಿಗೆ ತಮ್ಮದೇ ಕೊಡುಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ರಾಯಚೂರು ಮಹತ್ವಾಕಾಂಕ್ಷಿ ಜಿಲ್ಲೆಯಾಗಿದ್ದು, ಅಭಿವೃದ್ಧಿಗೆ ಸರ್ಕಾರದ ಯೋಜನೆಗಳು, ಅನುದಾನ ಹಾಗೂ ಮೂಲಸೌಕರ್ಯ ಮಾತ್ರ ಸಾಕಾಗುವುದಿಲ್ಲ. ಇಲ್ಲಿನ ಯುವಜನರು ಉದ್ಯೋಗಗಳನ್ನು ಪಡೆದು ಸ್ವಾವಲಂಬಿಗಳಾಗಬೇಕು. ಉದ್ಯಮಗಳನ್ನು ಸ್ಥಾಪಿಸಿ ಇತರರಿಗೂ ಉದ್ಯೋಗಾವಕಾಶ ಕಲ್ಪಿಸುವ ಮಟ್ಟಕ್ಕೆ ಬೆಳೆಯಬೇಕು. ಯುವಜನರ ಆದಾಯ ಹಾಗೂ ಸಮಾಜಕ್ಕೆ ನೀಡುವ ಕೊಡುಗೆಯಿಂದ ಜಿಲ್ಲೆಯ ಆರ್ಥಿಕ ಅಭಿವೃದ್ಧಿಗೆ ವೇಗ ದೊರೆಯಲಿದೆ ಎಂದರು.

ಎರಡು ವರ್ಷಗಳಿಂದ ಇಂತಹ ತರಬೇತಿ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಮುಂದುವರಿಸುವ ಉದ್ದೇಶವಿದೆ. ತರಬೇತಿಯಲ್ಲಿ ಏನು ಓದಬೇಕು, ಹೇಗೆ ಓದಬೇಕು ಎಂಬುದರ ಕುರಿತು ಮಾರ್ಗದರ್ಶನ ನೀಡಬಹುದು. ಆದರೆ ಓದಿ ಪರಿಶ್ರಮಿಸುವ ಜವಾಬ್ದಾರಿ ಅಭ್ಯರ್ಥಿಗಳದ್ದೇ. ಹೊರಗಿನಿಂದ ಸಿಗುವ ಪ್ರೇರಣೆ ತಾತ್ಕಾಲಿಕವಾಗಿದ್ದು, ಗುರಿ ಸಾಧಿಸಲು ಸ್ವಯಂಪ್ರೇರಣೆ, ಆತ್ಮವಿಶ್ವಾಸ ಹಾಗೂ ನಿರಂತರ ಪ್ರಯತ್ನ ಮುಖ್ಯ ಎಂದು ತಿಳಿಸಿದರು.



ರಾಯಚೂರಿನ ಜಿಲ್ಲಾ ಕೇಂದ್ರ ಗ್ರಂಥಾಲಯ ಆವರಣದಲ್ಲಿ ಜಿಲ್ಲಾಡಳಿತ, ಜಿ.ಪಂ ಹಾಗೂ ರಾಯಚೂರು ಮಹಾನಗರ ಪಾಲಿಕೆ ಆಶ್ರಯದಲ್ಲಿ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ಪೂರ್ವಸಿದ್ಧತಾ ತರಬೇತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಪೂವಿತಾ ಎಸ್ ಮಾತನಾಡಿದರು.

ಯುಪಿಎಸ್‌ಸಿ ಪರೀಕ್ಷೆಯ ಮೊದಲ ಪ್ರಯತ್ನದಲ್ಲಿ ನನಗೆ ಪ್ರಿಲಿಮ್ಸ್‌ನಲ್ಲಿಯೇ ಉತ್ತೀರ್ಣರಾಗಲು ಸಾಧ್ಯವಾಗಿರಲಿಲ್ಲ. ಕೋಚಿಂಗ್‌ಗೆ ಸೇರಿದಾಗ ಹಲವು ವರ್ಷಗಳಿಂದ ಸಿದ್ಧತೆ ನಡೆಸುತ್ತಿದ್ದ ಅಭ್ಯರ್ಥಿಗಳ ನಡುವೆ ಆತ್ಮವಿಶ್ವಾಸದ ಕೊರತೆ ಎದುರಾಗಿತ್ತು. ಉದ್ಯೋಗ ತೊರೆದು ಪರೀಕ್ಷೆಗೆ ಸಿದ್ಧತೆ ನಡೆಸುತ್ತಿದ್ದ ಸಂದರ್ಭದಲ್ಲಿ ತಪ್ಪು ನಿರ್ಧಾರ ಕೈಗೊಂಡೆನೇ ಎಂಬ ಅನುಮಾನವೂ ಮೂಡಿತ್ತು. ಆದರೆ ಗುರಿಯತ್ತ ದೃಢನಿಶ್ಚಯದಿಂದ ಸಾಗಿದ ಪರಿಣಾಮ 4ನೇ ಪ್ರಯತ್ನದಲ್ಲಿ ಐಎಎಸ್ ಸಾಧಿಸಲು ಸಾಧ್ಯವಾಯಿತು ಎಂದರು.

ಮದುವೆ ಸೇರಿದಂತೆ ಕುಟುಂಬದಿಂದ ಬಂದ ಒತ್ತಡಗಳ ನಡುವೆಯೂ ನನ್ನ ಗುರಿಯಿಂದ ಹಿಂದೆ ಸರಿಯಲಿಲ್ಲ. ರೈಲ್ವೆ ಇಲಾಖೆಯಲ್ಲಿ ಉದ್ಯೋಗ ದೊರೆತ ಬಳಿಕವೂ ಐಎಎಸ್ ಆಗಬೇಕೆಂಬ ಸಂಕಲ್ಪವನ್ನು ಮುಂದುವರಿಸಿದೆ. ಒಂದು ಕಾಲದಲ್ಲಿ ಹೆಣ್ಣುಮಕ್ಕಳು ಉನ್ನತ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುವುದನ್ನು ವಿರೋಧಿಸುತ್ತಿದ್ದವರೇ ಇಂದು ತಮ್ಮ ಮಕ್ಕಳಿಗೆ ಯುಪಿಎಸ್‌ಸಿ ಪರೀಕ್ಷೆಯ ಸಿದ್ಧತೆ ಕುರಿತು ಮಾರ್ಗದರ್ಶನ ಕೇಳುತ್ತಿರುವುದು ಬದಲಾವಣೆಯ ಸಂಕೇತವಾಗಿದ. ಒಬ್ಬ ಅಭ್ಯರ್ಥಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿದರೆ, ಆತನನ್ನು ನೋಡಿ ಕನಿಷ್ಠ ಹತ್ತು ಯುವಕ–ಯುವತಿಯರಾದರೂ ಪ್ರೇರಣೆ ಪಡೆದು ಪರೀಕ್ಷೆಗಳಿಗೆ ಸಿದ್ಧತೆ ಆರಂಭಿಸುವಂತಾಗಬೇಕು. ಯುಪಿಎಸ್‌ಸಿ, ಕೆಪಿಎಸ್‌ಸಿ ಮಾತ್ರವಲ್ಲದೆ ಬ್ಯಾಂಕಿಂಗ್, ನಬಾರ್ಡ್, ಸಿಬ್ಬಂದಿ ಆಯ್ಕೆ ಆಯೋಗ ಸೇರಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ನೇಮಕಾತಿ ಪರೀಕ್ಷೆಗಳಿಗೂ ಅಭ್ಯರ್ಥಿಗಳು ಸಿದ್ಧರಾಗಬೇಕು ಎಂದರು.

ಪರೀಕ್ಷೆಗಳನ್ನು ಪದೇಪದೇ ಬರೆಯುವುದರಿಂದ ಪರೀಕ್ಷಾ ಭಯ ಕಡಿಮೆ ಆಗುವುದರ ಜತೆಗೆ ಸಮಯ ನಿರ್ವಹಣೆ, ಪ್ರಶ್ನೆಗಳನ್ನು ಅರ್ಥ ಮಾಡಿಕೊಳ್ಳುವ ಸಾಮರ್ಥ್ಯ ಹಾಗೂ ತಮ್ಮ ಸಾಮರ್ಥ್ಯ–ದೌರ್ಬಲ್ಯ ಗುರುತಿಸಲು ಸಾಧ್ಯವಾಗುತ್ತದೆ. ಗುರಿ ಆಧಾರಿತ ಸಿದ್ಧತೆ ನಡೆಸಿ, ನಂತರವೂ ಪ್ರಚಲಿತ ವಿದ್ಯಮಾನಗಳ ಜ್ಞಾನವನ್ನು ನಿರಂತರವಾಗಿಸಿಕೊಳ್ಳಬೇಕು. ಹಲವು ವರ್ಷಗಳ ಕಾಲ ಉದ್ಯೋಗದ ಅವಕಾಶಗಳನ್ನು ಕಡೆಗಣಿಸಿ ಕೇವಲ ಪರೀಕ್ಷಾ ಸಿದ್ಧತೆಯಲ್ಲಿಯೇ ಮುಳುಗಿರಬಾರದು ಎಂದು ಕಿವಿಮಾತು ಹೇಳಿದರು.

ಪ್ರತಿದಿನ 12ರಿಂದ 13 ತಾಸು ಅಧ್ಯಯನ ಮಾಡುತ್ತಿದ್ದೆ. ಆದರೆ ಎಲ್ಲರೂ ಒಂದೇ ರೀತಿಯ ಅಧ್ಯಯನ ವಿಧಾನ ಅನುಸರಿಸಬೇಕಿಲ್ಲ. ಪ್ರತಿಯೊಬ್ಬರೂ ತಮ್ಮ ಸಾಮರ್ಥ್ಯ ಹಾಗೂ ಅನುಕೂಲಕ್ಕೆ ತಕ್ಕಂತೆ ವೇಳಾಪಟ್ಟಿ ರೂಪಿಸಿಕೊಂಡು ಓದಿನಲ್ಲಿ ನಿರಂತರತೆ ಕಾಯ್ದುಕೊಳ್ಳಬೇಕು ಎಂದರು.

ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಾಪಾತ್ರ ಮಾತನಾಡಿ, ನಿಜವಾದ ಕನಸು ಮನುಷ್ಯನನ್ನು ನಿದ್ರಿಸಲು ಬಿಡುವುದಿಲ್ಲ ಎಂಬ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಮಾತಿನಂತೆ, ಗುರಿ ಸಾಧಿಸುವವರೆಗೆ ನಿರಂತರ ಪ್ರಯತ್ನಿಸಬೇಕು. ಸರ್ಕಾರಿ ಉದ್ಯೋಗಕ್ಕೆ ತೀವ್ರ ಪೈಪೋಟಿ ಇರುವುದರಿಂದ ವೈಯಕ್ತಿಕ ಆಸೆ–ಆಕಾಂಕ್ಷೆಗಳನ್ನು ಕೆಲಕಾಲ ಬದಿಗಿಟ್ಟು ಸಮರ್ಪಣಾ ಭಾವದಿಂದ ಅಧ್ಯಯನ ಮಾಡಬೇಕು. ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್ ಮಾತನಾಡಿ, ಕಲ್ಯಾಣದ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆಗಾಗಿ ಹಿಂದೆ ಧಾರವಾಡ, ಬೆಂಗಳೂರು ಅಥವಾ ಹೈದರಾಬಾದ್‌ಗೆ ತೆರಳಬೇಕಾಗುತ್ತಿತ್ತು. ಇದೀಗ ಜಿಲ್ಲಾಡಳಿತವೇ ಉಚಿತ ತರಬೇತಿ ಹಾಗೂ ಅಗತ್ಯ ಸೌಲಭ್ಯ ಒದಗಿಸುತ್ತಿದೆ. ಅಭ್ಯರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕು. ಸ್ವಯಂ ಪ್ರೇರಣೆಯಿಂದ ಅಧ್ಯಯನ ನಡೆಸಿದರೆ ಓದು ಎಂದಿಗೂ ಬೇಸರವಾಗುವುದಿಲ್ಲ. ತಹಶೀಲ್ದಾರ್ ಸುರೇಶ ವರ್ಮಾ ಮಾತನಾಡಿ, ಜ್ಞಾನ ಹಾಗೂ ನಿರಂತರ ಅಧ್ಯಯನವೇ ಯಶಸ್ಸಿನ ಆಧಾರ. ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಸೂಕ್ತ ರೀತಿಯಲ್ಲಿ ಬಳಸಿಕೊಳ್ಳಲು ಇಂತಹ ತರಬೇತಿ ಕಾರ್ಯಕ್ರಮಗಳು ಸಹಕಾರಿಯಾಗಲಿವೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಮುಖ್ಯ ಗ್ರಂಥಾಲಯ ಅಧಿಕಾರಿ ಸಿದ್ಧಾರ್ಥ ಭಾವಿಕಟ್ಟಿ, ತರಬೇತಿ ವಿಷಯ ತಜ್ಞ ನಂಜಣ್ಣ ನಾಯಕ, ನಗರ ಕೇಂದ್ರ ಗ್ರಂಥಾಲಯ ಅಧಿಕಾರಿ ನಿರ್ಮಲಾ, ವಿಶೇಷ ಕಾರ್ಯಕ್ರಮ ಅಧಿಕಾರಿ ಮೊಹಮ್ಮದ್ ಯೂಸುಫ್, ವಿದ್ಯಾರ್ಥಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

ಶ್ವೇತಭವನದಲ್ಲಿ ಟ್ರಂಪ್ ದೀಪಾವಳಿ ಸಂಭ್ರಮ ಹನುಮಾನ್ ಚಾಲೀಸಾ ಉಡುಗೊರೆ

ವಾಷಿಂಗ್ಟನ್,ನ.7: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಶುಕ್ರವಾರ ಶ್ವೇತಭವನದಲ್ಲಿ ದೀಪಾವಳಿ ಆಚರಣೆಯಲ್ಲಿ ಪಾಲ್ಗೊಂಡು ದೀಪ ಬೆಳಗಿಸಿದರು. ಭಾರತೀಯ ಮೂಲದ ಗಣ್ಯರ ಸಮ್ಮುಖದಲ್ಲಿ ನಡೆದ ಈ ಸಂಭ್ರಮಾಚರಣೆಯಲ್ಲಿ ಭಾರತೀಯ ಸಂಸ್ಕೃತಿಯ ಸೊಗಡು ಮೇಳೈಸಿತು.

ಅಮೆರಿಕದಲ್ಲಿರುವ ಭಾರತೀಯ ಸಮುದಾಯದ ಪ್ರಮುಖರು ಶ್ವೇತಭವನದ ಓವಲ್ ಕಚೇರಿಯಲ್ಲಿ ನಡೆದ ದೀಪಾವಳಿ ಆಚರಣೆಯಲ್ಲಿ ಭಾಗವಹಿಸಿದ್ದರು. ಅಮೆರಿಕದಲ್ಲಿನ ಭಾರತದ ರಾಯಭಾರಿ ವಿನಯ್ ಮೋಹನ್ ಕ್ವಾತ್ರಾ, ಎಫ್‌ಬಿಐ ನಿರ್ದೇಶಕ ಕಾಶ್ ಪಟೇಲ್, ಖ್ಯಾತ ಬಾಣಸಿಗ ವಿಕಾಸ್ ಖನ್ನಾ, ಉದ್ಯಮಿ ವಿಶಾಲ್ ಗೋಂಡಾಲ್, ಐಬಿಎಂ ಸಿಇಒ ಅರವಿಂದ್ ಕೃಷ್ಣ ಹಾಗೂ ಅಮೆರಿಕದ ರಾಷ್ಟ್ರೀಯ ಆರೋಗ್ಯ ಸಂಸ್ಥೆಗಳ ನಿರ್ದೇಶಕ ಜಯ್ ಭಟ್ಟಾಚಾರ್ಯ ಸೇರಿದಂತೆ ಹಲವು ಗಣ್ಯರು ಹಾಜರಿದ್ದರು.




ಟ್ರಂಪ್‌ಗೆ ಹನುಮಾನ್ ಚಾಲೀಸಾ ಉಡುಗೊರೆ

ಶ್ವೇತಭವನದ ದೀಪಾವಳಿ ಆಚರಣೆಯಲ್ಲಿ ಪಾಲ್ಗೊಂಡ ಭಾರತೀಯ ಉದ್ಯಮಿ ಹಾಗೂ ಜಿ ಓಕ್ಯೂಐ ಸ್ಥಾಪಕ ವಿಶಾಲ್ ಗೊಂಡಾಲ್, ಟ್ರಂಪ್‌ಗೆ ತುಳಸಿದಾಸರ ಹನುಮಾನ್ ಚಾಲೀಸಾ ಪ್ರತಿಯನ್ನು ಉಡುಗೊರೆಯಾಗಿ ನೀಡಿದರು. ಈ ಕುರಿತು ಶನಿವಾರ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಗೋಂಡಾಲ್, 'ಓವಲ್ ಕಚೇರಿಯಲ್ಲಿ ಬೆಳಕಿನ ಹಂಚಿಕೆಯ ಕ್ಷಣ' ಎಂದು ಸಂಭ್ರಮ ಬಣ್ಣಿಸಿದ್ದಾರೆ. 'ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದೀಪಾವಳಿ ಆಚರಿಸಿದ್ದು ಗೌರವದ ಸಂಗತಿ. ಲಕ್ಷಾಂತರ ಮಂದಿ ಧೈರ್ಯ, ಭಕ್ತಿ ಮತ್ತು ಶಕ್ತಿಗಾಗಿ ಪಠಿಸುವ ತುಳಸಿದಾಸರ ಹನುಮಾನ್ ಚಾಲೀಸಾ ಪ್ರತಿಯನ್ನು ಅವರಿಗೆ ನೀಡಿದ್ದು ಹೆಮ್ಮೆಯ ಕ್ಷಣ' ಎಂದು ಅವರು ತಿಳಿಸಿದ್ದಾರೆ.

ಭಾರತ–ಅಮೆರಿಕ ಸ್ನೇಹಕ್ಕಾಗಿ ಪ್ರಾರ್ಥನೆ: ದೀಪ ಬೆಳಗಿಸುವ ಸಂದರ್ಭದಲ್ಲಿ ಭಾರತ ಮತ್ತು ಅಮೆರಿಕ ನಡುವಿನ ಸ್ನೇಹ ಮತ್ತಷ್ಟು ಬಲಗೊಳ್ಳಲಿ ಹಾಗೂ ಕತ್ತಲೆಯ ಮೇಲೆ ಬೆಳಕು ಜಯ ಸಾಧಿಸಲಿ ಎಂದು ಪ್ರಾರ್ಥಿಸಿದ್ದಾಗಿ ಗೊಂಡಾಲ್ ಹೇಳಿದ್ದಾರೆ.

'ಜುಗ್ ಜುಗ್ ಜಿಯೋ' ಆಶೀರ್ವಾದ: ಭಾರತೀಯ ಸಂಪ್ರದಾಯದ 'ಜುಗ್ ಜುಗ್ ಜಿಯೋ' ಎಂಬ ಆಶೀರ್ವಾದವನ್ನೂ ಗೋಂಡಾಲ್ ಹಂಚಿಕೊಂಡಿದ್ದಾರೆ. 'ಜುಗ್ ಜುಗ್ ಜಿಯೋ ಎಂದರೆ ಯುಗಯುಗಗಳ ಕಾಲ ಬದುಕು ಎಂಬ ಅರ್ಥ. ಶಾಂತಿ, ಸಮೃದ್ಧಿ, ಉತ್ತಮ ಆರೋಗ್ಯ ಮತ್ತು ದೀರ್ಘಾಯುಷ್ಯ ಎಲ್ಲರಿಗೂ ದೊರೆಯಲಿ ಎಂಬ ಆಶಯ ಇದರ ಹಿಂದಿದೆ. ಜಗತ್ತಿನ ಎಲ್ಲರಿಗೂ ದೀಪಾವಳಿ ಶುಭಾಶಯಗಳು. ಜುಗ್ ಜುಗ್ ಜಿಯೋ' ಎಂದು ಅವರು ಹೇಳಿದ್ದಾರೆ.



260 ಶತ್ರು ವಿಮಾನ ಹೊಡೆದುರುಳಿಸಿದ್ದೇವೆ, 7 ಡ್ರೋನ್ ಜಪ್ತಿ: ಇರಾನ್ ಸೇನೆ

ಟೆಹರಾನ್, ನ.7: ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ಏರೋಸ್ಪೇಸ್ ಪಡೆಯು ತನ್ನ ರಕ್ಷಣಾ ಸಾಮರ್ಥ್ಯದಲ್ಲಿ ಮಹತ್ವದ ಪ್ರಗತಿಯನ್ನು ಸಾಧಿಸಿರುವುದಾಗಿ ಪ್ರತಿಪಾದಿಸಿದ್ದು, ಶತ್ರುಪಡೆಯ 260 ವಿಮಾನಗಳನ್ನು ಹೊಡೆದುರುಳಿಸಿರುವುದಾಗಿ ಮತ್ತು ಏಳು ಗೂಢಚಾರಿ ಡ್ರೋನ್‌ಗಳನ್ನು ಯಾವುದೇ ಹಾನಿಯಿಲ್ಲದೆ ವಶಪಡಿಸಿಕೊಂಡಿರುವುದಾಗಿ ತಿಳಿಸಿದೆ.

ಟೆಹರಾನ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಐಆರ್‌ಜಿಸಿ ವಕ್ತಾರ ಬ್ರಿಗೇಡಿಯರ್ ಜನರಲ್ ಹೊಸೈನ್ ಮೊಹೆಬ್ಬಿ ಈ ವಿಷಯವನ್ನು ಬಹಿರಂಗಪಡಿಸಿದ್ದಾರೆ.

ಸ್ವದೇಶಿ ಬಾಹ್ಯಾಕಾಶ ಮತ್ತು ರಕ್ಷಣಾ ತಂತ್ರಜ್ಞಾನದಲ್ಲಿ ಇರಾನ್ ಕಂಡುಕೊಂಡಿರುವ ಪ್ರಗತಿಯನ್ನು ಎತ್ತಿಹಿಡಿದ ಜನರಲ್ ಮೊಹೆಬ್ಬಿ, ತಮ್ಮ ದೇಶವು ಮಿಲಿಟರಿ ಉಪಕರಣಗಳ ಆಮದುದಾರ ರಾಷ್ಟ್ರದಿಂದ ರಫ್ತುದಾರ ರಾಷ್ಟ್ರವಾಗಿ ಹೊರಹೊಮ್ಮಿದೆ ಎಂದು ತಿಳಿಸಿದ್ದಾರೆ. ಶತ್ರುಪಡೆಗಳ ಬಾಂಬ್ ದಾಳಿಯ ನಡುವೆಯೂ ತಂತ್ರಜ್ಞಾನ ಹಾಗೂ ಭೌಗೋಳಿಕ ಅನುಕೂಲಗಳನ್ನು ಬಳಸಿಕೊಂಡು ನೆಲದಡಿಯಲ್ಲೇ ಬೃಹತ್ ಕ್ಷಿಪಣಿ ಉತ್ಪಾದನಾ ಘಟಕಗಳನ್ನು ನಿರ್ಮಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಕಳೆದ ಎರಡು ವಾರಗಳಲ್ಲಿ ಯಾವುದೇ ಹಾನಿಯಾಗದಂತೆ ಸುಸ್ಥಿತಿಯಲ್ಲೇ ಏಳು 'ಎಂಕ್ಯುಎಂ–170'



ಗೂಢಚಾರಿ ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದ್ದು, ಇದು ಇರಾನ್‌ನ ತಾಂತ್ರಿಕ ಮೇಲುಗೈಗೆ ಸಾಕ್ಷಿಯಾಗಿದೆ ಎಂದು ಅವರು ವಿವರಿಸಿದ್ದಾರೆ.

ಮನೆಯಲ್ಲೇ ಅಭಿವೃದ್ಧಿಪಡಿಸಿದ ವೈಜ್ಞಾನಿಕ ಪರಿಣತಿ, ಸ್ವದೇಶಿ ತಯಾರಿಕೆ ಹಾಗೂ ಮಿಲಿಟರಿ ಉಪಕರಣಗಳಲ್ಲಿ ಸಂಪೂರ್ಣ ಸ್ವಾವಲಂಬನೆ ಎಂಬ ಮೂರು ಪ್ರಮುಖ ತತ್ತ್ವಗಳ ಆಧಾರದ ಮೇಲೆ ಐಆರ್‌ಜಿಸಿ ಮುನ್ನಡೆಯುತ್ತಿದೆ ಎಂದು ವಕ್ತಾರರು ಸ್ಪಷ್ಟಪಡಿಸಿದ್ದಾರೆ. ಈ ಸ್ವಾವಲಂಬನೆಯ ಫಲವಾಗಿ 'ಅರ್ಮಾನ್' ಕ್ಷಿಪಣಿ ಹಾಗೂ 'ಖೋರ್ದಾದ್–3' ವಾಯು ರಕ್ಷಣಾ ವ್ಯವಸ್ಥೆಗಳನ್ನು ಇತರ ದೇಶಗಳಿಗೆ ರಫ್ತು ಮಾಡಲು ಇರಾನ್ ಶಕ್ತವಾಗಿದೆ ಎಂದು ತಿಳಿಸಿರುವ ಅವರು, ಮುಂದಿನ ದಿನಗಳಲ್ಲಿ ಮತ್ತೊಮ್ಮೆ ಸಂಘರ್ಷ ಎದುರಾದರೆ ಶತ್ರುಗಳನ್ನು ದಂಗಾಗಿಸುವಂತಹ ಹೊಸ ತಾಂತ್ರಿಕ ಸಾಮರ್ಥ್ಯವನ್ನು ಜಗತ್ತು ನೋಡಲಿದೆ ಎಂದು ಎಚ್ಚರಿಸಿದ್ದಾರೆ.

ರಷ್ಯಾ–ಉಕ್ರೇನ್ ನಡುವಿನ ಸಂಘರ್ಷ ಪರಿಹಾರದ ನಿಟ್ಟಿನಲ್ಲಿ ಗಮನಾರ್ಹ ಪ್ರಗತಿ ಸಾಧನೆ: ಟ್ರಂಪ್

ವಾಷಿಂಗ್ಟನ್, ನ.7: ರಷ್ಯಾ ಮತ್ತು ಉಕ್ರೇನ್ ಜೊತೆ ಅಮೆರಿಕ ರಚನಾತ್ಮಕವಾಗಿ ತೊಡಗಿಸಿಕೊಂಡಿದ್ದು, ಉಕ್ರೇನ್ ಬಿಕ್ಕಟ್ಟನ್ನು ಬಗೆಹರಿಸುವ ನಿಟ್ಟಿನಲ್ಲಿ ಗಮನಾರ್ಹ ಪ್ರಗತಿ ಸಾಧಿಸುತ್ತಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ.



ಉಕ್ರೇನ್ ಸಂಘರ್ಷವನ್ನು ಬಗೆಹರಿಸುವ ಪ್ರಕ್ರಿಯೆಯ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, "ನಾವು ರಷ್ಯಾ ಮತ್ತು ಉಕ್ರೇನ್ ಜೊತೆ ಉತ್ತಮವಾಗಿ ಕೆಲಸ ಮಾಡುತ್ತಿದ್ದೇವೆ. ನಾವು ಸಾಕಷ್ಟು ಪ್ರಗತಿಯನ್ನು ಸಾಧಿಸುತ್ತಿದ್ದೇವೆ" ಎಂದು ಹೇಳಿದರು. ರಷ್ಯಾ ಮತ್ತು ಉಕ್ರೇನ್ ಪರಿಸ್ಥಿತಿಗೆ ಸಂಬಂಧಿಸಿದಂತೆ ಹಲವು ಸಭೆಗಳು ಮತ್ತು ದೂರವಾಣಿ ಮಾತುಕತೆಗಳು ನಡೆಯಲಿವೆ ಎಂದೂ ಅವರು ಘೋಷಿಸಿದರು. "ರಷ್ಯಾ ಮತ್ತು ಉಕ್ರೇನ್, ಮೊದಲ ಬಾರಿಗೆ (ಸಂಘರ್ಷವನ್ನು) ಬಗೆಹರಿಸಿಕೊಳ್ಳಲು ಬಯಸುತ್ತಿವೆ. ನಮ್ಮ ಸಭೆಗಳು ನಿಗದಿಯಾಗಿವೆ. ಇಂದು ನಾನು ಕೆಲವು ದೂರವಾಣಿ ಕರೆಗಳನ್ನು ಸ್ವೀಕರಿಸಲಿದ್ದೇನೆ, ನಾಳೆಯೂ ಕೆಲವು ಮಾತುಕತೆಗಳಿವೆ" ಎಂದು ಟ್ರಂಪ್ ಸುದ್ದಿಗಾರರಿಗೆ ತಿಳಿಸಿದರು. ಫ್ಲೋರಿಡಾದಲ್ಲಿ ತಮಗೆ ಸಭೆಗಳು ನಿಗದಿಯಾಗಿವೆ ಎಂದು ಅವರು ಹೇಳಿದರು. "

ಮಾರ್–ಎ–ಲಾಗೊ ನಲ್ಲಿ ರಷ್ಯಾ ಮತ್ತು ಇತರ ವಿಷಯಗಳಿಗೆ ಸಂಬಂಧಿಸಿದ ಅನೇಕ ವ್ಯಕ್ತಿಗಳೊಂದಿಗೆ ನಾವು ಸಾಕಷ್ಟು ಸಭೆಗಳನ್ನು ಏರ್ಪಡಿಸಿದ್ದೇವೆ" ಎಂದು ಟ್ರಂಪ್ ಹೇಳಿದರು.

ಐಪಿಎಲ್: ಪಂಜಾಬ್ ಕಿಂಗ್ಸ್ ಸೇರಿದ ಹಾರ್ದಿಕ್, ಶ್ರೇಯಸ್ ನಾಯಕತ್ವ



ನವದೆಹಲಿ, ನ.7: ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ಹರಾಜು ಪ್ರಕ್ರಿಯೆಗೂ ಮುನ್ನವೇ ಸ್ಟಾರ್ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಅವರು ಪಂಜಾಬ್ ಕಿಂಗ್ಸ್ ತಂಡವನ್ನು ಸೇರಿಕೊಂಡಿದ್ದಾರೆ. ಪಂಜಾಬ್ ತಂಡದಲ್ಲಿದ್ದ ವೇಗದ ಬೌಲರ್ ಅರ್ಷದೀಪ್ ಸಿಂಗ್ ಅವರು ಮುಂಬೈ ಇಂಡಿಯನ್ಸ್ ತಂಡ ಸೇರ್ಪಡೆಯಾಗಲಿದ್ದಾರೆ.

ಈ ಮೂಲಕ ಹಾರ್ದಿಕ್ ಪಾಂಡ್ಯ ಅವರು ಮುಂಬೈ ತಂಡದಿಂದ ಹೊರ ಹೋಗುವ ಕುರಿತ ಊಹಾಪೋಹಗಳು ನಿಜವಾಗಿದ್ದು, ಅವರು ಮುಂದಿನ ಐಪಿಎಲ್ ಆವೃತ್ತಿಯಲ್ಲಿ ಹೊಸ ಫ್ರಾಂಚೈಸಿಗೆ ಆಡಲಿದ್ದಾರೆ. ಈ ವಿಷಯವನ್ನು ಐಪಿಎಲ್ ಮೂಲಗಳು ಖಚಿತಪಡಿಸಿವೆ. ಆದರೆ, ಈ ಕುರಿತು ಬಿಸಿಸಿಐ ಇನ್ನೂ ಯಾವುದೇ ಅಧಿಕೃತ ಹೇಳಿಕೆ ನೀಡಿಲ್ಲ.

ಶ್ರೇಯಸ್ ಅಯ್ಯರ್ ನಾಯಕತ್ವದಲ್ಲಿ ಆಡಲು ಪಾಂಡ್ಯ ಒಪ್ಪಿಕೊಂಡಿದ್ದಾರೆ. ಶ್ರೇಯಸ್ ಪಂಜಾಬ್ ಕಿಂಗ್ಸ್ ನಾಯಕರಾಗಿ ಮುಂದುವರಿಯಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಆರಂಭದಿಂದಲೂ ಮುಂಬೈ ತಂಡದಲ್ಲಿದ್ದ ಹಾರ್ದಿಕ್, ನಂತರ ಗುಜರಾತ್ ತಂಡದ ನಾಯಕರಾಗಿದ್ದರು. 2024ರಲ್ಲಿ ಮುಂಬೈ ಇಂಡಿಯನ್ಸ್ ತಂಡಕ್ಕೆ ಮರಳಿದ್ದ ಅವರು, ರೋಹಿತ್ ಶರ್ಮಾ ಬದಲಿಗೆ ತಂಡವನ್ನು ಮುನ್ನಡೆಸಿದ್ದರು. ಆದರೆ, ಕಳೆದ ಮೂರು ಅವೃತ್ತಿಗಳಲ್ಲಿ ಎರಡು ಬಾರಿ ಪ್ಲೇಆಫ್ ಪ್ರವೇಶಿಸುವಲ್ಲಿ ಮುಂಬೈ ವಿಫಲವಾಗಿತ್ತು.

2027ರ ಐಪಿಎಲ್ ಆವೃತ್ತಿಯ ಮಿನಿ ಹರಾಜು ಡಿ.16ರಂದು ಗೋವಾದಲ್ಲಿ ನಡೆಯಲಿದೆ.

ಸೈಯದ್ ಮುಷ್ತಾಕ್‌ಅಲಿ ಟ್ರೋಫಿ: ಬಿಹಾರ ತಂಡಕ್ಕೆ ವೈಭವ್ ಸೂರ್ಯವಂಶಿ ನಾಯಕ

ಮುಂಬೈ, ನ.7: 2026–27ರ ಸೈಯದ್ ಮುಷ್ತಾಕ್ ಅಲಿ ಟ್ರೋಫಿಯ ಆರಂಭಿಕ ಎರಡು ಪಂದ್ಯಗಳಿಗೆ ಬಿಹಾರ ತಂಡದ ನಾಯಕರಾಗಿ 15 ವರ್ಷದ ವೈಭವ್ ಸೂರ್ಯವಂಶಿ ಅವರನ್ನು ನೇಮಿಸಲಾಗಿದೆ. ನವೆಂಬರ್ 14ರಿಂದ ಪ್ರಾರಂಭವಾಗಲಿರುವ ಈ ದೇಶೀಯ ಟಿ20 ಟೂರ್ನಿಯಲ್ಲಿ, 15 ವರ್ಷದ ಪ್ರತಿಭಾವಂತ ಬ್ಯಾಟರ್ ರಾಜ್ಯ ತಂಡವನ್ನು ಮುನ್ನಡೆಸಲಿದ್ದಾರೆ.



ಇಂದೋರ್‌ನಲ್ಲಿ ನಡೆಯಲಿರುವ ಮೊದಲ ಎರಡು ಪಂದ್ಯಗಳಿಗಾಗಿ ಬಿಹಾರ ಕ್ರಿಕೆಟ್ ಅಸೋಸಿಯೇಷನ್ ಆಯ್ಕೆ ಸಮಿತಿಯು 17 ಸದಸ್ಯರ ತಂಡವನ್ನು ಪ್ರಕಟಿಸಿದೆ. ಈ ತಿಂಗಳ ಕೊನೆಯಲ್ಲಿ 'ರೈಸಿಂಗ್ ಸ್ಟಾರ್ಸ್ ಏಷ್ಯಾ ಕಪ್'ಗಾಗಿ 'ಇಂಡಿಯಾ ಎ' ತಂಡವನ್ನು ಸೇರಿಕೊಳ್ಳುವ ಮೊದಲು, ಸೂರ್ಯವಂಶಿ ಬಿಹಾರ ತಂಡದ ಪರವಾಗಿ ಆಡುವ ನಿರೀಕ್ಷೆಯಿದೆ.

ಅಂತರರಾಷ್ಟ್ರೀಯ ಮತ್ತು ದೇಶೀಯ ಮಟ್ಟದಲ್ಲಿ ಈಗಾಗಲೇ ತಮ್ಮ ಛಾಪು ಮೂಡಿಸಿರುವ ಆಟಗಾರನೊಬ್ಬನಿಗೆ ಇದೊಂದು ಮಹತ್ವದ ಜವಾಬ್ದಾರಿಯಾಗಿದೆ. ಕಳೆದ ಆವೃತ್ತಿಯಲ್ಲಿ, ಬಿಹಾರದ ರಣಜಿ ಟ್ರೋಫಿ ತಂಡದ ಮೊದಲ ಎರಡು ಪಂದ್ಯಗಳಿಗೆ ಸಕೀಬುಲ್ ಗನಿ ನಾಯಕರಾಗಿದ್ದರೆ, ಸೂರ್ಯವಂಶಿ ಅವರನ್ನು ಉಪನಾಯಕರನ್ನಾಗಿ ನೇಮಿಸಲಾಗಿತ್ತು. ಅವರು 2024ರ ಜನವರಿಯಲ್ಲಿ ಮುಂಬೈ ವಿರುದ್ಧದ ಪಂದ್ಯದ ಮೂಲಕ, ಕೇವಲ 12ನೇ ವಯಸ್ಸಿನಲ್ಲಿ ಬಿಹಾರ ಪರ ಪ್ರಥಮ ದರ್ಜೆ ಕ್ರಿಕೆಟ್‌ಗೆ ಪದಾರ್ಪಣೆ ಮಾಡಿದ್ದರು.

ಸೂರ್ಯವಂಶಿ ಅವರಿಗೆ ವಯೋಮಿತಿ ಕ್ರಿಕೆಟ್‌ನಲ್ಲಿ ನಾಯಕತ್ವದ ಅನುಭವವೂ ಇದೆ. ಜನವರಿಯಲ್ಲಿ ದಕ್ಷಿಣ ಆಫ್ರಿಕಾದಲ್ಲಿ ನಡೆದ ಮೂರು ಪಂದ್ಯಗಳ ಯೂತ್ ಏಕದಿನ ಸರಣಿಯಲ್ಲಿ, ನಿಯಮಿತ ನಾಯಕ ಆಯುಷ್ ಮ್ಹಾತ್ರೆ ಅವರು ಗಾಯದ ಕಾರಣದಿಂದ ಲಭ್ಯವಿಲ್ಲದಿದ್ದಾಗ, ಸೂರ್ಯವಂಶಿ ಭಾರತದ ಅಂಡರ್–19 ತಂಡದ ನಾಯಕತ್ವ ವಹಿಸಿದ್ದರು. ನಂತರ, ಫೆಬ್ರುವರಿಯಲ್ಲಿ ಅಂಡರ್–19 ವಿಶ್ವಕಪ್ ಗೆದ್ದ ಭಾರತ ತಂಡದ ಭಾಗವಾಗಿಯೂ ಅವರು ಇದ್ದರು; ಆದಾಗ್ಯೂ, ಆ ಟೂರ್ನಿಯಲ್ಲಿ ತಂಡವನ್ನು ಆಯುಷ್ ಮ್ಹಾತ್ರೆ ಮುನ್ನಡೆಸಿದ್ದರು.

ನಾಯಕತ್ವವು ಸೂರ್ಯವಂಶಿಗೆ ಒಬ್ಬ ನಾಯಕನಾಗಿ ಬೆಳೆಯಲು ಅವಕಾಶವನ್ನು ನೀಡುತ್ತದೆ ಎಂದು ಬಿಸಿಎ ಅಧ್ಯಕ್ಷ ಹರ್ಷವರ್ಧನ್ ಹೇಳಿದ್ದಾರೆ. ವೈಭವ್ ಈಗಾಗಲೇ ಚಿಕ್ಕ ವಯಸ್ಸಿನಲ್ಲೇ ಅಪಾರ ಪ್ರತಿಭೆ, ಆತ್ಮವಿಶ್ವಾಸ ಮತ್ತು ಪ್ರಬುದ್ಧತೆಯನ್ನು ಪ್ರದರ್ಶಿಸಿದ್ದಾರೆ. ಅವರ ನಾಯಕತ್ವದಲ್ಲಿ ತಂಡವು ಶಿಸ್ತುಬದ್ಧ ಹಾಗೂ ಸ್ಪರ್ಧಾತ್ಮಕ ಪ್ರದರ್ಶನ ನೀಡಲಿದೆ ಎಂದು ನಾವು ಆಶಿಸುತ್ತೇವೆ' ಎಂದು ಅವರು ಹೇಳಿದರು.

ಬಿಹಾರ ತಂಡವು ದೆಹಲಿ, ಹರಿಯಾಣ, ಜಮ್ಮು ಮತ್ತು ಕಾಶ್ಮೀರ, ಪಂಜಾಬ್, ರೈಲ್ವೇಸ್, ಸೌರಾಷ್ಟ್ರ ಮತ್ತು ತಮಿಳುನಾಡಿನೊಂದಿಗೆ 'ಬಿ' ಗುಂಪಿನಲ್ಲಿದೆ. ಅವರು ನವೆಂಬರ್ 14 ರಂದು ಇಂದೋರ್‌ನಲ್ಲಿ ಸೌರಾಷ್ಟ್ರದ ವಿರುದ್ಧ ತಮ್ಮ ಅಭಿಯಾನವನ್ನು ಪ್ರಾರಂಭಿಸಲಿದ್ದಾರೆ.

ದೇಶ, ಗಡಿ, ಸಮಯ ನೋಡದೆ ದಾಳಿ ಟ್ರಂಪ್ ಬೆದರಿಕೆಗೆ ಇರಾನ್ ಎಚ್ಚರಿಕೆ

ಟೆಹರಾನ್, ನ.7: ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಬೆದರಿಕೆಗಳಿಗೆ ಇರಾನ್ ತಿರುಗೇಟು ನೀಡಿದ್ದು, ಭೌಗೋಳಿಕ ಮಿತಿಗಳಿಲ್ಲದೆ ದಾಳಿ ನಡೆಸುವುದಾಗಿ ಹೊಸ ಎಚ್ಚರಿಕೆ ನೀಡಿದೆ. ಮಧ್ಯಪ್ರಾಚ್ಯದಲ್ಲಿ ದಿನದಿಂದ ದಿನಕ್ಕೆ ಉದ್ವಿಗ್ನತೆ ಹೆಚ್ಚಾಗುತ್ತಿದ್ದು, ಅಮೆರಿಕ ಮತ್ತು ಇರಾನ್ ನಡುವಿನ ಬಿಕ್ಕಟ್ಟು ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿದೆ.

ದೇಶದ ಉನ್ನತ ನಾಯಕನ ಕಮಾಂಡ್ ಅಡಿಯಲ್ಲಿ ಇರಾನ್ ಸಶಸ್ತ್ರ ಪಡೆಗಳು ಯಾವುದೇ ವಿಳಂಬವಿಲ್ಲದೆ, ಅತ್ಯಂತ ಪರಿಣಾಮಕಾರಿಯಾಗಿ ಮತ್ತು ಭೌಗೋಳಿಕ ಗಡಿಗಳ ಹಂಗಿಲ್ಲದೆ ಪ್ರತಿದಾಳಿ ನಡೆಸಲಿವೆ ಎಂದು ಇರಾನ್ ಸೇನಾ ಜನರಲ್ ಸ್ಪಷ್ಟಪಡಿಸಿದ್ದಾರೆ. ಟ್ರಂಪ್ ಆಡಳಿತವು ಇರಾನ್‌ನ ಏಳು ಪ್ರಮುಖ ಶರತ್ತುಗಳಿಗೆ ಒಪ್ಪಿಗೆ ಸೂಚಿಸಿದರೆ ಮಾತ್ರ ಕಾರ್ಯತಂತ್ರವಾಗಿ ಪ್ರಮುಖವಾಗಿರುವ ಹಾರ್ಮುಜ್ ಜಲಸಂಧಿಯನ್ನು ನೌಕಾಸಂಚಾರಕ್ಕಾಗಿ ಮರು ತೆರೆಯಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಿದ್ದಾರೆ.

ಮತ್ತೊಂದೆಡೆ, ತಾವೇನಾದರೂ ಇರಾನ್ ಅನ್ನು ಪರಮಾಣು ಅಸ್ತ್ರಗಳನ್ನು ಅಭಿವೃದ್ಧಿಪಡಿಸುವುದರಿಂದ ತಡೆಯದಿದ್ದಲ್ಲಿ ಇಸ್ರೇಲ್ ಹಾಗೂ ಇಡೀ ಮಧ್ಯಪ್ರಾಚ್ಯ ಪ್ರದೇಶವೇ ಭೂಪಟದಲ್ಲಿ ಉಳಿಯುತ್ತಿರಲಿಲ್ಲ ಎಂದು



ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ. ಇರಾನ್ ಪರಮಾಣು ಸಾಮಗ್ರಿಯನ್ನು ಸಂಪೂರ್ಣವಾಗಿ ಶರಣಾಗತಿ ಮಾಡಬೇಕೆಂದು ಯುಎಸ್ ಅಧಿಕಾರಿಗಳು ಒತ್ತಡ ಹೇರುತ್ತಿದ್ದಾರೆ. ಇದರ ಬೆನ್ನಲ್ಲೇ ಅಮೆರಿಕವು ಇರಾನ್ ಮೇಲೆ ಸೀಮಿತ ದಾಳಿಗಳನ್ನು ಕೂಡ ನಡೆಸಿದೆ.

ಮಧ್ಯಪ್ರಾಚ್ಯ ರಾಜಕಾರಣ ಹಾಗೂ ಯುದ್ಧದ ಪರಿಸ್ಥಿತಿಯ ಈ ಬೆಳವಣಿಗೆಗಳು ಜಾಗತಿಕ ಮಟ್ಟದಲ್ಲಿ ತೀವ್ರ ಕಳಕಳಿಯನ್ನುಂಟು ಮಾಡಿದ್ದು, ಇರಾನ್ ಹಾಗೂ ಅಮೆರಿಕ–ಇಸ್ರೇಲ್ ಮೈತ್ರಿಕೂಟದ ನಡುವಿನ ಈ ನೇರ ಸಂಘರ್ಷವು ಅಂತಾರಾಷ್ಟ್ರೀಯ ಶಾಂತಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ.

ನ್ಯೂಜಿಲೆಂಡ್ ವಿರುದ್ಧ ಭಾರತಕ್ಕೆ 4 ರನ್ ಜಯ

ವೆಲ್ಲಿಂಗ್ಟನ್, ನ.7: ಶನಿವಾರ ಇಲ್ಲಿ ಮಳೆಯಿಂದಾಗಿ ಆಟಕ್ಕೆ ಅಡ್ಡಿಯುಂಟಾದ ನಂತರ, ಡಕ್‌ವರ್ತ್/ಲೂಯಿಸ್ (ಡಿಎಲ್‌ಎಸ್) ನಿಯಮದ ಅನ್ವಯ ಭಾರತವು ನ್ಯೂಜಿಲೆಂಡ್ ವಿರುದ್ಧ ನಾಲ್ಕು ರನ್‌ಗಳ ರೋಚಕ ಜಯ ಸಾಧಿಸಿತು.

ಮಳೆಯಿಂದ ಆಟ ರದ್ದಾದಾಗ, ಭಾರತವು 26 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 113 ರನ್ ಗಳಿಸಿತ್ತು ಮತ್ತು ಗೆಲ್ಲಲು 66 ಎಸೆತಗಳಲ್ಲಿ 22 ರನ್‌ಗಳ ಅಗತ್ಯವಿತ್ತು. ನಂತರ ಡಿಎಲ್‌ಎಸ್ ನಿಯಮದ ಅನ್ವಯ ಭಾರತ ಜಯ ಸಾಧಿಸಿತು.

ವೆಲ್ಲಿಂಗ್ಟನ್‌ನಲ್ಲಿ ನಡೆದ ಪಂದ್ಯದಲ್ಲಿ, ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ತಂಡವು ಕಳಪೆ ಪ್ರದರ್ಶನ ನೀಡಿ ಕೇವಲ 134 ರನ್‌ಗಳಿಗೆ ಆಲೌಟ್ ಆಯಿತು. ಈ ವೇಳೆ ಗುರ್ನೂರ್ ಬ್ರಾರ್ 10 ಓವರ್‌ಗಳಲ್ಲಿ 30 ರನ್ ನೀಡಿ ನಾಲ್ಕು ವಿಕೆಟ್‌ಗಳನ್ನು ಕಬಳಿಸುವ ಮೂಲಕ ಕಿವೀಸ್ ಬ್ಯಾಟರ್‌ಗಳ ವಿರುದ್ಧ ಮೇಲುಗೈ ಸಾಧಿಸಿದರು.



ನ್ಯೂಜಿಲೆಂಡ್ ಪರ ಡೇರಿಲ್ ಮಿಚೆಲ್ 104 ಎಸೆತಗಳಲ್ಲಿ 55 ರನ್ ಗಳಿಸಿ ತಂಡದ ಪರ ಗರಿಷ್ಠ ಸ್ಕೋರರ್ ಎನಿಸಿಕೊಂಡರು. ನಾಯಕ ಮಿಚೆಲ್ ಸ್ಯಾಂಟ್ನರ್ 38 ಎಸೆತಗಳಲ್ಲಿ 31 ರನ್ ಮತ್ತು ಹೆನ್ರಿ ನಿಕೋಲಸ್ 11 ರನ್ ಗಳಿಸಿದ್ದು ಬಿಟ್ಟರೆ ಬೇರೆ ಯಾವೊಬ್ಬ ಬ್ಯಾಟರ್ ಎರಡಂಕಿಯ ರನ್ ಗಳಿಸಲು ಸಾಧ್ಯವಾಗಲಿಲ್ಲ. ಅಂತಿಮವಾಗಿ ನ್ಯೂಜಿಲೆಂಡ್ 41 ಓವರ್‌ಗಳಲ್ಲಿ 134 ರನ್‌ಗಳಿಗೆ ಆಲೌಟ್ ಮಾಡಿದೆ. ಇದಕ್ಕೆ ಪ್ರತಿಯಾಗಿ, ಭಾರತವು ಅತ್ಯಂತ ಕಳಪೆ ಆರಂಭವನ್ನು ಪಡೆಯಿತು; ನಾಯಕ ಶುಭಮನ್ ಗಿಲ್ ಮೊದಲ ಎಸೆತದಲ್ಲೇ (ಗೋಲ್ಡನ್ ಡಕ್) ಔಟಾದರು ಮತ್ತು ವಿರಾಟ್ ಕೊಹ್ಲಿ 7 ರನ್‌ಗಳಿಗೆ ವಿಕೆಟ್ ಒಪ್ಪಿಸಿದರು. ನಿಯಮಿತ ಅಂತರದಲ್ಲಿ ವಿಕೆಟ್‌ಗಳು ಬೀಳುತ್ತಿದ್ದರೂ, ರೋಹಿತ್ ಶರ್ಮಾ (23), ಶ್ರೇಯಸ್ ಅಯ್ಯರ್ (30) ಮತ್ತು ಕೆಎಲ್ ರಾಹುಲ್ (26*) ಅವರ ಕೊಡುಗೆಗಳಿಂದಾಗಿ, ಭಾರತವು 26 ಓವರ್‌ಗಳಲ್ಲಿ 113/7 ರನ್ ತಲುಪಿದ್ದಾಗ ಮತ್ತೆ ಮಳೆ ಸುರಿಯಲಾರಂಭಿಸಿತು.

ಮಳೆಯ ಕಾರಣದಿಂದಾಗಿ ಆಟಕ್ಕೆ ದೀರ್ಘಕಾಲ ಅಡಚಣೆ ಉಂಟಾದ ಹಿನ್ನೆಲೆಯಲ್ಲಿ, ಪಂದ್ಯವನ್ನು ಪ್ರತಿ ತಂಡಕ್ಕೆ 47 ಓವರ್‌ಗಳಿಗೆ ಸೀಮಿತಗೊಳಿಸಲಾಗಿತ್ತು.

ಐದು ಪಂದ್ಯಗಳ ಸರಣಿಯ ಮೊದಲ ಏಕದಿನ ಪಂದ್ಯವನ್ನು ಭಾರತವು ಐದು ವಿಕೆಟ್‌ಗಳಿಂದ ಗೆದ್ದುಕೊಂಡಿದ್ದು, ಇದೀಗ ಭಾರತ ಸರಣಿಯಲ್ಲಿ 2–0 ಅಂತರದ ಮುನ್ನಡೆ ಸಾಧಿಸಿದೆ.

ಬಾಂಗ್ಲಾದೇಶದಲ್ಲಿ ರವೀಂದ್ರನಾಥರ ಭಾವಚಿತ್ರ ವಿಕೃತಗೊಳಿಸಿದ ಕಿಡಿಗೇಡಿಗಳು

ಢಾಕಾ, ನ.7: ಬಾಂಗ್ಲಾದೇಶದ ಖುಲ್ನಾದಲ್ಲಿ ನೋಬೆಲ್ ಪ್ರಶಸ್ತಿ ವಿಜೇತ ಕವಿ ರವೀಂದ್ರನಾಥ ಠಾಗೋರ್ ಅವರ ಭಿತ್ತಿಚಿತ್ರಕ್ಕೆ ದುಷ್ಕರ್ಮಿಗಳು ಮಸಿ ಬಳಿದು ವಿಕೃತಿ ಮೆರೆದಿರುವ ಘಟನೆ ನಡೆದಿದೆ. ಇದು ಸ್ಥಳೀಯವಾಗಿ ಭಾರಿ ಆಕ್ರೋಶಕ್ಕೆ ಕಾರಣವಾಗಿದೆ. ಖುಲ್ನಾ ರೈಲ್ವೆ ನಿಲ್ದಾಣದ ಕಾಂಪೌಂಡ್ ಗೋಡೆಯ ಮೇಲೆ ಈ ಪ್ರದೇಶದ ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಕೊಡುಗೆ ನೀಡಿದ ಪ್ರಮುಖ ಗಣ್ಯರ ಚಿತ್ರಗಳೊಂದಿಗೆ ಠಾಗೋರ್ ಅವರ ಚಿತ್ರವನ್ನೂ ಬಿಡಿಸಲಾಗಿತ್ತು ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಪ್ರಧಾನಮಂತ್ರಿ ತಾರಿಕ್ ರಹಮಾನ್ ಅವರ ಖುಲ್ನಾ ಭೇಟಿಯ ಮುನ್ನಾದಿನದಂದು ಖುಲ್ನಾ ಸಿಟಿ ಕಾರ್ಪೊರೇಷನ್ ಈ ಕಲಾಕೃತಿಗಳನ್ನು ರಚಿಸಿತ್ತು. ಈ ಗೋಡೆಯ ಮೇಲೆ ಫಕೀರ್ ಲಾಲನ್ ಷಾ, ವರ್ಣಚಿತ್ರಕಾರ ಎಸ್.ಎಂ. ಸುಲ್ತಾನ್, ಕಾಜಿ ನಜ್ರುಲ್ ಇಸ್ಲಾಂ, ಮೈಕೆಲ್ ಮಧುಸೂದನ್ ದತ್ತಾ ಹಾಗೂ ಮಾಜಿ ಪ್ರಧಾನಿ ಖಾಲಿದಾ ಜಿಯಾ ಸೇರಿದಂತೆ ಹಲವರ ಚಿತ್ರಗಳನ್ನು ಬಿಡಿಸಲಾಗಿದ್ದು, ಅವುಗಳಿಗೆ ಯಾವುದೇ ಹಾನಿ ಉಂಟಾಗಿಲ್ಲ. ಕೇವಲ ರವೀಂದ್ರನಾಥ ಠಾಗೋರ್ ಅವರ ಭಿತ್ತಿಚಿತ್ರಕ್ಕೆ ಕಪ್ಪು ಮಸಿ ಬಳಿಯಲಾಗಿದ್ದು, ಪಕ್ಕದಲ್ಲಿ "ಮುಸ್ಲಿಮರು ಮತ್ತು ಪೂರ್ವ ಬಂಗಾಳಕ್ಕೆ ವೈರಿಯಾಗಿದ್ದ ಠಾಗೋರ್‌ಗೆ ತಿತುಮೀರ್‌ನ ಬಂಗಾಳದಲ್ಲಿ ಜಾಗವಿಲ್ಲ; ಭಾರತವನ್ನು ಮಹಿಮೆಗೊಳಿಸಲು ಅವಕಾಶವಿಲ್ಲ" ಎಂಬ ಬರಹವುಳ್ಳ ಪೋಸ್ಟರ್‌ಗಳನ್ನು ಅಂಟಿಸಲಾಗಿದೆ.

ಶುಕ್ರವಾರ ಬೆಳಗ್ಗೆ ಈ ಘಟನೆ ಸ್ಥಳೀಯರ ಗಮನಕ್ಕೆ ಬಂದಿದ್ದು, ಖುಲ್ನಾ ಸಾದರ್ ಪೊಲೀಸ್ ಠಾಣೆಯ ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ. ಶುಕ್ರವಾರ ರಸ್ತೆ ಬದಿಯ ಎಲ್ಲಾ ಅಂಗಡಿ ಮುಂಗಟ್ಟುಗಳು ಮುಚ್ಚಿದ್ದರಿಂದ ಈ ಕೃತ್ಯ ಎಸಗಿದವರು ಯಾರು ಎಂಬುದನ್ನು ಪತ್ತೆ ಹಚ್ಚುವುದು ಸವಾಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಘಟನೆಯನ್ನು ಕಟುವಾಗಿ ಖಂಡಿಸಿರುವ ಖುಲ್ನಾ ಸಿಟಿ ಕಾರ್ಪೊರೇಷನ್ ಆಡಳಿತಾಧಿಕಾರಿ ನಜ್ರುಲ್ ಇಸ್ಲಾಂ ಮಂಜು, ಇದು ಕೃತ್ಯ ಎಸಗಿದವರ ಸಂಕುಚಿತ ಮನಸ್ಥಿತಿ ಮತ್ತು ವಿಕೃತಿಯನ್ನು ತೋರಿಸುತ್ತದೆ ಎಂದಿದ್ದಾರೆ.

ಪ್ರಗತಿಪರ ಸಾಂಸ್ಕೃತಿಕ ಚಿಂತಕರ ಪ್ರಕಾರ ಇದೊಂದು ಸಂಘಟಿತ ಗುಂಪಿನ ಕೃತ್ಯವಾಗಿದ್ದು, ಈ ಹಿಂದೆ ಅಕ್ಟೋಬರ್‌ನಲ್ಲಿ ಢಾಕಾದಲ್ಲೂ ಠಾಗೋರ್ ಭಿತ್ತಿಚಿತ್ರಕ್ಕೆ ಇದೇ ರೀತಿ ಮಸಿ ಬಳಿಯಲಾಗಿತ್ತು.